30 May 2026 Saturday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ವ್ಯಕ್ತಿಯ ವ್ಯಕ್ತಿತ್ವ ಗಡಿಯಾರದಲ್ಲಿಯ ಸಂಖ್ಯೆ ಆಗಬೇಕೇ ವಿನಃ ಕಾಲಕ್ಕೆ ತಕ್ಕಂತೆ ಬದಲಾಗುವ ಮುಳ್ಳಾಗಬಾರದು!

-ಸ್ನೇಹಾ ಆನಂದ್

info.varthaman@gmail.com



ನಾಯಕವಾಡಿಯವರ ಮೂರು ದಶಕದ ಸೇವೆ ಮರೆಯುವಂತಿಲ್ಲ — ಪುಟ ಸಂ. 2



'ಅಂಗಾಂಶ ಕೃಷಿ ಬಾಳೆ ಬೇಸಾಯ'ಕ್ಕೆ ರೈತರು ಮುಂದಾಗಿ — ಪುಟ ಸಂ. 3



ಪಿಎಂ ಸೂರ್ಯ ಘರ್ ಯೋಜನೆ: ಪ್ರಚಾರ ವಾಹನಕ್ಕೆ ಚಾಲನೆ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 184 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ರಾಜ್ಯದಲ್ಲಿ 5 ದಿನ ಮಳೆ ಸಾಧ್ಯತೆ

**ಬೆಂಗಳೂರು:** ರಾಜ್ಯದಾದ್ಯಂತ ಮುಂದಿನ 5 ದಿನ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮೇ 29ರಿಂದ ಜೂನ್ 2ರವರೆಗೆ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ತಿಳಿಸಿದೆ.



ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಮೇ 29ರಂದು ಮಳೆಯಾಗಲಿದೆ. ಕೋಲಾರ, ಹಾಸನ, ಮಂಡ್ಯ, ಮೈಸೂರು, ಚಾಮರಾಜನಗರ, ರಾಮನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಜಿಲ್ಲೆಗಳ ಕೆಲವೆಡೆ ಹಗುರದಿಂದ ಮಳೆ ಅಥವಾ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ.

ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಆರೆಂಜ್ ಅಲರ್ಟ್ ನೀಡಲಾಗಿದೆ. ದಕ್ಷಿಣ ಒಳನಾಡಿನ ಬಳ್ಳಾರಿ, ವಿಜಯನಗರ, ತುಮಕೂರು, ಚಿತ್ರದುರ್ಗ ಜಿಲ್ಲೆಗಳಲ್ಲೂ ಭಾರೀ ಮಳೆಯಾಗುವ ಮುನ್ಸೂಚನೆಯಿದೆ. ದಕ್ಷಿಣ ಒಳನಾಡು ಜಿಲ್ಲೆಗಳ ಕೆಲವೆಡೆ 64.5 ಮಿಮಿ ನಿಂದ 115.5 ಮಿಮಿ ಮಳೆಯಾಗುವ ಸಾಧ್ಯತೆಯಿದೆ ಎಂದರು.

## ಸಿದ್ದು ವಿರುದ್ಧ ಸಹಿ ಸಂಗ್ರಹ ಸುಳ್ಳು ವಿಚಾರ: ಜಾರಕಿಹೊಳಿ

**ಬೆಂಗಳೂರು:** ಸಿದ್ದರಾಮಯ್ಯ ವಿರುದ್ಧ ಸಹಿ ಸಂಗ್ರಹ ಎಂಬುದೆಲ್ಲಾ ಸುಳ್ಳು. ಯಾರೋ ಹಾಕಿರುವ ಪೋಸ್ಟ್‌ಗೆ ಮಹತ್ವ ಕೊಡುವ ಅಗತ್ಯವಿಲ್ಲ. ಯಾರೂ ಯಾವ ಸಹಿಯೂ ಹಾಕಿಲ್ಲ ಎಂದು ಸತೀಶ ಜಾರಕಿಹೊಳಿ ಹೇಳಿದರು.

ಸಿದ್ದರಾಮಯ್ಯ ಆಪ್ತರೇ ಚೂರಿ ಹಾಕಿದರು ಎಂಬ ವಿಚಾರಕ್ಕೆ ಸುದ್ದಿಗಾರರಿಗೆ ಸ್ಪಷ್ಟನೆ ನೀಡಿದ ಅವರು, 37 ಜನರು ಸಿದ್ದರಾಮಯ್ಯ ವಿರುದ್ದ ಸಹಿ ಹಾಕಿದ್ದರೆ ಉಳಿದ 100 ಮಂದಿ ಎಲ್ಲಿಗೆ ಹೋದರು? ಎಂದು ಪ್ರಶ್ನಿಸಿದರು.

ಪೂರ್ವ ಒಪ್ಪಂದದ ಪ್ರಕಾರ ಅವರು ಕೆಳಗೆ ಇಳಿದಿದ್ದಾರೆ. ಯಾವಾಗಲಾದರೂ ಕೆಳಗೆ ಇಳಿಯಲೇಬೇಕು. ಈಗ ಅಥವಾ ಎರಡು ವರ್ಷ ಆದ ಮೇಲೆ. ಹಿಂದೆ ಬಂಗಾರಪ್ಪ, ದೇವರಾಜ್ ಅರಸು ಎಲ್ಲರೂ ಇಳಿದಿದ್ದರು ಎಂದು ಹೇಳಿದರು.

ಸಿದ್ದರಾಮಯ್ಯ ಕೆಳಗಿಳಿಯಲೇಬೇಕಿತ್ತು. ನಾಯಕತ್ವ ವಿಚಾರ ದೆಹಲಿಯಲ್ಲಿ ಎಲ್ಲ ಮಾತುಕತೆ ಆಗಿರುವುದು. ಅವರು ಮಾತನಾಡುವಾಗ ಬೆಂಗಳೂರಲ್ಲಿ ಏನೂ ಆಗಿಲ್ಲ. ನಮ್ಮನ್ನು ಯಾರೂ ಆಗಲೂ ಕೇಳಿರಲಿಲ್ಲ. ಎಲ್ಲ ಅವರೇ ನಿರ್ಧಾರ ಮಾಡಿಕೊಂಡ ಪ್ರಕಾರ ಸಿದ್ದರಾಮಯ್ಯ ಕೆಳಗೆ



ಪುಟ 2ಕ್ಕೆ

## ಪ್ರಮಾಣ ವಚನ ಸಮಯ ನಿರ್ಧಾರ ಆಗಿಲ್ಲ : ಡಿ.ಕೆ.ಶಿವಕುಮಾರ್

**ನವದೆಹಲಿ:** ಮೂರು ದಿನಗಳಿಂದಲೂ ಮೌನವಾಗಿದ್ದ ಡಿ.ಕೆ.ಶಿವಕುಮಾರ್ ಶುಕ್ರವಾರ ಮೊದಲ ಬಾರಿಗೆ ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದಾರೆ.

ಹೈಕಮಾಂಡ್ ನಾಯಕರನ್ನು ಭೇಟಿಯಾದ ಬಳಿಕ ಮಾತನಾಡಿದ ಅವರು, ನಾಳೆ ಸಂಜೆ ಬೆಂಗಳೂರಿನಲ್ಲಿ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ.



ಮೊದಲಿಗೆ ಶಾಸಕಾಂಗ ಪಕ್ಷದ ನಾಯಕರನ್ನು ಆಯ್ಕೆ ಮಾಡುವ ಪ್ರಕ್ರಿಯೆ ಪೂರ್ಣಗೊಳ್ಳಬೇಕು. ನಂತರವಷ್ಟೇ ಉಳಿದ ವಿಷಯಗಳ ಬಗ್ಗೆ ಚರ್ಚಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು. ಪ್ರಮಾಣ ವಚನ ಸ್ವೀಕಾರದ ದಿನಾಂಕ ಅಥವಾ ಸಚಿವ ಸಂಪುಟ ರಚನೆಯ ಕುರಿತು ಪ್ರಸ್ತುತ ಯಾವುದೇ ಮಾಹಿತಿಯನ್ನು ಅವರು ಬಹಿ ರಂಗಪಡಿಸಿಲ್ಲ. ಎಲ್ಲವನ್ನೂ ಹಂತ ಹಂತವಾಗಿ ನಡೆಸಲಾಗುವುದು ಎಂದು ಅವರು ತಿಳಿಸಿದರು. ಡಿಕೆ ಶಿವಕುಮಾರ್ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು

ಪುಟ 2ಕ್ಕೆ

## ಮಾಜಿ ಸಚಿವ ವೆಂಕಟರಮಣಪ್ಪ ನಿಧನ

**ತುಮಕೂರು:** ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಮಾಜಿ ಸಚಿವ ವೆಂಕಟರಮಣಪ್ಪ (80) ಶುಕ್ರವಾರ ಮುಂಜಾನೆ ಹೃದಯಾಘಾತದಿಂದ ನಿಧನರಾದರು.



ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಶುಕ್ರವಾರ ಬೆಳಗ್ಗೆ 6 ಗಂಟೆ ಸುಮಾರಿಗೆ ಕೊನೆಯುಸಿರೆಳೆದರು. ಅನಾರೋಗ್ಯಕ್ಕೀಡಾಗಿದ್ದ ವೆಂಕಟರಮಣಪ್ಪ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಪುತ್ರ ಶಾಸಕ ಎಚ್.ವಿ ವೆಂಕಟೇಶ್, ಕುಮಾರಸ್ವಾಮಿ, ಪುತ್ರಿ ಪದ್ಮಾವತಿ ಅವರನ್ನು ಅಗಲಿದ್ದಾರೆ.

ವೆಂಕಟರಮಣಪ್ಪ ಅವರು 2008ರ ಅವಧಿಯಲ್ಲಿ ರೇಷ್ಮೆ ಮತ್ತು ಸಣ್ಣ ಕೈಗಾರಿಕಾ ಸಚಿವರಾಗಿ, 2018ರಲ್ಲಿ ಕಾರ್ಮಿಕ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು. ಒಟ್ಟು ನಾಲ್ಕು ಬಾರಿ ಶಾಸಕರಾಗಿದ್ದರು.

# ಇಂದು ನೂತನ ಸಾರಥಿ ಆಯ್ಕೆ

## ಶಾಸಕಾಂಗ ಪಕ್ಷದ ಸಭೆಯಲ್ಲಿ ಹೊಸ ನಾಯಕನ ಆಯ್ಕೆ ಪ್ರಕ್ರಿಯೆ

**ಬೆಂಗಳೂರು:** ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ನೀಡಿದ್ದ ರಾಜೀನಾಮೆ ಅಂಗೀಕಾರಗೊಂಡ ಬೆನ್ನಲ್ಲೇ ಹೊಸ ಮುಖ್ಯಮಂತ್ರಿ ಆಯ್ಕೆಗೆ ಕಾಂಗ್ರೆಸ್‌ನಲ್ಲಿ ಚಟುವಟಿಕೆ ಬಿರುಸುಗೊಂಡಿದೆ.

ಸಿದ್ದರಾಮಯ್ಯ ಅವರು ಗುರುವಾರ ರಾಜೀನಾಮೆ ಸಲ್ಲಿಸಿದ್ದರು. ರಾಜೀನಾಮೆ ಪತ್ರವನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಅಂಗೀಕರಿಸಿ ಸಚಿವ ಸಂಪುಟವನ್ನು ವಿಸರ್ಜನೆ ಮಾಡಿದ್ದಾರೆ. ನೂತನ ಸರ್ಕಾರ, ಸಂಪುಟ ರಚನೆಯ ಪ್ರಕ್ರಿಯೆಯ ಭಾಗವಾಗಿ ಶಾಸಕಾಂಗ ಸಭೆ ಯನ್ನು ಶನಿವಾರ (ಮೇ 30ರಂದು) ಸಂಜೆ 4 ಗಂಟೆಗೆ ನಿಗದಿ ಮಾಡಲಾಗಿದೆ. ಸಭೆಯಲ್ಲಿ ಪಕ್ಷದ ಶಾಸಕಾಂಗ ನಾಯಕನನ್ನು ಆಯ್ಕೆ ಮಾಡಲಾಗುತ್ತದೆ. ಬಳಿಕ ಸರ್ಕಾರ ರಚನೆಗೆ ರಾಜ್ಯಪಾಲರ ಬಳಿ ಹಕ್ಕು ಮಂಡಿಸಲಾಗುತ್ತದೆ. ಸಿದ್ದರಾಮಯ್ಯ ನೇತೃತ್ವದಲ್ಲಿ ಶನಿವಾರ ಸಂಜೆ ವಿಧಾನಸೌಧದ 3ನೇ ಮಹಡಿಯ ಸಮ್ಮೇಳನ ಸಭಾಂಗಣದಲ್ಲಿ ಶಾಸಕಾಂಗ ಪಕ್ಷದ ಸಭೆ ನಿಗದಿಯಾಗಿದೆ. ಕಾಂಗ್ರೆಸ್ ತನ್ನ ಎಲ್ಲಾ ಶಾಸ ಕರಿಗೆ ಸಭೆಯಲ್ಲಿ ಭಾಗವಹಿಸುವಂತೆ ಸೂಚನೆ ನೀಡಲಾಗಿದೆ.

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೇವಾಲಾ, ವಿಧಾನ ಪರಿಷತ್ ಸಭಾನಾಯಕ ಎನ್.ಎಸ್. ಭೋಸರಾಜು ಭಾಗವಹಿಸಲಿದ್ದಾರೆ. ನೂತನ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರ ಪಟ್ಟಾಭಿಷೇಕಕ್ಕೆ ಸಕಲ ಸಿದ್ದತೆ ನಡೆಯುತ್ತಿದೆ.



### ದೆಹಲಿಯಲ್ಲಿ ಭೋಜನ: ಸಿದ್ದು–ಡಿಕೆಶಿ ಚರ್ಚೆ

**ನವದೆಹಲಿ:** ಹೊಸ ಸರ್ಕಾರ ರಚನೆ ಕುರಿತು ಚರ್ಚಿಸಲು ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಹಿರಿಯ ನಾಯಕ ಕೆ.ಜೆ.ಜಾರ್ಜ್ ಸೇರಿದಂತೆ ಕಾಂಗ್ರೆಸ್‌ನ ಹಿರಿಯ ನಾಯಕರ ಉನ್ನತ ಮಟ್ಟದ ಸಭೆ ಶುಕ್ರವಾರ ದೆಹಲಿಯಲ್ಲಿ ನಡೆಯಿತು.

ಇದಕ್ಕೂ ಮೊದಲು, ಡಿ.

### ಸಿಎಲ್‌ಪಿ ಸಭೆ: ಶಾಸಕರು ದೆಹಲಿಗೆ ಬರಬೇಡಿ–ಡಿಕೆಶಿ

**ಬೆಂಗಳೂರು:** ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಶನಿವಾರ ನಡೆಯಲಿದೆ. ನಾಳೆ ಸಿಎಲ್‌ಪಿ ಸಭೆ ಕರೆದಿದ್ದೇವೆ. ಯಾವುದೇ ಶಾಸಕರು ದೆಹಲಿಗೆ ಬರಬೇಡಿ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.



ನಾಳೆ ಹೈಕಮಾಂಡ್ ನಾಯಕರು ವೀಕ್ಷಕರಾಗಿ ಬರಲಿದ್ದಾರೆ. ಈ ಬಗ್ಗೆ ನಾವು ನಿರ್ಗಮಿತ ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಚರ್ಚೆ ಮಾಡಿದ್ದೇವೆ. ಸಿಎಲ್‌ಪಿ ಬಳಿಕ ಪ್ರಮಾಣ ವಚನಕ್ಕೆ ದಿನ ನಿಗದಿಯಾಗಲಿದೆ ಎಂದು ಅವರು ಖಚಿತಪಡಿಸಿದ್ದಾರೆ.

ಹೈಕಮಾಂಡ್ ತೀರ್ಮಾನಕ್ಕೆ ಬದ್ಧನಾಗಿದ್ದೇನೆ ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಸ್ವ ಇಚ್ಛೆಯಿಂದ ರಾಜ್ಯ ರಾಜಕೀಯಕ್ಕೆ ಬಂದಿಲ್ಲ. ಏಳುಸಲ ಸಂಸದ, ಕೇಂದ್ರ ಸಚಿವನಾಗಿದ್ದೆ. ನನ್ನ ಹಿರಿತನದ ಮೇಲೆ ಹೈಕಮಾಂಡ್ ತೀರ್ಮಾನ ಮಾಡಲಿದೆ ಎಂದರು.

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆದು ಅಧಿಕೃತವಾಗಿ ಶಿವಕುಮಾರ್ ಅವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡುವುದು ಬಹುತೇಕ ಖಚಿತವಾಗಿದೆ.

ಈಗಾಗಲೇ, ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಶಿವಕುಮಾರ್ ಅವರು ಪ್ರತ್ಯೇಕವಾಗಿ ದೆಹಲಿಗೆ ಪ್ರಯಾಣ ಬೆಳೆಸಿದ್ದಾರೆ. ಮುಖ್ಯಮಂತ್ರಿಯಾಗಿ ಅವಕಾಶ ನೀಡಿದ ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿರವ ಸಿದ್ದರಾಮಯ್ಯ ಕೃತಜ್ಞತೆ ಅರ್ಪಿಸಿದ್ದಾರೆ. ಎಲ್ಲವೂ ಅಂದುಕೊಂಡಂತೆ

ಪುಟ 2ಕ್ಕೆ



## ಸಿದ್ದು ರಾಜೀನಾಮೆ ಅಂಗೀಕಾರ: ಸಚಿವ ಸಂಪುಟ ವಿಸರ್ಜನೆ

**ಬೆಂಗಳೂರು:** ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ಸಲ್ಲಿಸಿದ್ದ ರಾಜೀನಾಮೆಯನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಶುಕ್ರವಾರ ಅಂಗೀಕರಿಸಿದ್ದಾರೆ. ಸಚಿವ ಸಂಪುಟವನ್ನು ರಾಜ್ಯಪಾಲರು ವಿಸರ್ಜನೆ ಮಾಡಿದ್ದಾರೆ.

ಸಂವಿಧಾನಬದ್ಧವಾಗಿ ರಾಜೀನಾಮೆ ಪತ್ರವನ್ನು ಅಂಗೀಕರಿಸಿದ್ದಾರೆ. ಈ ಬಗ್ಗೆ ಲೋಕ ಭವನದಿಂದ ಅಧಿಕೃತ ಆದೇಶ ಹೊರಡಿಸಲಾಗಿದೆ. ಹೊಸ ಸರ್ಕಾರ ರಚನೆಯಾಗುವವರೆಗೆ ಇನ್ನೂ 2–3 ದಿನಗಳ ಕಾಲ ಸಿದ್ದರಾಮಯ್ಯ ಹಂಗಾಮಿ ಸಿಎಂ ಆಗಿ ಮುಂದುವರಿಯಲಿದ್ದಾರೆ.

ರಾಜ್ಯಪಾಲರು ರಾಜಧಾನಿಯಲ್ಲಿ

ಪುಟ 2ಕ್ಕೆ

## ಡಿಕೆಶಿಗೆ 8 ವರ್ಷ ರಾಜಯೋಗ: ಭವಿಷ್ಯ

**ಬೆಂಗಳೂರು:** ಡಿ.ಕೆ.ಶಿವಕುಮಾರ್ ಅವರನ್ನು 8 ವರ್ಷಗಳ ಕಾಲ ಅಧಿಕಾರದಿಂದ ಯಾರಿಂದಲೂ ಅಲ್ಲಾಡಿಸಲು ಸಾಧ್ಯವಿಲ್ಲ ಎಂದು ದ್ವಾರಕನಾಥ್ ಗುರೂಜಿ ಭರ್ಜರಿ ಭವಿಷ್ಯ ನುಡಿದಿದ್ದಾರೆ.

ಸಿದ್ದರಾಮಯ್ಯಗೆ ರಾಜಯೋಗ ಮುಗಿದಿದೆ. ಡಿ.ಕೆ.ಶಿವಕುಮಾರ್ ಅವರಿಗೆ ಈಗ ಸುವರ್ಣ ಸಮಯ ಆರಂಭವಾಗಿದೆ. ಗುರು ಮಿಥುನ ರಾಶಿಯಲ್ಲಿರುವುದು ಡಿ.ಕೆ.ಗೆ

ಪುಟ 2ಕ್ಕೆ

## ಭೀಮಾ ತೀರದಲ್ಲಿ ಹರಿದ ನೆತ್ತರು: 6 ಮಂದಿ ಕೊಲೆ

**ವಿಜಯಪುರ:** ಭೀಮಾ ತೀರದಲ್ಲಿ ಮತ್ತೆ ನೆತ್ತರು ಹರಿದಿದೆ. ಆಸ್ತಿ ವಿವಾದದ ಹಿನ್ನೆಲೆಯಲ್ಲಿ 6 ಜನರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಹಾಗೂ ಗುಂಡು ಹಾರಿಸಿ ಭೀಕರವಾಗಿ ಹತ್ಯೆ ಮಾಡಲಾಗಿದೆ.

ಭೀಮ ತೀರದ ಚಡಚಣ ತಾಲೂಕಿನ ಗೋವಿಂದಪುರ ಗ್ರಾಮದಲ್ಲಿ ಈ ಭೀಕರ ಕೊಲೆಗಳು ನಡೆದಿದೆ. ನಿರಾಳೆ ಹಾಗೂ

ಪುಟ 2ಕ್ಕೆ

## ಅಧಿಕಾರ ತ್ಯಾಗ ಮಾಡಲಿ: ತನ್ವೀರ್ ಸೇಠ್ ಒತ್ತಾಯ

**ಮೈಸೂರು:** ಸಿದ್ದರಾಮಯ್ಯ ಸಂಪುಟದಲ್ಲಿ ಸಚಿವರಾಗಿದ್ದವರು ಈಗ ಅಧಿಕಾರ ತ್ಯಾಗದ ಮನಸ್ಸು ಮಾಡಲಿ ಎಂದು ಶಾಸಕ ತನ್ವೀರ್ ಸೇಠ್ ಒತ್ತಾಯಿಸಿದರು.



ಮೈಸೂರಿನಲ್ಲಿ ಮಾತನಾಡಿದ ತನ್ವೀರ್ ಸೇಠ್, ಹೊಸಬರಿಗೆ ಅಧಿಕಾರ ಸಿಗುವಂತೆ ಆಗಲಿ. ನನಗೆ ಈ ಬಾರಿ ಸಚಿವ ಸ್ಥಾನ ಸಿಗುವ ಸಾಧ್ಯತೆ ಇದೆ. ಕಳೆದ ಬಾರಿ ನನಗೆ ಸಚಿವ ಸ್ಥಾನ ಸಿಗಬೇಕಿತ್ತು. ಕಾರಣಾಂತರದಿಂದ ಸಿಕ್ಕಿರಲಿಲ್ಲ. ಈಗ ಮತ್ತೆ ಸಚಿವ ಆಗುವ ಅವಕಾಶ ಬಂದಿದೆ. ವರಿಷ್ಠರು ನನ್ನನ್ನು ಪರಿಗಣಿಸುತ್ತಾರೆ ಎಂಬ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ.

## ಅಪಘಾತ: ಐವರು ಸಾವು





**ಚಿತ್ರದುರ್ಗ:** ಚಾಲನೆಯಲ್ಲಿದ್ದಾಗ ಕಾರಿನ ಟೈಯರ್ ಸ್ಫೋಟಗೊಂಡು ಲಾರಿಗೆ ಡಿಕ್ಕಿಯಾದ ಪರಿಣಾಮ ಐವರು ಸಾವನ್ನಪ್ಪಿರುವ ಘಟನೆ ಮೊಳಕಾಲ್ಮೂರು ತಾಲೂಕಿನ ತುಮಕೂರ್ಲಹಳ್ಳಿ ಗೇಟ್ ಬಳಿ ನಡೆದಿದೆ.

ಚಳ್ಳಕೆರೆಯವರಾದ ಛಾಯಾಗ್ರಾಹಕ ರಾಘವೇಂದ್ರ, ರುದ್ರೇಶ್, ಸೋಮ, ಮಲ್ಲಿಕಾರ್ಜುನ, ಪ್ರಮೋದ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬಳ್ಳಾರಿಯಿಂದ ಚಳ್ಳಕೆರೆಗೆ ಆಗಮಿಸುತ್ತಿದ್ದ ಸಂದರ್ಭ ಕಾರಿನ ಟೈಯರ್ ಸ್ಫೋಟಗೊಂಡ ಪರಿಣಾಮ ಚಾಲಕನ ನಿಯಂತ್ರಣ ತಪ್ಪಿದ ಕಾರು ರಸ್ತೆ ಬದಿ ನಿಂತಿದ್ದ ಲಾರಿಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಕಾರಿನಲ್ಲಿದ್ದ 5ಜನ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

## 20 ಸಚಿವರಿಗೆ ಕೊಕ್: ಹೊಸಬರಿಗೆ ಮಣೆ


### ಆಪ್ತರಿಗೆ ಹೆಚ್ಚು ಅವಕಾಶ ನೀಡುವಂತೆ ಸಿದ್ದರಾಮಯ್ಯ ಶಿಫಾರಸು

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟದಲ್ಲಿದ್ದ ಸುಮಾರು 20 ಸಚಿವರು ಡಿ.ಕೆ.ಶಿವಕುಮಾರ್ ಸಂಪುಟದಲ್ಲಿ ಸ್ಥಾನ ಕಳೆದುಕೊಳ್ಳುವ ಮುನ್ಸೂಚನೆ ಸಿಕ್ಕಿದೆ.

ಸಿದ್ದರಾಮಯ್ಯ ಕ್ಯಾಬಿನೆಟ್‌ನಲ್ಲಿದ್ದ ಕೇವಲ 10ರಿಂದ 12 ಸಚಿವರಿಗಷ್ಟೇ ಈ ಬಾರಿ ಅದೃಷ್ಟ ಒಲಿಯಲಿದೆ. ಉಳಿದವರಿಗೆ ಕೊಕ್ ನೀಡಲು ಹೈಕಮಾಂಡ್ ಗಂಭೀರ ಚಿಂತನೆ ನಡೆಸಿದೆ. ಇದರಲ್ಲಿ ಪ್ರಮುಖವಾಗಿ ಬೆಂಗಳೂರು ಭಾಗದ ಮೂವರು ಪ್ರಭಾವಿ ಸಚಿವರಿಗೆ ಮಂತ್ರಿಗಿರಿ ಕೈತಪ್ಪುವ ಸಾಧ್ಯತೆ ದಟ್ಟವಾಗಿದೆ ಎನ್ನಲಾಗಿದೆ.

ತಮ್ಮ ಆಪ್ತ ನಾಯಕರಿಗೆ ಸಚಿವ ಸ್ಥಾನ ಕೈತಪ್ಪುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಲರ್ಟ್ ಆಗಿದ್ದಾರೆ. ತಮ್ಮ ಬೆಂಬಲಿಗರಲ್ಲಿ ಕನಿಷ್ಠ 6ರಿಂದ 7 ಜನರಿಗಾದರೂ ಸಂಪುಟದಲ್ಲಿ ಅವಕಾಶ ನೀಡಬೇಕು ಎಂದು ಸಿದ್ದರಾಮಯ್ಯ ಹೈಕಮಾಂಡ್ ನಾಯಕರ ಮುಂದೆ ಬಿಗಿ ಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ.

ಈ ಬಾರಿಯ ನೂತನ ಕ್ಯಾಬಿನೆಟ್ ಕೇವಲ ಪ್ರಭಾವದ ಆಧಾರದ ಮೇಲಲ್ಲ, ಬದಲಿಗೆ ಮೂರು ಪ್ರಮುಖ ಫಾರ್ಮುಲಾಗಳ ಅಡಿಯಲ್ಲಿ ರಚನೆಯಾಗಲಿದೆ. ಸಿದ್ದರಾಮಯ್ಯ ಬೆಂಬಲಿಗರು, ಡಿ.ಕೆ.ಶಿವಕುಮಾರ್ ಆಪ್ತರು, ಹೈಕಮಾಂಡ್ ಒಲವುಳ್ಳ ನಾಯಕರ (ದೆಹಲಿ ನಾಯಕರ ನೇರ ಆಯ್ಕೆ) ಶಿಫಾರಸು ಅಡಿ ಆಯ್ಕೆಯಾಗಲಿದೆ.



ಈ ಮೂರು ಸೂತ್ರಗಳ ಪೈಕಿ ಹೈಕಮಾಂಡ್ ಕಡೆಯಿಂದಲೇ ನೇರವಾಗಿ ಸುಮಾರು 20 ನಾಯಕರಿಗೆ ಮಂತ್ರಿಗಿರಿ ಸಿಗುವ ಸಾಧ್ಯತೆಯಿದೆ. ಭವಿಷ್ಯದಲ್ಲಿ ರಾಜ್ಯದಲ್ಲಿ ಪಕ್ಷ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಮತ್ತು ಯುವ ನಾಯಕತ್ವವನ್ನು ಮುಂಚೂಣಿಗೆ ತರುವ ದೃಷ್ಟಿಯಿಂದ ಹೈಕಮಾಂಡ್ ಈ ಬಾರಿ ಹೊಸ ಮುಖಗಳಿಗೆ ಹೆಚ್ಚಿನ ಮಣೆ ಹಾಕಲು ನಿರ್ಧರಿಸಿದೆ ಎನ್ನಲಾಗಿದೆ.

ಹಲವು ಸಚಿವರ ತಲೆದಂಡದ ಭೀತಿ ನಡುವೆಯೂ, ತಮ್ಮ ಉತ್ತಮ ಕಾರ್ಯಕ್ಷಮತೆ ಆಧಾರದ ಮೇಲೆ ಕೆಲವರು ಈ ಬಾರಿಯೂ ಮಂತ್ರಿ ಸ್ಥಾನ

ಪುಟ 2ಕ್ಕೆ

## ರಾಹುಲ್, ಖರ್ಗೆ ಭೇಟಿ, ಚರ್ಚೆ

### ಪುತ್ರ ಯತೀಂದ್ರ ಪರಿಚಯ | ಸಚಿವ ಸ್ಥಾನಕ್ಕೆ ಬೇಡಿಕೆ

**ನವದೆಹಲಿ:** ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ದೆಹಲಿಯಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಚರ್ಚಿಸಿದರು.

ಇದೇ ವೇಳೆ ಪುತ್ರ ಯತೀಂದ್ರ ಅವರನ್ನು ಜೊತೆಗೆ ಕರೆದೊಯ್ದ ಅವರು, ರಾಹುಲ್ ಗಾಂಧಿಗೆ ಪರಿಚಯ ಮಾಡಿಕೊಟ್ಟು ಹೊಸ ಸಂಪುಟದಲ್ಲಿ ಅವಕಾಶ ಕಲ್ಪಿಸಲು ಪ್ರಯತ್ನ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಈ ಭೇಟಿ ವೇಳೆ ನಿರ್ಗಮಿತ ಸಚಿವ ಕೆ.ಜೆ.ಜಾರ್ಜ್ ಸಹ ಇದ್ದರು. ತಮ್ಮ ಆಪ್ತರಿಗೂ ಸಂಪುಟದಲ್ಲಿ ಅವಕಾಶ ನೀಡುವಂತೆ ಸಿದ್ದರಾಮಯ್ಯ ಮನವಿ ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಅದೊಂದು ಉತ್ತಮ ಭೇಟಿಯಾಗಿತ್ತು. ರಾಜಕೀಯದ ಹಲವು ವಿಷಯಗಳ ಬಗ್ಗೆ ಚರ್ಚಿಸಿದ್ದಾರೆ. ಈ ಬಗ್ಗೆ ಹೇಳಲು ಹೆಚ್ಚು ಏನೂ ಇಲ್ಲ ಎಂದು ಸಿದ್ದರಾಮಯ್ಯ ಮತ್ತು ರಾಹುಲ್ ಭೇಟಿ ಬಳಿಕ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೇವಾಲಾ ಪ್ರತಿಕ್ರಿಯಿಸಿದ್ದಾರೆ.



ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಸಿದ್ದರಾಮಯ್ಯ ಅವರಿಗೆ ಮಂಗಳವಾರ ಸೂಚಿಸಿದ್ದ ರಾಹುಲ್ ಗಾಂಧಿ, ಹೊಸ ಸರ್ಕಾರದಲ್ಲಿ ಮಗನಿಗೆ ಅವಕಾಶ ಕಲ್ಪಿಸುವುದಾಗಿ ಭರವಸೆ ನೀಡಿದ್ದರು ಎನ್ನಲಾಗಿದೆ.

# ಕೆಪಿಸಿಸಿ ಸಾರಥ್ಯದ ಮಾತು ಉಹಾಪೋಹಾ

## ಹೈಕಮಾಂಡ್ ಜೊತೆ ಚರ್ಚಿಸಿ ನಿರ್ಧಾರ: ಸತೀಶ್ ಜಾರಕಿಹೊಳಿ

**ಬೆಂಗಳೂರು:** ನಿರ್ಗಮಿತ ಸಚಿವ ಸತೀಶ್ ಜಾರಕಿಹೊಳಿ ಕೆಪಿಸಿಸಿ ಅಧ್ಯಕ್ಷರಾಗಿ ನೇಮಕ ಆಗಲಿದ್ದಾರೆ ಎಂಬ ಮಾತನ್ನು ಊಹಾಪೋಹ ಎಂದು ಸತೀಶ್ ಅವರು ತಳ್ಳಿಹಾಕಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪಕ್ಷದ ಹೈಕಮಾಂಡ್ ಜೊತೆ ಚರ್ಚಿಸಿ ದೆಹಲಿಯಿಂದ ಹಿಂದಿರುಗಿದ ನಂತರವೇ ಅಂತಿಮ ನಿರ್ಧಾರ ಹೊರಬೀಳಲಿದೆ ಎಂದು ಅವರು ತಿಳಿಸಿದರು.

ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಸೇರಿದಂತೆ ಹಿರಿಯ ನಾಯಕರೊಂದಿಗೆ ಸಮಾಲೋಚನೆ ನಡೆಸಿದ ನಂತರ ಪಕ್ಷದ ನಾಯಕರು ಅಂತಿಮ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದು ತಿಳಿಸಿದರು.

ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ದೆಹಲಿಗೆ ಹೋಗಿದ್ದಾರೆ. ಅವರು ವರಿಷ್ಠರೊಂದಿಗೆ ಚರ್ಚೆ ನಡೆಸಲಿದ್ದಾರೆ. ಏನೇ ನಿರ್ಧಾರ ತೆಗೆದುಕೊಂಡರೂ ನಾನು ಸ್ವೀಕರಿಸುತ್ತೇನೆ. ಸಿದ್ದರಾಮ್ಯ ದೆಹಲಿಯಿಂದ ವಾಪಾಸ್ಸಾದ ನಂತರ ಸೋ ಮಾತುಕತೆಯ ಸಮಯದಲ್ಲಿ ಏನಾಯಿತು ಎಂಬ ಕುರಿತು ಚರ್ಚಿಸುತ್ತೇವೆ. ನಂತರ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ ಎಂದು ಜಾರಕಿಹೊಳಿ ಹೇಳಿದರು.



ತಾವು ಸಚಿವ ಸ್ಥಾನದ ಆಕಾಂಕ್ಷಿಯಲ್ಲ ಎಂದು ಸ್ಪಷ್ಟಪಡಿಸಿದ ಅವರು, ಸಂಪುಟ ರಚನೆಯ ಕುರಿತು ಚರ್ಚೆಗಳು ಇನ್ನೂ ಆರಂಭವಾಗಿಲ್ಲ. ಚರ್ಚೆಗಳು ನಡೆದಾಗ, ಈ ವಿಷಯದ ಬಗ್ಗೆ ಅಭಿಪ್ರಾಯವನ್ನು ಹಂಚಿಕೊಳ್ಳುತ್ತೇವೆ ಎಂದು ಅವರು ತಿಳಿಸಿದರು.

ಹೊಸ ಸರ್ಕಾರದ ಸಂಭಾವ್ಯ ಸಂಪುಟ ರಚನೆ, ಉಪಮುಖ್ಯಮಂತ್ರಿಗಳ ಸಂಖ್ಯೆಯ ಬಗ್ಗೆ ಇನ್ನೂ ಸ್ಪಷ್ಟತೆ ಇಲ್ಲ. ಶನಿವಾರ ಸಂಜೆಯ ವೇಳೆಗೆ ಚಿತ್ರಣ ಸ್ಪಷ್ಟವಾಗುತ್ತದೆ. ಎಷ್ಟು ಡಿಸಿಎಂ ನೇಮಿಸಲಾಗುತ್ತದೆಯೋ ಇಲ್ಲವೋ ಎಂಬುದು ನನಗೆ ತಿಳಿದಿಲ್ಲ. ಸಿದ್ಧತೆಗಳು ಸರಳವಾಗಿರುತ್ತವೆ. ಸೋಮವಾರದ ಒಳಗೆ ಪೂರ್ಣಗೊಳ್ಳುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದರು.

# ದೇವರು ವರ, ಶಾಪ ಕೊಡಲ್ಲ

## ಸಿದ್ದರಾಮಯ್ಯ ಗುಣಗಾನ ಮಾಡಿದ ಡಿ.ಕೆ.ಶಿವಕುಮಾರ್

**ಬೆಂಗಳೂರು:** ದೇವರು ವರವನ್ನೂ ಕೊಡಲ್ಲ, ಶಾಪನೂ ಕೊಡಲ್ಲ. ಅವಕಾಶ ಮಾತ್ರ ಕೊಡುತ್ತಾನೆ. ಕೊಟ್ಟಿರುವ ಅವಕಾಶದಲ್ಲಿ ನಾವು ಏನು ಸಾಧನೆ ಮಾಡುತ್ತೇವೆ ಎಂಬುದು ಮುಖ್ಯ. ಇದಕ್ಕೆ ಅತ್ಯುತ್ತಮ ಉದಾಹರಣೆಯೇ ಸಿದ್ದರಾಮಯ್ಯನವರು ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಭಾವುಕ ಸಂದೇಶ ಹಂಚಿಕೊಂಡಿದ್ದಾರೆ.

ಸಿಎಂ ಸಿದ್ದರಾಮಯ್ಯ ರಾಜೀನಾಮೆ ಅಂಗೀಕಾರವಾದ ಬೆನ್ನಲ್ಲೆ ಎಕ್ಸ್‌ನಲ್ಲಿ ಸುದೀರ್ಘ ಸಂದೇಶ ಹಂಚಿಕೊಂಡಿರುವ ಅವರು ಸಿದ್ದರಾಮಯ್ಯ ಅವರ ಗುಣಗಾನ ಮಾಡಿದ್ದಾರೆ. ಅಲ್ಲದೆ, ಸಿದ್ದು ಹಾಗೂ ತಮ್ಮ ನಡುವಿನ ಬಾಂಧವ್ಯಕ್ಕೆ ಸಾಕ್ಷಿಯಾಗುವ ವಿಶೇಷ ವಿಡಿಯೋವನ್ನೂ ಹಂಚಿಕೊಂಡಿದ್ದಾರೆ.

**ಡಿಕೆಶಿ ಸಂದೇಶದಲ್ಲಿ ಏನಿದೆ?:** ಮೈಸೂರು ಜಿಲ್ಲೆಯ ಹಳ್ಳಿಯೊಂದರಲ್ಲಿ ಹುಟ್ಟಿ, ಬೆಳೆದು, ಹೋರಾಟದ ಮೂಲಕ ರಾಜಕೀಯಕ್ಕೆ ಬಂದು, ಸಾಮಾಜಿಕ ನ್ಯಾಯದ ಹರಿಕಾರ ಹಾಗೂ ಬಡವರ ಬಂಧುವಾಗಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ನನ್ನ ಆತ್ಮೀಯರಾದ ಸಿದ್ದರಾಮಯ್ಯ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಅತ್ಯಂತ ಯಶಸ್ವಿ, ಪ್ರಭಾವಶಾಲಿ ಹಾಗೂ ದೀರ್ಘಾವಧಿ ಮುಖ್ಯಮಂತ್ರಿಯಾಗಿ ಜನಮಾನಸದಲ್ಲಿ ನೆಲೆಸಿರುವ ಅವರು, ಭಾರತೀಯ ರಾಜಕಾರಣದ ಧೀಮಂತ ನಾಯಕ.



ಜನಪರ ಯೋಜನೆಗಳಿಂದ ಹಿಡಿದು ರಾಜ್ಯದಲ್ಲಿ ವಿವಿಧ ಕ್ಷೇತ್ರಗಳ ಅಭಿವೃದ್ಧಿಗೆ ಅವರು ನೀಡಿದ ಕೊಡುಗೆ ಅವಿಸ್ಮರಣೀಯ. ಸುಮಾರು ಐವತ್ತು ವರ್ಷಗಳ ಅವರ ಅಗಾಧ ರಾಜಕೀಯ ಅನುಭವ, ಸಾಮಾಜಿಕ ಕಳಕಳಿ ಮತ್ತು ಜನಪರ ಯೋಜನೆಗಳು ಸದಾ ಸ್ಮರಣೀಯ. 2020ರಲ್ಲಿ ನಾನು ಕೆಪಿಸಿಸಿ ಅಧ್ಯಕ್ಷನಾಗಿ ಆಯ್ಕೆಯಾದ ದಿನದಿಂದ ಇಂದಿನವರೆಗೆ, ಸಿದ್ದರಾಮಯ್ಯನವರು ನನ್ನ ಹೆಗಲಿಗೆ ಹೆಗಲು ಕೊಟ್ಟು ಪಕ್ಷ ಸಂಘಟನೆಯಲ್ಲಿ ಜೊತೆಯಾಗಿ ನಿಂತಿದ್ದಾರೆ.

ಅವರ ಆಡಳಿತದಲ್ಲಿ ನಾನು ಸಚಿವನಾಗಿ, ಉಪಮುಖ್ಯಮಂತ್ರಿಯಾಗಿ

ಪುಟ 2ಕ್ಕೆ

## ಮೊದಲ ಪುಟದಿಂದ

### ದೇವರು ವರ, ಶಾಪ ಕೊಡಲ್ಲ

ಮಾರ್ಗದರ್ಶನ ಪಡೆದುಕೊಂಡಿದ್ದು ನನ್ನ ಭಾಗ್ಯ. ಮುಂದಿನ ದಿನಗಳಲ್ಲೂ ರಾಜ್ಯದ ಹಿತದೃಷ್ಟಿಯಿಂದ ಹಾಗೂ ನಮ್ಮ ಪಕ್ಷದ ಬಲವರ್ಧನೆಗೆ ಅವರ ಮಾರ್ಗದರ್ಶನ, ಅನುಭವ ನಮಗೆ ಹೀಗೆಯೇ ಮುಂದುವರಿಯಲಿ ಎಂದು ಆಶಿಸುತ್ತೇನೆ ಎಂದಿದ್ದಾರೆ.

### ಪ್ರಮಾಣ ವಚನ ಸಮಯ ನಿರ್ಧಾರ ಆಗಿಲ್ಲ: ಡಿಕೆಶಿ

ಭೇಟಿಯಾಗಿ ಸರ್ಕಾರ ರಚನೆಯ ಬಗ್ಗೆ ಚರ್ಚೆ ನಡೆಸಿದರು. ಈ ಸಂದರ್ಭದಲ್ಲಿ ಖರ್ಗೆ ಅವರ ಕಾಲಿಗೆ ಬಿದ್ದು ಆಶೀರ್ವಾದ ಪಡೆದುಕೊಂಡರು.

### ಸಿದ್ದು ವಿರುದ್ಧ ಸಹಿ ಸಂಗ್ರಹ ಸುಳ್ಳು ವಿಚಾರ: ಜಾರಕಿಹೊಳಿ

ಇಳಿದಿದ್ದಾರೆ. ಇನ್ನು ಎರಡು ವರ್ಷಗಳ ನಂತರವಾದರೂ ಸಿದ್ದರಾಮಯ್ಯ ಇಳಿಯಲೇಬೇಕಲ್ವಾ? ಎಲ್ಲಾ ಸಂದರ್ಭಗಳಿಗೂ ನಾವು ಸಿದ್ದರಿರಬೇಕು ಎಂದು ತಿಳಿಸಿದರು.

ಅಹಿಂದ ಅಂದರೆ ಸುಮಾರು 500 ಜಾತಿಗಳಿವೆ. ನಾನು ಅಹಿಂದ ಧ್ವಜ ಕೊಂಡೊಯ್ದೇನೆ. ಯಾರಾದರೂ ಒಬ್ಬರು ಅಹಿಂದ ಧ್ವಜ ಒಯ್ಯಲೇಬೇಕಲ್ವಾ? ಹೊಸ ಅಹಿಂದ ನಾಯಕ ಉದಯ ಆಗಲೇಬೇಕು, ಆ ವ್ಯವಸ್ಥೆ ರಾಜ್ಯದಲ್ಲಿದೆ ಎಂದು ತಿಳಿಸಿದರು.

### ಸಿದ್ದು ರಾಜೀನಾಮೆ ಅಂಗೀಕಾರ: ಸಚಿವ ಸಂಪುಟ ವಿಸರ್ಜನೆ

ಇಲ್ಲದ ಕಾರಣ ಅವರ ಅನುಪಸ್ಥಿತಿಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ಗುರುವಾರ ತಮ್ಮ ರಾಜೀನಾಮೆ ಪತ್ರವನ್ನು ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗೆ ನೀಡಿದ್ದರು. ರಾಜೀನಾಮೆ ಪತ್ರವನ್ನ ಕಾರ್ಯದರ್ಶಿ ಸ್ವೀಕರಿಸಿದ್ದರೂ ಸಂವಿಧಾನದ ನಿಯಮಾವಳಿಗಳ ಪ್ರಕಾರ ರಾಜ್ಯಪಾಲರು ಸಹಿ ಮಾಡಬೇಕಿತ್ತು. ಗುರುವಾರ ರಾತ್ರಿ ಇಂದೋರ್‌ನಿಂದ ಬೆಂಗಳೂರಿಗೆ ಆಗಮಿಸಿದ ರಾಜ್ಯಪಾಲರು ಶುಕ್ರವಾರ ಬೆಳಗ್ಗೆಯೇ ರಾಜೀನಾಮೆಯನ್ನು ಅಂಗೀಕರಿಸಿದ್ದಾರೆ. ಹೀಗಾಗಿ ಹೊಸ ಸರ್ಕಾರ ರಚನೆ ಪ್ರಕ್ರಿಯೆಗೆ ಚಾಲನೆ ಸಿಕ್ಕಂತೆ ಆಗಿದೆ.

ರಾಜ್ಯಪಾಲರು ಸಿಎಂ ರಾಜೀನಾಮೆ ಅಂಗೀಕಾರ ಮಾಡಿರುವುದರಿಂದ ಶನಿವಾರ (ಮೇ 30) ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ಸಿಎಲ್‌ಪಿ ನಾಯಕರಾಗಿ ಡಿಕೆಶಿ ಆಯ್ಕೆಯಾಗುವುದು ಬಹುತೇಕ ಖಚಿತವಾಗಿದೆ. ಸೋಮವಾರ ಸಂಜೆ ಗೋದೂಳಿ ಮುಹೂರ್ತದಲ್ಲಿ ಡಿಕೆಶಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

### ದೆಹಲಿಯಲ್ಲಿ ಭೋಜನ: ಸಿದ್ದು–ಡಿಕೆಶಿ ಚರ್ಚೆ

ಕೆ.ಶಿವಕುಮಾರ್ ಅವರು ಕಾಂಗ್ರೆಸ್‌ನ ಇತರ ನಾಯಕರನ್ನೂ ಭೇಟಿ ಮಾಡಿ ಚರ್ಚೆ ನಡೆಸಿದರು. ನಂತರ ಸಿದ್ದರಾಮಯ್ಯ ಉಳಿದುಕೊಂಡಿದ್ದ ಹೋಟೆಲ್ ಗೆ ಡಿ.ಕೆ.ಶಿವಕುಮಾರ್ ಅವರು ಭೇಟಿ ನೀಡಿದ್ದರು. ಒಟ್ಟಿಗೆ ಸೇರಿ ಭೋಜನ ಸವಿದರು. ಯತೀಂದ್ರ ಜೊತೆಯಲ್ಲಿದ್ದರು.

### ಇಂದು ನೂತನ ಸಾರಥಿ ಆಯ್ಕೆ

ನಡೆದರೆ ಸೋಮವಾರ ಸಂಜೆ ಗೋದೋಳಿ ಮುಹೂರ್ತದಲ್ಲಿ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರು ಪ್ರಮಾಣ ವಚನ ಸ್ವೀಕರಿಸುವ ಸಾಧ್ಯತೆಯಿದೆ. ವಿಧಾನಸೌಧದ ಮೆಟ್ಟಿಲುಗಳ ಮೇಲೆ ಅಥವಾ ಕಂಠೀರವ ಕ್ರೀಡಾಂಗಣದಲ್ಲಿ ಪ್ರಮಾಣವಚನ ಕಾರ್ಯಕ್ರಮ ನಡೆಯಲಿದೆ ಎನ್ನಲಾಗಿದೆ.

### 20 ಸಚಿವರಿಗೆ ಕೊಕ್: ಹೊಸಬರಿಗೆ ಮಣೆ

ಉಳಿಸಿಕೊಳ್ಳುವುದು ಬಹುತೇಕ ಖಚಿತವಾಗಿದೆ. ಕೆ.ಜೆ.ಜಾರ್ಜ್, ಪ್ರಿಯಾಂಕ್ ಖರ್ಗೆ, ಎಂ.ಬಿ.ಪಾಟೀಲ್, ಕೃಷ್ಣಬೈರೇಗೌಡ, ರಾಮಲಿಂಗಾರೆಡ್ಡಿ, ಸತೀಶ್ ಜಾರಕಿಹೊಳಿ, ಈಶ್ವರ್ ಖಂಡ್ರೆ, ಡಾ.ಜಿ ಪರಮೇಶ್ವರ್, ಕೆ.ಎಚ್.ಮುನಿಯಪ್ಪ, ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಈ ಬಾರಿಯೂ ಮಂತ್ರಿ ಪದವಿ ಸಿಗುವ ಸಾಧ್ಯತೆಯಿದೆ ಎನ್ನಲಾಗಿದೆ.

### ಡಿಕೆಶಿಗೆ 8 ವರ್ಷ ರಾಜಯೋಗ: ಭವಿಷ್ಯ

ಭಾರಿ ರಾಜಯೋಗ ತರುತ್ತದೆ ಎಂದು ಭವಿಷ್ಯ ನುಡಿದರು.

ಡಿ.ಕೆ.ಶಿವಕುಮಾರ್ ಒಂದು ಆಂಡ್. ಕೇವಲ ಮುಖ್ಯಮಂತ್ರಿ ಮಾತ್ರವಲ್ಲ. ಅವರು ಬುದ್ಧಿವಂತ, ಜಾಣ ಮತ್ತು ಸಹನೆಯುಳ್ಳವರು ಎಂದು ಗುರೂಜಿ ಬಣ್ಣಿಸಿದರು.

### ಭೀಮಾ ತೀರದಲ್ಲಿ ಹರಿದ ನೆತ್ತರು: 6 ಮಂದಿ ಕೊಲೆ

ಗೊಳಗಿ ಕುಟುಂಬಗಳ ನಡುವೆ ಜಮೀನು ವ್ಯಾಜ್ಯವಿತ್ತು. ಇದೇ ಕಾರಣಕ್ಕೆ ಈ ಹತ್ಯೆ ನಡೆದಿದೆ ಎನ್ನಲಾಗಿದೆ. ಎರಡು ಕುಟುಂಬಗಳ ಗಲಾಟೆಯಯಲ್ಲಿ ರೇವಣಸಿದ್ದಪ್ಪ ನಿರಾಳೆ, ದುಂಡಪ್ಪ ರೇವಣಸಿದ್ದಪ್ಪ ನಿರಾಳೆ, ಶಿವಪುತ್ರ ರೇವಣಸಿದ್ದಪ್ಪ ನಿರಾಳೆ, ಚಂದ್ರಶೇಖರ್ ನಿರಾಳೆ, ಶಬ್ಬಿರ್ ನದಾಫ್ ಹತ್ಯೆಯಾಗಿದ್ದಾರೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

## ನೂತನ ಬಸ್ ನಿಲ್ದಾಣ ಉದ್ಘಾಟನೆ




ಚಾಮರಾಜನಗರ, ತಾಲೂಕಿನ ಬದನಗುಪ್ಪೆ ಗ್ರಾಮದಲ್ಲಿ ಆಲ್ಟರ್ನಿಕ್ ಲಿಮಿಟೆಡ್‌ನ ಸಿಎಸ್ ಆರ್ ಅನುದಾನದಡಿ ನಿರ್ಮಿಸಿರುವ ಬಸ್ ನಿಲ್ದಾಣ ವನ್ನು ಕಂಪನಿಯ ಜನರಲ್ ಮ್ಯಾನೇಜರ್ ಉಮೇಶ್ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು ಗ್ರಾಮಸ್ಥರು ಬೇಡಿಕೆಯಂತೆ ಕಂಪನಿಯ ಸಿಎಸ್ ಆರ್ ಅನು ದಾನದಲ್ಲಿ ಸಾರ್ವಜನಿಕರ ಅನುಕೂಲ ಕ್ಕಾಗಿ ಬಸ್ ನಿಲ್ದಾಣ ನಿರ್ಮಿಸಲಾಗಿದೆ. ಮುಂದಿನ ದಿನಗಳಲ್ಲಿ ಇಂತಹ ಸಮಾಜ ಮುಖಿ ಸೇವಾ ಕಾರ್ಯಗಳನ್ನು ಕಂಪನಿ ವತಿಯಿಂದ ಮಾಡಲಾಗುವುದು ಎಂದರು.

ಗ್ರಾಮದ ಮುಖಂಡ ಮಲ್ಲೇಶ್ ಮಾತ ನಾಡಿ, ಆಲ್ಟರ್ನಿಕ್ ಲಿಮಿಟೆಡ್ ನಸಿಎಸ್ ಆರ್ ಅನುದಾನದಡಿಯಲ್ಲಿ ಗ್ರಾಮದಲ್ಲಿ ಸುಸಜ್ಜಿತ ಬಸ್ ನಿಲ್ದಾಣ ನಿರ್ಮಿಸಿಕೊಡುವ ಮೂಲಕ ಗ್ರಾಮಸ್ಥರಿಗೆ ಅನುಕೂಲ ಮಾಡಿಕೊಟ್ಟಿದ್ದಾರೆ ಎಂದು ಶ್ಲಾಘಿಸಿದರು. ಗ್ರಾಮದಿಂದ ಹೊರ ಊರುಗಳಿಗೆ ತೆರಳಬೇಕಾದರೆ ಬಿಸಿಲು, ಮಳೆ ಯಲ್ಲಿ ರಸ್ತೆ ಬದಿ ನಿಲ್ಲುವ ಪರಿಸ್ಥಿತಿ ಯಿತ್ತು. ಇದೀಗ ಕಂಪನಿ ಸುಸಜ್ಜಿತ ಬಸ್ ನಿಲ್ದಾಣ ನಿರ್ಮಿ ಸಿರುವುದು ನೆರವಿಗೆ ಬಂದಿದ್ದಾದು, ಗ್ರಾಮದ ಜನರ ಪರವಾಗಿ ಕಂಪನಿಯವರಿಗೆ ಈ ಮೂಲಕ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು. ಕಂಪನಿಯ ಸಿಎಸ್ ಆರ್ ಮುಖ್ಯಸ್ಥ ಕಣ್ಣನ್, ಸುದೀಂದ್ರ, ತಾ.ಪಂ.ಮಾಜಿ ಸದಸ್ಯ ಬಸವಣ್ಣ ದೀಪ್ತಿ ಡೆವಲಪರ್ಸ್ ಜಗದೀಶ್, ಲೋಕೇಶ್, ನಾಗರಾಜಮೂರ್ತಿ, ಕುಮಾರ್, ಶಿವಪಾದಪ್ಪ, ನಂಜುಂಡಸ್ವಾಮಿ, ಮಹೇಶ್,ಮಹೇಶ್, ಮುಕುಂದಮೂರ್ತಿ, ರಾಜಮ್ಮ ಹಾಜರಿದ್ದರು.

## ನಾಳೆ ನಾಡಕುಸ್ತಿ ಪಂದ್ಯಾವಳಿ



ಮೈಸೂರು: ಪ್ರೊ.ಬಿ. ಕೃಷ್ಣಪ್ಪ ಸ್ಥಾಪಿತ ದಲಿತ ಸಂಘರ್ಷ ಸಮಿತಿ ವತಿಯಿಂದ ಮೇ 31 ರ ಮಧ್ಯಾಹ್ನ 3ಕ್ಕೆ ನಗರದ ದಸರಾ ವಸ್ತು ಪ್ರದರ್ಶನ ಆವರಣದ ಡಿ. ದೇವರಾಜ ಅರಸ್ ವಿವಿಧೋದ್ದೇಶ ಕ್ರೀಡಾಂಗಣದಲ್ಲಿ ಅಶೋಕಪುರಂ ಫ್ರೆಂಡ್ಸ್ ಬಳಗದ ವತಿಯಿಂದ ಡಾ.ಬಿ. ಆರ್. ಅಂಬೇಡ್ಕರ್ ಜಯಂತಿ ಪ್ರಯುಕ್ತ 30 ಜೊತೆ ನಾಡಕುಸ್ತಿ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ರಾಜ್ಯ ಸಂಘಟನಾ ಸಂಚಾಲಕ ನಿಂಗರಾಜ್ ಮಲ್ಲಾಡಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಶೋ ಕಪುರಂಗೂ ಕುಸ್ತಿ ಚಟುವಟಿಕೆಗೂ ದೊಡ್ಡ ಸಂಬಂ ಧವಿದೆ. ಈ ದಿನಗಳಲ್ಲಿ ಯುವ ಸಮೂಹ ಕುಡಿತ, ಮಾದಕ ವಸ್ತು ಸೇವನೆ ಮೊದಲಾದವಕ್ಕೆ ದಾಸವಾಗು ತ್ತಿದೆ. ಹೀಗಾಗಿ ಇದರಿಂದ ಇವರನ್ನು ಹೊರ ತರಲು ಕುಸ್ತಿ ಚಟುವಟಿಕೆಯಂತಹವುಗಳಿಗೆ ತಮ್ಮ ಸಂಘಟನೆ ಗಮನ ನೀಡಿದೆ. ಈ ನಿಟ್ಟಿನಲ್ಲಿ ಈ ಕುಸ್ತಿ ಪಂದ್ಯಾವಳಿ ಆಯೋಜಿಸಲಾಗಿದೆ ಎಂದರು. ಕಾಂಗ್ರೆಸ್ ಮುಖಂಡ ಎಚ್.ಸಿ. ಮಹದೇವಪ್ಪ, ಸಂಸದ ಯದುವೀರ್, ನಟ ದುನಿಯಾ ವಿಜಯ್, ಶಾಸಕ ಟಿ.ಎಸ್. ಶ್ರೀವತ್ಸ, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಮಾಜಿ ಮೇಯರ್ ಪುರುಷೋತ್ತಮ್ ಇನ್ನಿತರರು ಅತಿಥಿಗಳಾಗಿ ರುವರೆಂದರು. ಕೆ. ನಂಜಪ್ಪ ಬಸವನಗುಡಿ, ಬನ್ನೂರು ರವಿ, ಅಭಿಷೇಕ್ ಅಶೋಕಪುರಂ, ಪೈಲ್ವಾನ್ ಸಿದ್ದ ರಾಜು, ಅಕ್ಮಲ್ ಪಾಷಾ ಮೊದಲಾದವರು ಇದ್ದರು.

## 45 ಕೋಟಿ ರೂ. ವೆಚ್ಚದ ಕಾಮಗಾರಿಗೆ ಚಾಲನೆ



ಮೈಸೂರು: ಕೃಷ್ಣರಾಜ ಕ್ಷೇತ್ರದ ಬಾಕ್ಸ್ ಡ್ರೈನ್ ಹಾಗೂ ರಸ್ತೆ ಕಾಮಗಾರಿಗೆ ಶಾಸಕ ಶ್ರೀವತ್ಸ ಚಾಲನೆ ನೀಡಿದರು.

ಮಹಾತ್ಮ ಗಾಂಧಿ ನಗರ ವಿಕಾಸ್ ಯೋಜನೆ ಅಡಿ ಕೆ.ಆರ್. ಕ್ಷೇತ್ರದ ವಲಯ ಕಚೇರಿ ಎರಡು ಹಾಗೂ ಮೂರರ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂಬರ್ 57, 59, 60, 62, 64, 65ರಲ್ಲಿ ಬಾಕ್ಸ್ ಟ್ರೈನ್ ಮತ್ತು ರಸ್ತೆ ಡಾಂಬರೀಕರಣ ಸುಮಾರು 20 ಕೋಟಿ ಕಾಮಗಾರಿಗೆ ಗುದ್ದಲಿ ಪೂಜೆ ಮಾಡಿದರು.ಈ ಸಂದರ್ಭದಲ್ಲಿ ನಗರ ಪಾಲಿಕೆ ಮಾಜಿ ಸದಸ್ಯರಾದ ಶಾರದಮ್ಮ ಈಶ್ವರ್, ರಮೇಶ್, ಜಯರಾಮ್ ಮುಖಂಡರಾದ ವಿಶ್ವೇಶ್ವರಯ್ಯ, ನಾಗರಾಜ್, ಬಿಲ್ಲಯ್ಯ, ಪಿ.ಟಿ.ಕೃಷ್ಣ ರವಿ, ಪ್ರದೀಪ್ ಕುಮಾರ್, ಮಧುಸೂದನ್, ದೀಪಕ್, ದೇವರಾಜೇಗೌಡ, ರಾಘವೇಂದ್ರ, ಅಕ್ಷಯ್, ಚಂದ್ರು, ಹೇಮಂತ್, ರಾಜೇಶ್, ರವಿ, ಮಂಜು, ಸತೀಶ, ಮನೋಜ್, ರೂಪ ರೇಣುಕಾ, ವಲಯ ಕಚೇರಿ 2 ಮತ್ತು 3 ರ ಸಹಾಯಕ ಆಯುಕ್ತರಾದ ಗಿರೀಶ್, ಸಂದೀಪ್ ಅಭಿವೃದ್ಧಿ ಅಧಿಕಾರಿಗಳಾದ ಚೇತನ್ ಬಾಬು, ಸತ್ಯಮೂರ್ತಿ ಇದ್ದರು.



**ಕೃಷ್ಣರಾಜ ಕ್ಷೇತ್ರದ ವಾರ್ಡ್ ನಂಬರ್ 43ರಲ್ಲಿ ತರಳಬಾಳು ಜಂಕ್ಷನ್ ನಿಂದ ಗಣೇಶ್ ಭಂಡಾರ್ ವರೆಗೆ ಅಂದಾಜು 45 ಲಕ್ಷ ರೂಗಳ ಯುಜಿಡಿ ಕಾಮಗಾರಿಗೆ ಶಾಸಕ ಟಿ.ಎಸ್.ಶ್ರೀವತ್ಸ ಗುದ್ದಲಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ನಗರ ಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ಎಸ್.ಜಗದೀಶ್, ಬಿಜೆಪಿ ಮುಖಂಡರಾದ ಪೂರ್ಣಿಮಾ, ಚಂದ್ರಪ್ಪ, ಎಂ.ಪಿ.ಬಸವರಾಜ್, ಪ್ರದೀಪ್ ಕುಮಾರ್, ಕೆಂಚ ಮಧು, ಶಿವಣ್ಣ, ಚಂದ್ರಪ್ಪ, ಕಣ್ಣೂರಮೇಶ್, ಸತ್ಯಾನಂದ ವಿಟ್ಟು.ಹೇಮಂತ್ ಮತ್ತಿತರರು ಉಪಸ್ಥಿತರಿದ್ದರು.**

## ಡೆಂಗ್ಯೂ ಜ್ವರ ದಿನಚರಣೆ, ಹೆಣ್ಣು ಮಕ್ಕಳ ಗರ್ಭಕಂಠದ ಕ್ಯಾನ್ಸರ್ ತಡೆಗಾಗಿ ಜಾಗೃತಿ



ಶ್ರೀರಂಗಪಟ್ಟಣ: ತಾಲೂಕು ಆರೋಗ್ಯಾಧಿಕಾರಿ ಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ರಾಷ್ಟ್ರೀಯ ಡೆಂಗಿ ದಿನಾಚರಣೆ ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಾಡಿದ ಡಾ ಎಂ,ಎನ್. ಆಶಾಲತಾ ಪ್ರಭಾರ ತಾಲೂಕು ಆರೋಗ್ಯ ಅಧಿಕಾರಿಗಳು ಶ್ರೀರಂಗಪಟ್ಟಣ ತಾಲೂಕು ರವರು ವಾರಕ್ಕೆ ಎರಡು ಬಾರಿ ಶಾಲಾ ವಿದ್ಯಾರ್ಥಿಗಳು ತಪ್ಪದೆ ತಮ್ಮ ತಮ್ಮ ಮನೆಯಲ್ಲಿ ಉಪಯೋಗಿಸುವ ನೀರು ಸಂಗ್ರ ಹಣೆ ಮಾಡುವ ಸಿಮೆಂಟ್ ತೊಟ್ಟಿ, ಪ್ಲಾಸ್ಟಿಕ್ ಡ್ರಮ್ಮು, ಮನೆಯ ಸುತ್ತಮುತ್ತ ಉಪಯೋಗಿಸದೆ ಇರುವ ಘನತ್ಯಾಜ್ಯ ವಸ್ತುಗಳಾದ ಒಡೆದ ಬಾಟಲಿಗಳು ಬಳಸದೆ ಇರುವ ವಾಹನದ ಟೈರ್ ಗಳು, ಎಳನೀರು ಚಿಪ್ಪುಗಳು, ಒರಳಕಲ್ಲು, ಇತ್ಯಾದಿಗಳಲ್ಲಿ ನೀರು ನಿಲ್ಲದಂತೆ ಪರೀಕ್ಷಿಸಿ ಮೂಲೊತ್ಪಾಟನ ಕ್ರಮಗಳನ್ನು ಕೈಗೊಳ್ಳಬೇಕೆಂದು ಕಿವಿ ಮಾತು ಹೇಳಿದರು.

ನಂತರ ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಗಳಾದ ಡಾ.ಸಿ.ಎಂಶ್ರೀಧರ್ ಮಾತ ನಾಡಿ ಡೆಂಗಿ ಜ್ವರಕ್ಕೆ ನಿರ್ದಿಷ್ಟವಾದ ಚಿಕಿತ್ಸೆ ಲಭ್ಯ ಇರುವುದಿಲ್ಲ.. ಇದರಿಂದ ರಕ್ಷಣೆ ಹೊಂದಲು ಸೊಳ್ಳೆಗಳ ನಿಯಂತ್ರಣ ಕ್ರಮಗಳು ಒಂದೇ ದಾರಿಯಾಗಿದೆ. ಈಡಿಸ್ ಈಜಿಪ್ಟ್ ಸೊಳ್ಳೆಗಳ ನಿಯಂತ್ರಣವನ್ನು ಮಾಡಲು ಎಲ್ಲಾ ಸಾರ್ವ ಜನಿಕರು ಸಹಕರಿಸಬೇಕೆಂದು ಹೇಳಿದರು..

ಇದಕ್ಕೂ ಮುನ್ನ ನ್ಯೂ ಆಕ್ಸ್‌ಫರ್ಡ್ ಶಾಲೆಯ ಮುಂಬಾಗ ಏರ್ಪಡಿಸಲಾದ ಹೆಣ್ಣು ಮಕ್ಕಳ ಗರ್ಭಕಂಠದ ಕ್ಯಾನ್ಸರ್ ತಡೆಗಾಗಿ ಸರ್ಕಾರದಿಂದ ಉಚಿತವಾಗಿ 14 ರಿಂದ 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ನೀಡಲಾ ಗುತ್ತಿರುವ ಲಸಿಕಾ ಅಭಿಯಾನ ಕುರಿತಂತೆ ಜಾಗೃತಿ ಜಾಥಾವನ್ನು ಹಸಿರು ನಿಶಾನೆ ತೋರುವುದರ ಮೂಲಕ ಉದ್ಘಾಟಿಸಿದರು. ಶಾಲಾ ಮಕ್ಕಳಿಗೆ ಊಕಗಿ ಲಸಿಕೆ ಒಂದು ಸುರಕ್ಷಿತ ಲಸಿಕೆಯಾಗಿದ್ದು ಮಹಿಳೆಯರ ಗರ್ಭಕಂಠಕದ ಕ್ಯಾನ್ಸರ್ ತಡೆಗಟ್ಟುವಲ್ಲಿ ಮುಖ್ಯ ಪಾತ್ರವನ್ನು ವಹಿಸುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶಾಲಾಮುಖ್ಯೋಪಾಧ್ಯಾಯ ರಾದ ಐಶ್ವರ್ಯ, ಶಿಕ್ಷಕರುಗಳಾದ ಅರುದಂತಿ, ರಾಹುಲ್, ಮೆರಿಲ್, ಗೋವಿಂ ದಯ್ಯ, ಕಾವ್ಯ, ವೈಶಾಲಿ, ಪವಿತ್ರ, ಸಲ್ಮಾ, ಚ?ತ್ರಾ, ಸೌಂದರ್ಯ, ಸುಸ್ಮಿತಾ, ಪ್ರೀತಿ, ವಾಣಿ, ಅಹಲ್ಯಾ, ಆರೋಗ್ಯ ಇಲಾಖೆಯ ರೋಗಲಕ್ಷಣ ಶಾಸ್ತ್ರಜ್ಞ ಮೇಘನಾ ಸಾರ್ವ ಜನಿಕ ಆಸ್ಪತ್ರೆಯ ಆಯುಷ್ಯ ವೈದ್ಯಾಧಿಕಾರಿಗ ಳಾದಡಾಕ್ಟರ್ ಮೃಣಾಲಿನಿ, ತಾಲ್ಲೂಕು ಆರೋಗ್ಯ ಮೇಲ್ವಿಚಾರಕರುಗಳಾದ ಜಿ.ಮೋಹನ್, ಹೇಮಣ್ಣ ಜಿ. ಬಿ, ಹಿರಿಯ ಆರೋಗ್ಯನಿರೀಕ್ಷಣಾಧಿಕಾರಿ ರಾಜ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಬಿ.ಮಂಗಳ, ಎಸ್.ಸಿ. ವಾಣಿ, ಸ್ಮಿತಾ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಸ್.ಪಿ ಪುಣೀಂದ್ರ, ಎಂ.ಎನ್. ಕೃಷ್ಣೇಗೌಡ, ಮೇಘನಾ ಸ್ನೇಹ ಹಾಗೂ ಆಶಾ ಕಾರ್ಯಕರ್ತೆಯರಾದ ಹೇಮಾವತಿ, ಚಾಂದನಿ, ಅಶ್ವಿನಿ, ಮೀನಾ ಹಾಗೂ ಆಕ್ಸ್‌ಫರ್ಡ್ ಪಬ್ಲಿಕ್ ಸ್ಕೂಲ್ ನ ವಿಧ್ಯಾರ್ಥಿಗಳು ಉಪಸ್ಥಿತರಿದ್ದರು

## ಶ್ರೀಭಗೀರಥ ಮಹರ್ಷಿ ಜಯಂತಿ

ಚಾಮರಾಜನಗರ, ತಾಲೂಕಿನ ಕೋಡಿಮೋಳೆ ಗ್ರಾಮದಲ್ಲಿ ಶ್ರೀ ಭಗೀರಥಮಹರ್ಷಿ ಬಾವಚಿತ್ರ ಮರವಣೆಗೆ ವಿಜೃಂಭಣೆಯ ಮೆರವಣಿಗೆ ನಡೆಯಿತು.

ಗ್ರಾಮದ ಉಪ್ಪಾರ ಬಡಾವಣೆಯಲ್ಲಿ ಶ್ರೀ ಭಗೀರಥಮಹರ್ಷಿ ಜಯಂತಿ ಅಂಗವಾಗಿ ಭಗೀರಥಮಹರ್ಷಿ ಭಾವಚಿತ್ರಕ್ಕೆ ಗ್ರಾಮದ ಮುಖಂಡರು ಉಪ್ಪಾರ ಬಳಗವು ಪೂಜೆ ಸಲ್ಲಿಸಿ ಪುಷ್ಪಾ ರ್ಚನೆ ಸಲ್ಲಿಸುವ ಮೂಲಕ ಮೆರವಣಿಗೆ ಚಾಲನೆ ನೀಡಿದರು.

ಹೂವಿನ ಅಲಂಕೃತ ಪಲ್ಲಕ್ಕಿಯಲ್ಲಿ ಭಾವಚಿತ್ರವಿಟ್ಟು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣ ಗೆ ನಡೆಸಲಾಯಿತು. ಮೆರವಣ ಗೆ ಹಾದು ಹೋಗುವ ರಸ್ತೆ ಮೇಲೆ ಬಣ್ಣಬಣ್ಣದ ಚಿತ್ತಾರ ಬಿಟ್ಟು ಸ್ವಾಗತಿಸಲಾಯಿತು. ಗ್ರಾಮಸ್ಥರು ಮನೆಯ ಮುಂದೆ ರಂಗೋಲಿ ಹಾಗೂ ತಳಿರು ತೋರಣಗಳನ್ನು ಕಟ್ಟಿ ಶೃಂಗರಿಸಿದ್ದರು. ಮೆರವಣ ಗೆಯು ಸಾಗುವ ಬೀದಿಯಲ್ಲಿ ಮನೆ ಮುಂದೆ ಭಗೀರಥರ ಭಾವಚಿತ್ರಕ್ಕೆ ನಿವಾಸಿಗಳು ಪೂಜೆಸಲ್ಲಿಸಿದರು.

ಇದೇ ವೇಳೆ ಪ್ರತಿಭಾವಂತ ಉಪ್ಪಾರ ಜನಾಂಗದ ವಿದ್ಯಾರ್ಥಿ ವಿಧ್ಯಾರ್ಥಿನಿಯರಿಗೆ ಪಿ,ಯು,ಸಿ, ಹಾಗೂ ಎಸ್ಸೆಎಸ್ಸೆ ಯಲ್ಲಿ ಹೆಚ್ಚು ಅಂಕ ಗಳಿಸಿದ ವಿಧ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕರನೀಡಿ ಗೌರವಿಸಲಾಯಿತು. ಗ್ರಾಮದ ಮುಖಂಡರು ಗ್ರಾಮಸ್ಥರು ಉಪ್ಪಾರ ಬಳಗ, ಯುವಕರ ಸಂಘ, ಉಪ್ಪಾರ ಜನಾಂಗದ ಯಜಮಾನರು, ಕುಲಸ್ಥರು, ಹಾಜರಿದ್ದರು.

## ದಿಗಂಬರ ಜೈನ ಸಮಾಜದಿಂದ ಮೌನ ಪ್ರತಿಭಟನೆ



ಮೈಸೂರು: ಜೈನ ಸಮುದಾಯದವರ ಮೇಲಿನ ದೌರ್ಜನ್ಯ, ಹತ್ಯೆ ಖಂಡಿಸಿ ಶ್ರೀ ದಿಗಂಬರ ಜೈನ ಸಮಾಜದಿಂದ ಗಾಂಧಿ ವೃತ್ತದಲ್ಲಿ ಮೌನ ಪ್ರತಿಭಟನೆ ನಡೆಸಲಾಯಿತು.

ವಿಶ್ವದಲ್ಲಿ ಮಾನವ ಕುಲಕ್ಕೆ ಅಹಿಂಸಾ ಧರ್ಮ ಸಾರಿದ ಅತೀ ಪುರಾತನ ಧರ್ಮ ಜೈನ ಧರ್ಮ. ಯಾರನ್ನೂ ಹಿಂಸಿಸದೆ ತನ್ನ ಧರ್ಮ ಪಾಲಿಸಿಕೊಂಡು ಬರುತ್ತಿದೆ. ಶೈಕ್ಷಣಿಕ, ಸಾಮಾಜಿಕ ಮತ್ತು ಧಾರ್ಮಿಕವಾಗಿ ಸೇವಾ ನಿರತವಾಗಿದೆ. ಮಧ್ಯಪ್ರದೇಶದ ರೇವಾ ಪಟ್ಟಣ ದಲ್ಲಿ ಶೃತಮತಿ ಮಾತಾಜಿ, ಉಪದ್ಮತಿ ಮಾತಾಜಿ ಅವರು ವಿಹಾರ ಮಾಡುತ್ತಿದ್ದಾಗ ಅಪರಿಚಿತ ವಾಹನವೊಂದು ಉದ್ದೇಶಪೂರ್ವಕವಾಗಿ ಅಪಘಾತವೆಸಗಿ ಹತ್ಯೆ ಮಾಡಲಾಗಿದೆ. ಈ ಘಟನೆ ಮಾಸುವ ಮುನ್ನವೇ ಗುಜರಾತಿನ ರಾಜ್‌ಕೋಟ್ ನಗರದಲ್ಲಿ ಇಂತಹುದೇ ಅಪ ಘಾತದಿಂದ ಮುನಿಗಳಾದ ಆಚಾರ್ಯ ಅಜಿತ್ ಮಹಾರಾಜರು, ಮುನಿ ವಿಜಯ್ ಮಹಾರಾ ಜರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಈ ಘಟನೆಗಳಿಂದಾಗಿ ಜೈನ ಸಮಾಜಕ್ಕೆ ತುಂಬಾ ನೋವಾಗಿದೆ. ಅಹಿಂಸಾ ತತ್ವ ಪಾಲನೆ ಮಾಡುವವರಿಗೆ ಇಂತಹ ಗತಿ ಮುಂದುವರೆದರೆ ಜೈನ ಸಮಾಜ ಉಗ್ರ ಹೋರಾಟ ಮಾಡಲಿದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಅಧ್ಯಕ್ಷ ಎಂ.ಆರ್. ಸುನೀಲ್‌ಕುಮಾರ್, ಉಪಾಧ್ಯಕ್ಷ ಬಿ.ಭರತ್ ರಾಜ್, ಕಾರ್ಯದರ್ಶಿ ಪಿ.ಎಸ್.ಲಕ್ಷ್ಮೀಶ್ ಬಾಬು, ಕೋಶಾಧ್ಯಕ್ಷ ಬಿ.ಜ್ವಾಲೇಂದ್ರ ಕುಮಾರ್, ಸಹ ಕಾರ್ಯದರ್ಶಿ ಎನ್.ಜಿನೇಂದ್ರ ಪ್ರಕಾಶ್, ಕಾರ್ಯಕಾರಿ ಸಮಿತಿ ಸದಸ್ಯರಾದ ಎ.ಎನ್. ಧರಣೇಂದ್ರನ್, ಚಂದ್ರಶೇಖರ್ ಆರಿಗ, ಪದ್ಮಶ್ರೀ ಮಹಿಳಾ ಸಮಾಜದ ಅಧ್ಯಕ್ಷೆ ನಂದಿನಿ ಸಂಜಯ್, ಉಪಾಧ್ಯಕ್ಷೆ ಜಯಲಲಿತಾ, ಕಾರ್ಯ ದರ್ಶಿ ಸುಮಾ ದಯಾಕರ್, ಜೈನ ತೀರ್ಥ ಕ್ಷೇತ್ರ ಕಮಿಟಿ ಅಧ್ಯಕ್ಷ ವಿನೋದ್ ಬಾಕ್ಲಿವಾಲಾ ಸೇರಿ ಅನೇಕರು ಭಾಗವಹಿಸಿದ್ದರು.

ಪ್ರೊ.ಲೋಕನಾಥ್

## ನಾಯಕವಾಡಿಯವರ ಮೂರು ದಶಕದ ಸೇವೆ ಮರೆಯುವಂತಿಲ್ಲ




ಮೈಸೂರು: ಪ್ರೊ. ವೈ.ಎಚ್.ನಾಯಕವಾಡಿ ಅವರು ಪ್ರಾಧ್ಯಾಪಕ, ಮುಖ್ಯಸ್ಥರಾಗಿ ಮೂರು ದಶಕಗಳ ಮೈಸೂರು ವಿವಿ ಹಾಗೂ ಇತಿಹಾಸದ ವಿಭಾಗಕ್ಕೆ ಇವರ ಕೊಡುಗೆ ಅಪಾರ ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಕೆ.ಎನ್. ಲೋಕನಾಥ್ ತಿಳಿಸಿದರು.

ಮೈಸೂರು ವಿಶ್ವವಿದ್ಯಾನಿಲಯ ಇತಿಹಾಸ ಅಧ್ಯ ಯನ ವಿಭಾಗದಿಂದ ರಾಣಿ ಬಹದ್ದೂರು ಸಭಾಂಗ ಣದಲ್ಲಿ ಆಯೋಜಿಸಿದ್ದ ಪ್ರೊ.ವೈ.ಎಚ್.ನಾಯಕವಾಡಿ ಅಭಿನಂದನಾ ಸಮಾರಂಭ, ಅಭಿನಂದನಾ ಗ್ರಂಥ ಬಿಡುಗಡೆ ಹಾಗೂ ಒಂದು ದಿನದ ಸಮ್ಮೇಳನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪ್ರೊ.ವೈ. ಎಚ್.ನಾಯಕವಾಡಿ ಅವರು ಮೈಸೂರು ವಿಶ್ವವಿದ್ಯಾ ನಿಲಯದ ಇತಿಹಾಸ ಅಧ್ಯಯನ ವಿಭಾಗದಲ್ಲಿ ಹಿರಿಯ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿದವರಾಗಿದ್ದಾರೆ. ಕಳೆದ ಮೂರು ದಶಕಗಳಿಗೂ ಹೆಚ್ಚು ಕಾಲ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಪ್ರಾಧ್ಯಾಪಕರಾಗಿ, ಹಿರಿಯ ಪ್ರಾಧ್ಯಾಪಕರಾಗಿ ಹಾಗೂ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಈ ಕಾಲಾವಧಿಯಲ್ಲಿ ಸೇವೆಯಲ್ಲಿರುವಾ ಗಲೇ ಪಿಎಚ್.ಡಿ ಹಾಗೂ ಪೋಸ್ಟ್ ಡಾಕ್ಟರಲ್ ಪದವಿಗಳನ್ನು ಪಡೆದಿದ್ದಾರೆ. ಪೋಸ್ಟ್ ಡಾಕ್ಟರಲ್ ಪದವಿಯನ್ನು ಜಗತ್ತಿನ ಶ್ರೇಷ್ಠ ವಿಶ್ವವಿದ್ಯಾನಿಲಯವಾದ ಇಂಗ್ಲೆಂಡಿನ ಪ್ರತಿಷ್ಠಿತ ಕೇಂಬ್ರಿಡ್ಜ್ ವಿಶ್ವವಿದ್ಯಾನಿಲಯದಲ್ಲಿ ಪೂರೈಸಿದ್ದಾರೆ. ಇಂಗ್ಲೆಂಡ್, ಸ್ಕಾಟ್ಲ್ಯಾಂಡ್, ಜರ್ಮನಿ, ಸ್ವೀಡನ್ ಹಾಗೂ ಇಂಡಿಯಾ ರಾಷ್ಟ್ರಗಳಲ್ಲಿ ನಡೆದ ಅಂತರ್‌ರಾಷ್ಟ್ರೀಯ ಸಮ್ಮೇಳನಗಳಲ್ಲಿ ಸಂಶೋಧನಾ ಪ್ರಬಂಧಗಳನ್ನು ಮಂಡಿಸಿದ್ದಾರೆ. ರಾಷ್ಟ್ರೀಯ, ಪ್ರಾದೇಶಿಕ ಹಾಗೂ ಸ್ಥಳೀಯ ಸಮ್ಮೇಳನಗಳಲ್ಲಿ ನೂರಕ್ಕೂ ಹೆಚ್ಚು ಪ್ರಬಂಧಗಳನ್ನು ಮಂಡಿಸಿ ಮತ್ತು ಪ್ರಕಟಿಸಿದ್ದಾರೆ. ಐವತ್ತು ಪುಸ್ತಕಗಳನ್ನು ಬರೆದು ಪ್ರಕಟಿಸಿದ್ದಾರೆ. ಇಪ್ಪತ್ತೆಂಟು ಪಿಎಚ್.ಡಿ ಹಾಗೂ ಹದಿನಾರು ಎಂ.ಫಿಲ್ ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿ ಪಿಎಚ್.ಡಿ ಮತ್ತು ಎಂ.ಫಿಲ್ ಪದವಿಗಳನ್ನು ಕೊಡಿಸಿದ್ದಾರೆ. ಯು.ಜಿ.ಸಿ.ಯಿಂದ ಕೊಡಲ್ಪಡುವ ಪ್ರಧಾನ ಹಾಗೂ ಕಿರುಯೋಜನೆಗಳನ್ನು ಪೂರ್ಣಗೊಳಿಸಿದ್ದಾರೆಂದರು.

ಇತ್ತೀಚೆಗೆ ಒಂದು ಸೆಬ್ಯಾಟಿಕಲ್ ಯೋಜನೆಯನ್ನು ಪೂರ್ಣಗೊಳಿಸಿದ್ದಾರೆ. 2017–19ನೇ ಸಾಲಿನಲ್ಲಿ ಇತಿಹಾಸ ಅಧ್ಯಯನ ವಿಭಾಗದ ಅಧ್ಯಕ್ಷರಾಗಿದ್ದಾಗ ಕೆಲವು ಅಂತರ್‌ರಾಷ್ಟ್ರೀಯ ಸಮ್ಮೇಳನಗಳನ್ನು ಹಾಗೂ ಹಲವು ರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿದ ಇವರ ಸೇವೆ ವಿಭಾಗದ ವಿದ್ಯಾರ್ಥಿಗಳಿಗೆ ಸಾಕಷ್ಟು ಎಂದು ಹೇಳಿದರು. ಚಾಮರಾಜನಗರ ವಿಶ್ವವಿದ್ಯಾನಿಲ ಯದ ಕುಲಪತಿ ಪ್ರೊ.ಎಂ.ಆರ್.ಗಂಗಾಧರ, ಹೈದರಾಬಾದಿನ ಉಸ್ಮಾನಿಯ ವಿಶ್ವವಿದ್ಯಾನಿಲಯದ ಪ್ರಸಿದ್ಧ ವಿದ್ವಾಂಸ ಮತ್ತು ಇತಿಹಾಸಕಾ ಪ್ರೊ.ಎ.ಸತ್ಯನಾರಾಯಣ, ಇತಿಹಾಸ ಅಧ್ಯಯನ ವಿಭಾಗದ ನಾಲ್ವಡಿ ಕೃಷ್ಣರಾಜ ಒಡೆಯರ್ ಪೀಠದ ಸಂದರ್ಶನ ಪ್ರಾಧ್ಯಾಪಕಿ ಪ್ರೊ.ಉಷಾದೇವಿ, ಪ್ರೊ. ಕೆ.ಸದಾಶಿವ, ಪ್ರೊ. ಸೋಮಶೇಖರ್, ಪ್ರೊ.ಗುರುಸಿದ್ದಯ್ಯ ಇನ್ನಿತರರು ಉಪಸ್ಥಿತರಿದ್ದರು.

# ಇಂದು ಎಸ್‌ಐಆರ್ ವಿರೋಧಿಸಿ ಪ್ರತಿಭಟನೆ




ಚಾಮರಾಜನಗರ, ಮತದಾರರ ತೀವ್ರ ಪರಿಷ್ಕರಣೆ (ಎಸ್.ಐ.ಆರ್) ವಿರೋಧಿಸಿ ಎಸ್.ಐ.ಆರ್ ವಿರೋಧಿ ಜಾತ್ಯಾತೀತ ಪಕ್ಷಗಳು ಹಾಗೂ ಜನಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಮೇ 30 ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ಸದಸ್ಯ ಕೆ.ವೆಂಕಟರಾಜು ತಿಳಿಸಿದರು.

ಕೇಂದ್ರ ಚುನಾವಣಾ ಆಯೋಗ ಎಸ್.ಐ.ಆರ್ ಮೂಲಕ ಜನರ ಮತದಾನದ ಹಕ್ಕನ್ನು ಕಸಿಯಲು ಮುಂದಾಗಿದೆ. ಈಗಾಗಲೇ 13 ರಾಜ್ಯಗಳಲ್ಲಿ ಎಸ್.ಐ.ಆರ್ ನಡೆಸಿ 6.5 ಕೋಟಿ ಜನರನ್ನು ಮತದಾರರ ಪಟ್ಟಿಯಿಂದ ಹೊರಗಿಟ್ಟಿದೆ. ಈ ನಿಟ್ಟಿನಲ್ಲಿ ಎಸ್.ಐ.ಆರ್ ವಿರೋಧಿಸಿ ಮೇ 30 ರಂದು ಜಿಲ್ಲಾ ಕೇಂದ್ರದಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು. ಜನ ವಿರೋಧಿ ಅನ್ನು ನಿಲ್ಲಿಸಬೇಕು. ಜನಸ್ನೇಹಿ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆಯನ್ನು ಜಾರಿಗೆ ತರಬೇಕು. ಯಾವುದೇ ಕಾರಣಕ್ಕೂ 'ಲಾಜಿಕಲ್ ಡಿಸ್ಕಿ ಪೆನ್ಸಿ' ಎಂಬ ಸಾಫ್ಟ್ ವೇರ್ ಬಳಸಬಾರದು. ಕೋಟ್ಯಾಂತರ ಜನರು ಅಲೆದಾಡುವಂತೆ ಆಗಿದ್ದ, 27 ಲಕ್ಷ ಜನ ಎಲ್ಲಾ ದಾಖಲೆಗಳಿದ್ದರೂ ಮತದಾನದ ಹಕ್ಕನ್ನು ಕಳೆದುಕೊಂಡದ್ದು ಇದರಿಂದ ಇದಕ್ಕೆ ಕರ್ನಾಟಕದಲ್ಲಿ ಅವಕಾಶ ಇರಬಾರದು. ಮತದಾರರ ಪಟ್ಟಿಯನ್ನು ಕಡ್ಡಾಯವಾಗಿ ಮೆಷಿನ್ ರೀಡಬಲ್ ಫಾರ್ಮ್ಯಾಟಿನಲ್ಲಿ ನೀಡಬೇಕು. ಯಾರನ್ನು ತೆಗೆಯಲಾಗಿದೆ, ಯಾರನ್ನು ಸೇರಿಸಲಾಗಿದೆ ಎಂಬುದು ಪಾರದರ್ಶಕವಾಗಿ ಪರಿಶೀಲನೆ ಮಾಡಲು ಅವಕಾಶ ನೀಡಬೇಕು ಎಂದರು.

ಕರಡು ಪಟ್ಟಿ ತಯಾರಾದ ಮೇಲೆ ಕಡ್ಡಾಯವಾಗಿ ಗ್ರಾಮ ಸಭೆ ಮತ್ತು ವಾರ್ಡ್ ಸಭೆಗಳನ್ನು ಕರೆದು ಅದರಲ್ಲಿ ಅದು ಸಾರ್ವಜನಿಕ ಪರಿಶೀಲನೆಗೆ ಒಳಪಡಬೇಕು. ಮುಕ್ತವಾಗಿ ತಿದ್ದುಪಡಿಗಳನ್ನು ಸಂಗ್ರಹಿಸಿದ ನಂತರವೇ ಅಂತಿಮಗೊಳಿಸಬೇಕು. ಜನ ದುಡಿಯಲು ದೂರದ ಊರುಗಳಿಗೆ ಹೋಗಿರುವುದರಿಂದ, ಕೂಡಲೇ ದಾಖಲೆಗಳನ್ನು ಪಡೆಯುವುದು ಸುಲಭ ಇಲ್ಲದಿರುವುದರಿಂದ ಅಪೀಲ್ ಮತ್ತು ಪರಿಶೀಲನೆಗೆ ಕನಿಷ್ಠ 6 ತಿಂಗಳ ಸಮಯವಕಾಶ ಇರಬೇಕು ಎಂದರು. ಗೋಷ್ಠಿಯಲ್ಲಿ ಮುಖಂಡರಾದ ಮೊಹಮ್ಮದ್ ಅಸ್ಗರ್ ಮುನ್ನಾ, ಅಬ್ರಾರ್ ಅಹಮ್ಮದ್, ಮಹೇಶ್ ಗಾಳೀಪುರ ಹಾಜರಿದ್ದರು.

# ಮದ್ಯದಂಗಡಿಗೆ ತೆರೆದರೆ ಹೋರಾಟ




ಚಾಮರಾಜನಗರ, ಗುಂಡ್ಲುಪೇಟೆ ತಾಲೂಕಿನ ತೆರೆಕಣಾಂಬಿಹುಂಡಿಯಲ್ಲಿ ಎಂಎಸ್ ಐಎಲ್ ಮದ್ಯಂಗಡಿ ತೆರೆದರೆ ಗ್ರಾಮಸ್ಥರೊಂದಿಗೆ ಬೀದಿಗಿಳಿದು ಹೋರಾಟ ಮಾಡಲಾಗುತ್ತದೆ ಎಂದು ಗ್ರಾ.ಪಂ.ಮಾಜಿ ಸದಸ್ಯ ಶಶಿ ಅವ್ವ ಎಚ್ಚರಿಸಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಗ್ರಾಮದಲ್ಲಿ ಬಾರ್ ತೆರೆಯಲು ಉದ್ದೇಶಿಸಿರುವ ಜಾಗದ ಅಕ್ಕಪಕ್ಕ ಮನೆಗಳು, ಹಾಗೂ ಖಾಲಿ ನಿವೇಶನಗಳಿವೆ. ಬಾರ್ ತೆರೆದರೆ ಶಾಲಾ ಮಕ್ಕಳು, ಹೆಂಗಸರು ಓಡಾಡಲು ತೊಂದರೆಯಾಗಲಿದೆ ಎಂದರು.

ಈಗಾಗಲೇ ತೆರಕಣಾಂಬಿ ಗ್ರಾಮದಲ್ಲಿ 4 ಬಾರ್‌ಗಳಿದ್ದು ಕುಡುಕರ ಹಾವಳಿ ಹೆಚ್ಚಾಗಿದೆ.ಈ ನಡುವೆ ತೆರಕಣಾಂಬಿಹುಂಡಿಯಲ್ಲಿ ಮತ್ತೊಂದು ಬಾರ್ ತೆರೆದರೆ ನಿವಾಸಿಗಳಿಗೆ ತೊಂದರೆಯಾಗಲಿದೆ ಎಂದರು. ಗ್ರಾಪಂ ಸದಸ್ಯರು ಹಾಗೂ ಅಧ್ಯಕ್ಷರ ಅವಧಿ ಮುಗಿದಿರುವುದರಿಂದ ಪಿಡಿಒ ಸ್ವಂತ ತೀರ್ಮಾನದಿಂದ ಮದ್ಯದ ಅಂಗಡಿಗೆ ಜನರಲ್ ಲೈಸೆನ್ಸ್ ಹಾಗೂ ಎನ್‌ಒಸಿ ನೀಡಿದ್ದಾರೆ. ಈ ಸಂಬಂಧ ಅಬಕಾರಿ ಡಿಸಿ ಹಾಗೂ ಇನ್ಸ್ಪೆಕ್ಟರ್‌ಗೆ ಮನವಿ ಸಲ್ಲಿಸಲಾಗಿದೆ. ಅಬಕಾರಿ ಇನ್‌ಸ್ಪೆಕ್ಟರ್ ನಮಗೆ ಮಾಹಿತಿ ನೀಡದೆ ಸ್ಥಳ ಮಹಜರು ನಡೆಸಿದ್ದಾರೆ ಎಂದು ತಿಳಿಸಿದರು.ಸಂಬಂಧಪಟ್ಟ ಅಬಕಾರಿ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಇತ್ತ ಗಮನಹರಿಸಿ ಹೊಸ ಬಾರ್ ತೆರೆಯಲು ಅನುಮತಿ ನೀಡಬಾರದು. ಒಂದು ವೇಳೆ ಅನುಮತಿ ನೀಡಿದರೆ ಗ್ರಾಮಸ್ಥರೆಲ್ಲರೂ ಸೇರಿ ಪ್ರತಿಭಟನೆಯನ್ನು ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಪತ್ರಿಕಾಗೋಷ್ಠಿಯಲ್ಲಿ ಸುರೇಶ್, ನಂದೀಶ್, ಪ್ರದೀಪ್, ವಿನೋದ್, ಮಂಜು, ಪ್ರತಾಪ್, ಶಂಭು, ಜಗದೀಶ್ ಮನೋಜ್, ಅಶೋಕ ಹಾಜರಿದ್ದರು.

# ಬಸವರಾಜುಗೆ ವಿಧಾನ ಪರಿಷತ್ ಸ್ಥಾನ ನೀಡುವಂತೆ ಮನವಿ

ಮೈಸೂರು: ಹಿರಿಯ ಕಾಂಗ್ರೆಸ್ ಮುಖಂಡ ವಿ.ಎಸ್. ಉಗ್ರಪ್ಪ ಅವರಿಗೆ ರಾಜ್ಯಸಭಾ ಸದಸ್ಯತ್ವ ಹಾಗೂ ಎಸ್.ಸಿ. ಬಸವರಾಜುಗೆ ವಿಧಾನ ಪರಿಷತ್ ಸದಸ್ಯತ್ವ ನೀಡಬೇಕೆಂದು ಏಕಲವ್ಯ ವಿದ್ಯಾರ್ಥಿ ಯುವಜನ ಪರಿಷತ್ ಕರ್ನಾಟಕ ಸಂಘಟನೆ ಪಕ್ಷದ ವರಿಷ್ಠರಲ್ಲಿ ಮನವಿ ಮಾಡಿದೆ.

ಈ ಕುರಿತು ನಗರದಲ್ಲಿ ಅಧ್ಯಕ್ಷ ದೀಪಕ್ ಪಾಳೇಗಾರ್ ಸುದ್ದಿಗಾರರೊಡನೆ ಮಾತನಾಡಿ, ದಶಕಗಳ ರಾಜಕೀಯ ಅನುಭವ ಹೊಂದಿರುವ ಉಗ್ರಪ್ಪ ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯ ತಡೆ ಸಮಿತಿ ಅಧ್ಯಕ್ಷರಾಗಿ ಸಮಗ್ರ ವರದಿ ನೀಡಿ, ಕ್ರಾಂತಿಕಾರಕ ಶಿಫಾರಸು ಸರ್ಕಾರಕ್ಕೆ ಸಲ್ಲಿಸಿದ್ದಾರೆ. ಅನುಭವ ಸಂಪನ್ನ ಮತ್ತು ಪ್ರಾಮಾಣಿಕ ರಾಜಕಾರಣಿಯೂ ಆಗಿದ್ದಾರೆ. ಹೀಗಾಗಿ ರಾಜ್ಯಸಭೆಗೆ ಕಳುಹಿಸಬೇಕೆಂದು ಕೋರಿದರು. ವಿಕಾಸ ವೃಕ್ಷ ಫೌಂಡೇಷನ್ ಅಧ್ಯಕ್ಷ ಜಿ.ಆರ್. ರಾಜೇಶ್ ನಾಯಕ್ ಮಾತನಾಡಿ, ನಾಯಕ ಸಮುದಾಯದ ಹಿರಿಯ ಧುರೀಣ ಎಸ್.ಸಿ. ಬಸವರಾಜು ಕಳೆದ 40 ವರ್ಷಗಳಿಂದ ರಾಜಕೀಯದಲ್ಲಿ ಸಕ್ರಿಯರಾಗಿದ್ದು, ಯಾವುದೇ ಸಂದರ್ಭದಲ್ಲಿಯೂ ಪಕ್ಷಾಂತರ ಮಾಡದೇ ನಿಷ್ಠೆ ಪ್ರದರ್ಶಿಸಿದ್ದಾರೆ. ರಾಜ್ಯ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿಯೂ ಅಪಾರ ಸೇವೆ ಸಲ್ಲಿಸಿದ್ದಾರೆ. ಹೀಗಾಗಿ ಸಾಮಾಜಿಕ ಮತ್ತು ಪ್ರಾದೇಶಿಕ ನ್ಯಾಯದ ಅಡಿಯಲ್ಲಿ ಇವರಿಗೆ ಎಂಎಲ್ಸಿ ಸ್ಥಾನ ನೀಡಬೇಕೆಂದು ಕೋರಿದರು. ನಿರಂಜನ್ ಎಸ್. ಕಳಲೆ, ಸಿ. ಮಹದೇವು ಸಾಹುಕಾರ ಹುಂಡಿ, ಶಿವರಾಜ್ ಬಿ. ನಂದಗೋಕುಲ ಮೊದಲಾದವರು ಇದ್ದರು.

# ಡಿಕೆಶಿಯವರು ಉತ್ತಮ ಆಡಳಿತ ನೀಡಲಿ: ಪ್ರತಾಪ ಸಿಂಹ

ಮೈಸೂರು: ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿರುವ ಸಿದ್ದರಾಮಯ್ಯನವರ ಮುಂದಿನ ಜೀವನ ಚೆನ್ನಾಗಿರಲಿ. ನೂತನ ಸಿಎಂ ಆಗಲಿರುವ ಡಿ.ಕೆ.ಶಿವಕುಮಾರ್ ಉತ್ತಮ ಆಡಳಿತ ನಡೆಸಲಿ ಎಂದು ಮಾಜಿ ಸಂಸದ ಪ್ರತಾಪಸಿಂಹ ಹಾರೈಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಇಂದು ರಾಜ್ಯ ಸರ್ಕಾರದ ಕಾರ್ಯ ವೈಖರಿ ವಿಮರ್ಶೆ ಮಾಡುವುದಿಲ್ಲ.



ಮುಖ್ಯಮಂತ್ರಿ ಆಗುತ್ತಿರುವ ಡಿ.ಕೆ.ಶಿವಕುಮಾರ್ ಬಗ್ಗೆಯೂ ಟೀಕೆ ಮಾಡಲ್ಲ. ಸಿದ್ದರಾಮಯ್ಯ ಅವರ ಆಡಳಿತದ ಬಗ್ಗೆಯೂ ವಿಮರ್ಶೆ ಮಾಡುವುದಿಲ್ಲ. ಮೂರು ವರ್ಷದಿಂದಲೂ ಈ ಸರ್ಕಾರವನ್ನು ಟೀಕೆ ಮಾಡಿದ್ದೇನೆ. ಈಗ ಟೀಕೆ ಮಾಡುವ ಸಮಯವಲ್ಲ. ಸಿದ್ದರಾಮಯ್ಯನವರು ಗೌರವಯುತವಾಗಿ ಸ್ಥಾನ ಬಿಟ್ಟುಕೊಟ್ಟಿದ್ದಾರೆ. ಅವರ ಮುಂದಿನ ಜೀವನ ಸುಖಕರವಾಗಿರಲಿ ಎಂದರು.

ಮೂರು ವರ್ಷದ ಹಿಂದೆ ಸಿದ್ದರಾಮಯ್ಯ ಯಾವ ರೀತಿ ಸಂಭ್ರಮ, ಸಡಗರದಲ್ಲಿದ್ದರೋ ಅದೇ ರೀತಿ ಈಗ ಡಿ.ಕೆ.ಶಿವಕುಮಾರ್ ಅವರಿಗೆ ಒಳ್ಳೆಯದಾಗಲಿ. ಒಳ್ಳೆಯ ಆಡಳಿತ ಕೊಟ್ಟು ಟೀಕೆಗಳಿಂದ ತಪ್ಪಿಸಿಕೊಳ್ಳಲಿ. ಅವರು ಕೆಟ್ಟ ಆಡಳಿತ ಕೊಟ್ಟರೆ ಟೀಕೆಗಳು ಸಹಜವಾಗಿಯೇ ಸೃಷ್ಟಿಯಾಗುತ್ತವೆ. ಅವರ ನಡೆ ನುಡಿಯ ಮೇಲೆ ನಮ್ಮ ಮಾತು ನಿಂತಿರುತ್ತದೆ. ಅವರನ್ನು ಈಗಲೇ ವಿಮರ್ಶೆ ಮಾಡಿ ಟೀಕೆ ಮಾಡುವುದು ನನಗೆ ಸರಿ ಅನಿಸುವುದಿಲ್ಲ. 2028ಕ್ಕೆ ಜೆಡಿಎಸ್ ಬಿಜೆಪಿ ಸರ್ಕಾರ ತರಬೇಕೆಂದು ಜನ ನಿರ್ಧರಿಸಿದ್ದಾರೆ. ಇಷ್ಟನ್ನು ಮಾತ್ರ ನಾನು ಹೇಳಬಲ್ಲೆ ಎಂದು ಹೇಳಿದರು.

# ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಿ

ಗುಂಡ್ಲುಪೇಟೆ: ಉಪ್ಪಾರ ಸಮಾಜದ ಹಿರಿಯ ರಾಜಕಾರಣಿ, ಸರಳ, ಕಳಂಕರಹಿತ ವ್ಯಕ್ತಿತ್ವ ಹೊಂದಿರುವ ಪುಟ್ಟರಂಗ ಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಿ ಸಮಾಜಕ್ಕೆ ಪ್ರಾತಿನಿಧ್ಯ ನೀಡಬೇಕು' ಎಂದು ತಾಲ್ಲೋಕಿನ ಉಪ್ಪಾರ ಸಮಾಜದ ಮುಖಂಡರುಗಳು ಒತ್ತಾಯಿಸಿದ್ದಾರೆ.

ಪಟ್ಟಣದ ಹಳೆ ಪ್ರವಾಸಿ ಮಂದಿರದಲ್ಲಿ ಉಪ್ಪಾರ ಸಮಾಜದ ಮುಖಂಡರುಗಳು ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ತಾಲೂಕು ಉಪ್ಪಾರ ಸಂಘದ ತಾಲ್ಲೋಕು ಅಧ್ಯಕ್ಷ ಶಿವಶಂಕರ್ ರವರು ಮಾತ ನಾಡಿ ರಾಜ್ಯದಲ್ಲಿ ಸುಮಾರು 40 ಲಕ್ಷ ಜನಸಂಖ್ಯೆ ಹೊಂದಿರುವ ಉಪ್ಪಾರ ಸಮಾಜವು ಕಾಂಗ್ರೆಸ್ ಪಕ್ಷದ ತತ್ವ-ಸಿದ್ಧಾಂತಗಳನ್ನು ನಂಬಿಕೊಂಡು, ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಬೆಂಬಲವಾಗಿ ನಿಂತು, ಅನೇಕ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಕಾರಣ ರಾಗಿದ್ದಾರೆ. ಅನೇಕ ಕ್ಷೇತ್ರಗಳಲ್ಲಿ ಉಪ್ಪಾರ ಸಮಾಜದ ಮತಗಳು ನಿರ್ಣಾಯಕವಾಗಿವೆ. ಪಕ್ಷದ ಬಲವರ್ಧನೆಗೆ ಸದಾ ಬೆಂಬಲವಾಗಿ ನಿಂತಿರುವ ಉಪ್ಪಾರ ಸಮಾಜಕ್ಕೆ ಪ್ರಾತಿನಿಧ್ಯ ನೀಡುವುದು ಸರ್ಕಾರ ಮತ್ತು ಪಕ್ಷದ ಜವಾಬ್ದಾರಿಯಾಗಿದೆ, ಆದ್ದರಿಂದ ಉಪ್ಪಾರ ಸಮಾಜಕ್ಕೆ ಆದ್ಯತೆ ನೀಡಬೇಕು ಎಂದರು.

ಬೀಮನಬೀಡು ಗ್ರಾಮ ಪಂ ಮಾಜಿ ಅಧ್ಯಕ್ಷ ಹಾಗೂ ಉಪ್ಪಾರ ಸಂಘದ ಸಹಕಾರ್ಯದರ್ಶಿ ಬಿ ಜೆ ಶಿವಕುಮಾರ್ ಮಾತನಾಡಿ ರಾಜ್ಯದಲ್ಲಿ ಪುಟ್ಟರಂಗಶೆಟ್ಟಿಯವರು ಉಪ್ಪಾರ ಸಮುದಾಯದಿಂದ ಗೆದ್ದಿರುವ ಏಕೈಕ ಶಾಸಕರಾಗಿದ್ದಾರೆ. ರಾಜ್ಯದಲ್ಲಿ ಸುಮಾರು 40 ಲಕ್ಷಕ್ಕೂ ಹೆಚ್ಚು ಉಪ್ಪಾರ ಜನಾಂಗದವರು ಇದ್ದಾರೆ ಆದ್ದರಿಂದ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಪುಟ್ಟರಂಗ ಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂಬ ಕೂಗು ಜನಾಂಗದಲ್ಲಿ ಕೇಳಿ ಬರುತ್ತಿದೆ. ಇವರು ಚಾಮರಾಜನಗರ ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡರಾಗಿದ್ದಾರೆ ಸತತ ನಾಲ್ಕು ಬಾರಿ ಗೆಲುವು ಸಾಧಿಸಿದ್ದಾರೆ ಹಿಂದೆ ಅತ್ಯಲ್ಪ ಅವಧಿಗೆ ಸಚಿವರಾಗಿದ್ದಾರೆ ಅದ ಕಾರಣ ಈ ಬಾರಿ ಸಂಪುಟ ಪುನಾರಚನೆಯ ಸಂದರ್ಭದಲ್ಲಿ ಪುಟ್ಟರಂಗಶೆಟ್ಟಿಯವರಿಗೆ ಸಚಿವ ಸ್ಥಾನ ನೀಡಬೇಕೆಂದು ಪಕ್ಷಾತೀತವಾಗಿ ಒತ್ತಾಯಿಸಿದರು

ಈ ಪತ್ರಿಕಾಗೋಷ್ಠಿಯಲ್ಲಿ ಸಂಘದ ಗೌರವ ಅಧ್ಯಕ್ಷ ಜೆ ಸಿ ಕೃಷ್ಣಸ್ವಾಮಿ, ಸಂಘದ ಖಂಜಾಂಚಿಯಾದ ಮಹೇಶ್ ಬನ್ನಿತಾಳಪುರ, ಎಂಪಿಸಿಎಸ್ ಅಧ್ಯಕ್ಷರಾದ ಕುಮಾರಸ್ವಾಮಿ, ಸಮಾಜದ ಮುಖಂಡರಾದ ಮಹದೇವಶೆಟ್ಟಿ ಅಣ್ಣೂರುಕೇರಿ, ನಂಜಶೆಟ್ಟಿ ಅಣ್ಣೂರುಕೇರಿ, ಬೇಗೂರು ಮಾಜಿ ಗ್ರಾ.ಪಂ ಅಧ್ಯಕ್ಷ ರಾಜಶೆಟ್ಟಿ, ಮತ್ತು ಅಣ್ಣಯ್ಯಶೆಟ್ಟಿ, ಚಿಕ್ಕಮಾದಶೆಟ್ಟಿ ಕೆಲಸೂರು, ಪಟೇಲ ನಾಗಶೆಟ್ಟಿ, ಸ್ವಾಮಿಕೋಡಹಳ್ಳಿ, ಗೋಪಾಲಶೆಟ್ಟಿ ಕೂತನೂರು, ಮಾದಶೆಟ್ಟಿ ಅಣ್ಣೂರುಕೇರಿ, ಜೆ ಮಹೇಶ್ ಸೇರಿದಂತೆ ಹಲವು ಮುಖಂಡರು ಹಾಜರಿದ್ದರು.

# ಬಳಕೆಯಿಂದ ಕನ್ನಡದ ಬೆಳವಣಿಗೆ

## ಪ್ರೊ.ವ.ನಂ.ಶಿವರಾಮು ಹೇಳಿಕೆ | ಸೋಬಾನೇ ಗೀತಗಾಯನ ತರಬೇತಿ ಶಿಬಿರ

ರಾಮನಗರ: ಕನ್ನಡ ಭಾಷೆಗೆ ಅಕ್ಷರಸ್ಥರಿಂದ ಯಾವುದೇ ಕೊಡುಗೆಯೂ ಇಲ್ಲ. ಆದರೆ ಅಕ್ಷರದ ಹಂಗಿಲ್ಲದ ನಿರಕ್ಷರಿಗಳು ತಮ್ಮ ಕಲಾನೈಪುಣ್ಯತೆ ಹೊಂದಿರುವವರ ಭಾಷಾ ಬಳಕೆಯಿಂದ ಕನ್ನಡ ಭಾಷೆಯ ಬೆಳವಣಿಗೆ ಸಾಧ್ಯವಾಗಿದೆ ಎಂದು ಇಫ್ರೋ ಜಾನಪದ ಮಹಾವಿದ್ಯಾಲಯದ ಶೈಕ್ಷಣಿಕ ನಿರ್ದೇಶಕ ಪ್ರೊ. ವ ನಂ ಶಿವರಾಮು ಹೇಳಿದರು.

ತಾಲ್ಲೂಕಿನ ಕೃಷ್ಣಾಪುರದೊಡ್ಡಿಯ ಕೆ ಎಸ್ ಮುದ್ದಪ್ಪ ಸ್ಮಾರಕ ಟ್ರಸ್ಟ್ ಬೆಂಗಳೂರು ದಕ್ಷಿಣ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕಚೇರಿಯಲ್ಲಿ ನಾಲ್ಕು ದಿನಗಳ ಕಾಲ ಹಮ್ಮಿಕೊಂಡಿರುವ ಸೋಬಾನೇ ಗೀತಗಾಯನ ತರಬೇತಿ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಗಾಯನ ಅಥವಾ ಜನಪದ ಕಲಾ ಪ್ರಕಾರಗಳ ಕಲಿಕೆ ಕಲಾವಿದರನ್ನು ದೇಶ ವಿದೇಶಗಳಿಗೆ ಕೊಂಡೊಯ್ಯುವ ವಾಹಕವಾಗಿವೆ. ಜೀವಮಾನವೆಲ್ಲ ಅಧ್ಯಯನದಲ್ಲಿ ತೊಡಗಿದ ವಿದ್ವಾಂಸರು ಜನಪದ ಸಾಹಿತ್ಯದ ಸ್ವರೂಪಗಳನ್ನು ತಿಳಿಸಬಹುದು. ಹಾಗೆಯೇ ಅವರು ಇದ್ದಲ್ಲಿಯೇ ಇರುತ್ತಾರೆ. ಆದರೆ ಜನಪದ ಕಲಾವಿದರ ಶ್ರಮ ಮತ್ತು ಕಂಠಮಾದುರ್ಯದಿಂದ ಸಮೂಹವನ್ನು ಆಕರ್ಷಿಸುವ ಶಕ್ತಿ ಪಡೆದಿರುತ್ತಾರೆ. ಆ ಶಕ್ತಿಯಿಂದಲೇ ಅವರು ಎಲ್ಲೆಡೆ ವಿಜೃಂಭಿಸುತ್ತಾರೆ, ಆಕರ್ಷಣೆಯ ಕೇಂದ್ರವಾಗುತ್ತಾರೆ ಎಂದು ಕಲೆ-ಕಲಾವಿದರ ಮಹತ್ತಿನ ಬಗ್ಗೆ ವಿವರಿಸಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಸಿಎನ್ ಮಂಜೇಶ್ ಚನ್ನಾಪುರ ಸಾಂಸ್ಕೃತಿಕ ಸಂಘಟಕ ಕೀಲಾರ ಕೃಷ್ಣೇಗೌಡ ಸಂಗೀತ ಶಿಕ್ಷಕಿ ವಿನುತಾ ಬೂದಿಹಾಲ್ ಹಾಗೂ ಸೋಬಾನೆ ಗೀತೆ ತರಬೇತುದಾರ ಸೋಬಾನೆ ಕೃಷ್ಣೇಗೌಡ ಮತ್ತವರ ತಂಡದ ಹಿರಿಯ ಕಲಾವಿದರಾದ ದೇವಮ್ಮ ಜಯಮ್ಮ ಚಿಕ್ಕಮಾದಮ್ಮ ಉಪಸ್ಥಿತರಿದ್ದರು. ಬೆಂಗಳೂರು ನಗರ ಸೇರಿದಂತೆ ಹದಿನೈದು ಮಂದಿ ಶಿಬಿರಾರ್ಥಿಗಳು ನಾಲ್ಕು ದಿನಗಳ ಶಿಬಿರದಲ್ಲಿ ಪಾಲ್ಗೊಂಡಿದ್ದಾರೆ.



### ಜಾನಪದ ಸೊಗಡು ನಾಶವಾಗುತ್ತಿದೆ

ಕಾರ್ಯಕ್ರಮದ ಅತಿಥಿಗಳಾಗಿ ಪಾಲ್ಗೊಂಡಿದ್ದ ಸಂಸ್ಕೃತಿ ಚಿಂತಕ ಸು.ಚಿ.ಗಂಗಾಧರಯ್ಯ ಮಾತನಾಡಿ ಪೂರ್ವಜರ ಸೇವೆಯ ಬದುಕೇ ಜಾನಪದವಾಗಿತ್ತು. ಕೂಡು ಕುಟುಂಬದ ಪರಿಕಲ್ಪನೆ ಇಂದು ವಿನಾಶದ ಎಡೆಗೆ ಧಾವಿಸುತ್ತಿದೆ. ಮೂರು ನಾಲ್ಕು ತಲೆಮಾರುಗಳು ಒಂದೇ ಸೂರಿನಡಿ ಬದುಕುತ್ತಿದ್ದ ದಿನಗಳು ಕಳೆದುಹೋಗಿ ಅವಿಭಕ್ತ ಕುಟುಂಬ ವ್ಯವಸ್ಥೆಗೆ ಪೆಟ್ಟುಕೊಟ್ಟಿದೆ. ನಮ್ಮ ಪರಂಪರೆಯ ಆ ಎಲ್ಲಾ ಜಾನಪದ ಸೊಗಡು ಬೇರುಸಹಿತ ನಾಶವಾಗುತ್ತಿದೆ ಎಂದು ವಿಷಾದಿಸಿದರು. ಬೆಂಗಳೂರು ದಕ್ಷಿಣ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿಟಿ ನಾಗೇಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.


### ಮೂಲ ಕಲಾವಿದರು ಮುಖ್ಯವಾಹಿನಿಗೆ ಬರುವಂತಾಗಬೇಕು - ಡಾ.ಎಂ.ಬೈರೇಗೌಡ

ಕೆ ಎಸ್ ಮುದ್ದಪ್ಪ ಸ್ಮಾರಕ ಟ್ರಸ್ಟ್ ಕಾರ್ಯದರ್ಶಿ ಡಾ ಎಂ ಬೈರೇಗೌಡ ಪ್ರಾಸ್ತಾವಿಕವಾಗಿ ಮಾತನಾಡಿ ಅಕ್ಷರ ಕಲಿತವರು ಕದ್ದಮಾಲನ್ನು ತಮ್ಮ ಸೀಮಿತ ಪ್ರತಿಭೆಯ ಜೊತೆಗೆ ವಾದ್ಯ ಪರಿಕರಗಳನ್ನು ಬಳಸಿಕೊಂಡು ಎಲ್ಲ ಸವಲತ್ತುಗಳನ್ನು ಪಡೆಯುತ್ತಾರೆ ಹಾಗೇ ದೇಶವಿದೇಶಗಳನ್ನೂ ಸುತ್ತಿ ಬಂದು ತಾವು ಅಂತಾರಾಷ್ಟ್ರೀಯ ಕಲಾವಿದರೆಂದು ಹಣೆಪಟ್ಟಿ ಕಟ್ಟಿಕೊಳ್ಳುತ್ತಾರೆ. ಆದರೆ ಸ್ವತಃ ಕಟ್ಟುವ, ನೆನಪಿನ ಬುತ್ತಿಯಿಂದ ಹೆಕ್ಕಿ ತೆಗೆದು ನಿರರ್ಗಳವಾಗಿ ದಿನಗಟ್ಟಳೆ ಹಾಡುವ ಮತ್ತು ತಮ್ಮ ಕಂಠದಿಂದಲೇ ಜನಪ್ರಿಯಗೊಂಡ ಮೂಲ ಕಲಾವಿದರು ಇದ್ದಲ್ಲಿಯೇ ಇದ್ದಾರೆ. ಮೂಲಕಲಾವಿದರಿಂದ ಅಷ್ಟೋ ಇಷ್ಟೋ ಕಲಿತ ಕಿಲಾಡಿ ಕಲಾವಿದರು ತಾವು ಖಾಲಿ ಡಬ್ಬದೊಳಗಿನ ಕಲ್ಲುಗಳಂತೆ ವಿಜೃಂಭಿಸುತ್ತಿದ್ದಾರೆ. ಈ ಪ್ರಕ್ರಿಯೆ ನಿಲ್ಲಬೇಕು ಮೂಲ ಕಲಾವಿದರು ಮುಖ್ಯ ವಾಹಿನಿಗೆ ಬರುವಂತದಾಗ ಜನಪದದ ಎಲ್ಲ ಪ್ರಕಾರಗಳು ಮತ್ತು ಕನ್ನಡ ಭಾಷೆ ಉದ್ಧಾರವಾಗುತ್ತದೆ ಎಂಬ ಆಶಯ ವ್ಯಕ್ತಪಡಿಸಿದರು.

### ಮೂಲ ಸ್ವರೂಪ ಕಳೆದುಕೊಳ್ಳುತ್ತಿರುವ ಜನಪದ

ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯೆ ಡಾ. ಕೆಂಪಮ್ಮ ಮಾತನಾಡಿ ಮನುಷ್ಯನ ಹುಟ್ಟಿನ ಜೊತೆಗೆ ಜನಪದದ ಜನನವಾಗುತ್ತದೆ ಅದರ ಸಾವು ಮಾನವನ ಸಾವಿನ ಆಚರಣೆಯಲ್ಲಿ ಪರ್ಯಾವಸಾನವಾಗಿಬಿಡುತ್ತದೆ. ಇಂಥ ಅನುಭವಗಳನ್ನು ಅನುಭವಿಸಬೇಕಾದ ಬಗ್ಗೆ ಮಾರ್ಗದರ್ಶನ ನೀಡುವ ಜನ ಇಲ್ಲವಾಗುತ್ತಿದ್ದಾರೆ. ಜನಪದ ಗೀತೆಗಳು ನಮಗೆ ಮಾರ್ಗದರ್ಶನ ನೀಡುತ್ತವೆ ಆದರೆ ಇಂದು ಅದೆಲ್ಲ ಕಲಿತವರ ಕೈಗೆ ಸಿಕ್ಕು ಮೂಲ ಸ್ವರೂಪವನ್ನು ಕಳೆದುಕೊಂಡು ಅಂದಿನ ವೈಭವವು ಇಲ್ಲವಾಗುತ್ತಿದೆ ಎಂದರು.

# ಪುಟ್ಟರಂಗಶೆಟ್ಟಿಗೆ ಸಚಿವರಾಗಲು ಮನವಿ



ಚಾಮರಾಜನಗರ, ಯಳಂದೂರು ತಾಲೂಕಿನ ಕಂದಹಳ್ಳಿ ಗ್ರಾಮದ ಶ್ರೀ ಮಹದೇಶ್ವರ ದೇವಸ್ಥಾನದಲ್ಲಿ ಉಪ್ಪಾರ ಸಮುದಾಯದ ಕಾಂಗ್ರೆಸ್ ಮುಖಂಡರುಗಳಿಂದ ಚಾಮರಾಜನಗರ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸಚಿವಸ್ಥಾನ ನೀಡಲಿ ಎಂದು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮದ್ದೂರು ರಂಗಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ ಸತತವಾಗಿ ನಾಲ್ಕು ಬಾರಿ ಶಾಸಕರಾಗಿರುವ ಪುಟ್ಟರಂಗ ಶೆಟ್ಟಿ ಅವರಿಗೆ ಕಾಂಗ್ರೆಸ್ ಸರ್ಕಾರ ಸಚಿವಸ್ಥಾನವನ್ನು ನೀಡಬೇಕು. ಒಂದುವೇಳೆ ಸರ್ಕಾರ ನಿರಾಕರಿಸಿದರೆ ಉಪ್ಪಾರ ಸಮುದಾಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ರೂಪಿಸಲಿದೆ ಎಂದರು.

ಮುಖಂಡರಾದ ವೈ.ಬಿ.ಮಹೇಶ್ ಮಾತನಾಡಿ, ಪುಟ್ಟರಂಗಶೆಟ್ಟಿ ಅವರು ಚಾಮರಾಜನಗರದಲ್ಲಿ ಘಟನುಗಾಟಿ ನಾಯಕರನ್ನು ಸೋಲಿಸಿ ನಾಲ್ಕು ಬಾರಿ ಗೆದ್ದು ಸೋಲಿಲ್ಲದ ಸರದಾರರಾಗಿದ್ದಾರೆ. ಇಂತಹ ಹಿಂದುಳಿದ ಸಮಾಜದ ನಾಯಕ ಉಪ್ಪಾರ ಸಮುದಾಯದ ಧ್ವನಿ ಆಗಿರುವ ಪುಟ್ಟರಂಗ ಶೆಟ್ಟಿ ರವರಿಗೆ ಸಚಿವಸ್ಥಾನವನ್ನು ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪುಟ್ಟರಂಗ ಶೆಟ್ಟಿ ಅಭಿಮಾನಿಬಳಗದ ತಾಲೂಕು ಅಧ್ಯಕ್ಷ ಯರಿಯೂರು ಕಿರಣ್, ಯಜಮಾನರಾದ ನಂಜುಂಡ ಶೆಟ್ಟಿ, ಮಹಾದೇವ, ಶಾಂತರಾಜು, ರಾಚಶೆಟ್ಟಿ, ಸ್ವಾಮಿ, ಪಿ.ಮಾದೇಶ್, ನಂಜುಂಡಸ್ವಾಮಿ, ನಾಗರಾಜು, ನಾಗೇಗೌಡ, ಮಂಜುನಾಥ್, ಚಂದ್ರುಗೌಡ ಹಾಜರಿದ್ದರು.

# ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಿ




ಚಾಮರಾಜನಗರ, ರಾಜ್ಯದ ಉಪ್ಪಾರ ಸಮುದಾಯದ ಏಕೈಕ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನವನ್ನು ನೀಡಬೇಕು ಎಂದು ಕಾಂಗ್ರೆಸ್ ಓಬಿಸಿ ವಿಭಾಗದ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ಒತ್ತಾಯಿಸಿದರು.

ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಸತತ ನಾಲ್ಕು ಬಾರಿ ಗೆಲುವು ಸಾಧಿಸಿರುವ ಪುಟ್ಟರಂಗಶೆಟ್ಟಿ ಅವರು ತಮ್ಮ ಸರಳ, ಸಜ್ಜನಿಕೆಯ ವ್ಯಕ್ತಿತ್ವದ ಮೂಲಕ ಅಪಾರವಾದ ಹೆಸರು ಗಳಿಸಿದ್ದಾರೆ. ಕೇವಲ ಉಪ್ಪಾರ ಸಮುದಾಯಕ್ಕೆ ಸೀಮಿತವಾಗದೇ ಸರ್ವಜನಾಂಗದ ಅಭಿವೃದ್ಧಿಗೆ ಪುಟ್ಟರಂಗಶೆಟ್ಟಿ ಅವರು ಶ್ರಮಿಸಿದ್ದಾರೆ. ಈ ನಿಟ್ಟಿನಲ್ಲಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಆಗ್ರಹಿಸಿದರು.

ರಾಜ್ಯದಲ್ಲಿ 40 ಲಕ್ಷಕ್ಕಿಂತಲೂ ಹೆಚ್ಚು ಉಪ್ಪಾರ ಸಮುದಾಯದವರು ಇದ್ದು, ಸುಮಾರು 33 ವಿಧಾನಸಭಾ ಕ್ಷೇತ್ರಗಳಲ್ಲಿ ಉಪ್ಪಾರ ಸಮುದಾಯ ನಿರ್ಣಾಯಕ ಪಾತ್ರ ವಹಿಸುತ್ತದೆ. ಈ ಹಿಂದೆ ಸಚಿವರಾಗಿ ಸೇವೆ ಸಲ್ಲಿಸಿರುವ ಅನುಭವ ಇರುವುದರಿಂದ ಕಾಂಗ್ರೆಸ್ ಹೈಕಮಾಂಡ್ ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮನವಿ ಮಾಡಿದರು.

ಗೋಷ್ಠಿಯಲ್ಲಿ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಕೆರೆಹಳ್ಳಿ ರೇವಣ್ಣ, ಮಹಾದೇವಶೆಟ್ಟಿ, ಶ್ರೀನಿವಾಸ್, ಆಲನಹಳ್ಳಿ ಕಾವ್ಯ ಹಾಜರಿದ್ದರು.

**ತೋಟಗಾರಿಕೆ ಇಲಾಖೆ ಕರೆ**

# 'ಅಂಗಾಂಶ ಕೃಷಿ ಬಾಳೆ ಬೇಸಾಯ'ಕ್ಕೆ ರೈತರು ಮುಂದಾಗಿ

ರಾಮನಗರ: ಬಾಳೆ ಹಣ್ಣು ದೇಶದ ಅತ್ಯಂತ ಪ್ರಮುಖ ವಾಣಿಜ್ಯ ಬೆಳೆಯಾಗಿದ್ದು, ಕರ್ನಾಟಕ ರಾಜ್ಯದಲ್ಲಿ ಇದರ ಉತ್ಪಾದಕತೆಯನ್ನು ಹೆಚ್ಚಿಸಲು ಸಾಂಪ್ರದಾಯಿಕ ಬಾಳೆ ಕಂದುಗಳ ಬದಲಿಗೆ ವೈಜ್ಞಾನಿಕ ತಂತ್ರಜ್ಞಾನದ ಅಂಗಾಂಶ ಕೃಷಿ (ಟಿಶ್ಯೂ ಕಲ್ಚರ್) ಬಾಳೆ ಸಸಿಗಳನ್ನು ಬಳಸುವಂತೆ ತೋಟಗಾರಿಕೆ ಇಲಾಖೆ ರೈತರಲ್ಲಿ ವಿನಂತಿಸಿದೆ.



ಭಾರತದಲ್ಲಿ ವಾರ್ಷಿಕವಾಗಿ 9.00 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಸುಮಾರು 383.00 ಲಕ್ಷ ಮೆಟ್ರಿಕ್ ಟನ್ ಬಾಳೆ ಉತ್ಪಾದನೆಯಾಗುತ್ತಿದ್ದು, ಪ್ರತಿ ಹೆಕ್ಟೇರ್‌ಗೆ 42.00 ಮೆಟ್ರಿಕ್ ಟನ್ ಉತ್ಪಾದಕತೆ ಇದೆ. ಆದರೆ, ಕರ್ನಾಟಕದಲ್ಲಿ 46.00 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಕೇವಲ 12.00 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆಯಾಗುತ್ತಿದ್ದು, ಪ್ರತಿ ಹೆಕ್ಟೇರ್‌ಗೆ ಉತ್ಪಾದಕತೆ ಕೇವಲ 26.00 ಮೆಟ್ರಿಕ್ ಟನ್‌ಗಳಷ್ಟಿದೆ. ಇದು ರಾಷ್ಟ್ರೀಯ ಸರಾಸರಿಗಿಂತ ಗಣನೀಯವಾಗಿ ಕಡಿಮೆಯಾಗಿದೆ. ರೈತರಲ್ಲಿ ಸಮರ್ಪಕ ಮಾಹಿತಿಯ ಕೊರತೆಯಿಂದಾಗಿ ಇಂದಿಗೂ ಹಳೆಯ ಹಾಗೂ ಸಾಂಪ್ರದಾಯಿಕ ಬಾಳೆ ಕಂದುಗಳನ್ನು ನಾಟಿ ಮಾಡುತ್ತಿರುವುದೇ ಇದಕ್ಕೆ ಪ್ರಮುಖ ಕಾರಣವಾಗಿದೆ. ರಾಜ್ಯದಲ್ಲಿ ಬಾಳೆ ಇಳುವರಿಯನ್ನು ಹೆಚ್ಚಿಸಲು ತೋಟಗಾರಿಕೆ ಇಲಾಖೆಯು ರೈತರಿಗೆ ಸುಧಾರಿತ ತಂತ್ರಜ್ಞಾನದ ಅಂಗಾಂಶ ಕೃಷಿ (ಟಿಶ್ಯೂ ಕಲ್ಚರ್) ಬಾಳೆ ಸಸಿಗಳನ್ನು ಬಳಸುವಂತೆ ಪ್ರೋತ್ಸಾಹಿಸುತ್ತಿದೆ. ರೈತರು ಸಾಮಾನ್ಯವಾಗಿ ಬಳಸುವ ಸಾಂಪ್ರದಾಯಿಕ ಬಾಳೆ ಕಂದುಗಳಿಗೂ ಮತ್ತು ವೈಜ್ಞಾನಿಕವಾಗಿ ಪ್ರಯೋಗಾಲಯದಲ್ಲಿ ಸಿದ್ಧಪಡಿಸಲಾಗುವ ಅಂಗಾಂಶ ಕೃಷಿ ಸಸಿಗಳಿಗೂ ಇರುವ ಪ್ರಮುಖ ಹದಿಮೂರು (13) ವ್ಯತ್ಯಾಸಗಳನ್ನು ಇಲಾಖೆಯು ರೈತರ ಮಾಹಿತಿಗಾಗಿ ಬಿಡುಗಡೆ ಮಾಡಿದೆ.

### ಗಿಡಗಳ ಆರೋಗ್ಯ ಮತ್ತು ರೋಗ ನಿರೋಧಕ ಶಕ್ತಿ:

ಸಾಂಪ್ರದಾಯಿಕ ಬಾಳೆ ಕಂದುಗಳನ್ನು ಬಳಸಿದಾಗ ತೋಟದಲ್ಲಿ ರೋಗ ಮತ್ತು ಕೀಟಗಳು ಅತಿ ಶೀಘ್ರವಾಗಿ ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ಆದರೆ, ಅಂಗಾಂಶ ಕೃಷಿ ಸಸಿಗಳು ಪ್ರಯೋಗಾಲಯದ ನಿಯಂತ್ರಿತ ವಾತಾವರಣದಲ್ಲಿ ಬೆಳೆಯುವುದರಿಂದ ಅವು ಸಂಪೂರ್ಣವಾಗಿ ರೋಗರಹಿತ ಮತ್ತು ಆರೋಗ್ಯಕರವಾಗಿರುತ್ತವೆ. ಗಿಡಗಳ ಜೀವಂತಿಕೆಯ ಪ್ರಮಾಣವೂ ಅಂಗಾಂಶ ಕೃಷಿಯಲ್ಲಿ ಹೆಚ್ಚಾಗಿದ್ದು, ಸಾಂಪ್ರದಾಯಿಕ ಕಂದುಗಳಲ್ಲಿ ಗಿಡಗಳು ಬದುಕುಳಿಯುವ ಪ್ರಮಾಣ ಕಡಿಮೆಯಿರುತ್ತದೆ.

### ಬೆಳವಣಿಗೆ ಮತ್ತು ಕೊಯ್ಲಿನ ಅವಧಿ:

ಸಾಮಾನ್ಯ ಬಾಳೆ ಕಂದುಗಳನ್ನು ನಾಟಿ ಮಾಡಿದಾಗ ತೋಟದಲ್ಲಿ ಗಿಡಗಳ ಬೆಳವಣಿಗೆ ಏಕರೂಪವಾಗಿರದೆ ಅಸಮಾನವಾಗಿರುತ್ತದೆ ಮತ್ತು ಕೊಯ್ಲು ಕೂಡ ಬೇರೆ ಬೇರೆ ಸಮಯದಲ್ಲಿ ಬರುತ್ತದೆ. ಇದರಿಂದ ವ್ಯವಸ್ಥಿತವಾಗಿ ಮಾರುಕಟ್ಟೆ ಮಾಡುವುದು ಕಷ್ಟವಾಗುತ್ತದೆ. ಇದಕ್ಕೆ ವ್ಯತಿರಿಕ್ತವಾಗಿ, ಅಂಗಾಂಶ ಕೃಷಿ ಗಿಡಗಳು ಒಂದೇ ಸಮನಾಗಿ ಮತ್ತು ಏಕರೂಪವಾಗಿ ಬೆಳೆಯುವುದರಿಂದ, ಇಡೀ ತೋಟದ ಬೆಳೆ ಒಂದೇ ಸಮಯದಲ್ಲಿ ಕೊಯ್ಲಿಗೆ ಬರುತ್ತದೆ. ಇದು ರೈತರಿಗೆ ಮಾರುಕಟ್ಟೆಯ ಬೇಡಿಕೆಗೆ ತಕ್ಕಂತೆ ಒಟ್ಟಿಗೆ ಕೊಯ್ಲು ಮಾಡಲು ನೆರವಾಗುತ್ತದೆ.

### ಇಳುವರಿ ಮತ್ತು ಹಣ್ಣಿನ ಗುಣಮಟ್ಟ:

ಅಂಗಾಂಶ ಕೃಷಿ ತಂತ್ರಜ್ಞಾನದ ಅತಿ ದೊಡ್ಡ ಲಾಭವೇನೆಂದರೆ, ಇದರಲ್ಲಿ ಅತ್ಯಂತ ಹೆಚ್ಚಿನ ಹಾಗೂ ಸ್ಥಿರವಾದ ಇಳುವರಿ ಸಿಗುತ್ತದೆ. ಇವುಗಳ ಹಣ್ಣುಗಳು ಗಾತ್ರದಲ್ಲಿ ದೊಡ್ಡದಾಗಿದ್ದು, ಒಂದೇ ಸಮನಾದ ಆಕಾರ ಮತ್ತು ಅತ್ಯುತ್ತಮ ಗುಣಮಟ್ಟವನ್ನು ಹೊಂದಿರುತ್ತವೆ. ಆದರೆ ಸಾಂಪ್ರದಾಯಿಕ ಕಂದುಗಳಲ್ಲಿ ಇಳುವರಿ ಕಡಿಮೆಯಾಗುವುದರ ಜೊತೆಗೆ ಅಸ್ಥಿರವಾಗಿರುತ್ತದೆ ಹಾಗೂ ಹಣ್ಣಿನ ಗಾತ್ರ ಮತ್ತು ಗುಣಮಟ್ಟದಲ್ಲೂ ಸಾಕಷ್ಟು ವ್ಯತ್ಯಾಸಗಳು ಕಂಡುಬರುತ್ತವೆ.

### ರೋಗ ನಿರ್ವಹಣೆ ಸುಲಭ

ನೀರು, ಗೊಬ್ಬರ ಮತ್ತು ರೋಗ ನಿರ್ವಹಣೆ: ಸಾಂಪ್ರದಾಯಿಕ ಬೇಸಾಯದಲ್ಲಿ ನೀರು ಮತ್ತು ಗೊಬ್ಬರವು ಹೆಚ್ಚಾಗಿ ವ್ಯರ್ಥವಾಗುವ ಸಾಧ್ಯತೆ ಇರುತ್ತದೆ ಹಾಗೂ ರೋಗ ಹರಡುವಿಕೆ ಹೆಚ್ಚಿರುವುದರಿಂದ ನಿರ್ವಹಣೆ ಕಷ್ಟವಾಗುತ್ತದೆ..

### ಬೇಸಾಯದ ವೆಚ್ಚ-ಒಟ್ಟು ಲಾಭ

ಆರಂಭಿಕ ವೆಚ್ಚವನ್ನು ಗಮನಿಸಿದರೆ, ಸಾಂಪ್ರದಾಯಿಕ ಬಾಳೆ ಕಂದುಗಳ ಖರೀದಿ ವೆಚ್ಚ ಕಡಿಮೆಯಿರುತ್ತದೆ ಮತ್ತು ಅಂಗಾಂಶ ಕೃಷಿ ಸಸಿಗಳ ಆರಂಭಿಕ ವೆಚ್ಚ ಕೊಂಚ ಹೆಚ್ಚಿರುತ್ತದೆ. ಆದರೆ, ದೀರ್ಘಕಾಲಿಕ ಸುಸ್ಥಿರ ಕೃಷಿಯ ದೃಷ್ಟಿಯಿಂದ ನೋಡಿದಾಗ ಸಾಂಪ್ರದಾಯಿಕ ಪದ್ಧತಿಯಲ್ಲಿ ಮಣ್ಣಿನಲ್ಲಿ ರೋಗ ಸಂಗ್ರಹವಾಗುವ ಸಾಧ್ಯತೆ ಹೆಚ್ಚಿರುತ್ತದೆ ಮತ್ತು ಕಾರ್ಮಿಕ ನಿರ್ವಹಣಾ ವೆಚ್ಚ ಹೆಚ್ಚಾಗಿ ಲಾಭ ಅಸ್ಥಿರವಾಗಿರುತ್ತದೆ. ಆದರೆ ಅಂಗಾಂಶ ಕೃಷಿಯಲ್ಲಿ ಸುಲಭ ನಿರ್ವಹಣೆಯಿಂದಾಗಿ ಕಾರ್ಮಿಕ ವೆಚ್ಚ ಕಡಿಮೆಯಾಗುವುದಲ್ಲದೆ, ಮಾರುಕಟ್ಟೆಯಲ್ಲಿ ಹಣ್ಣುಗಳಿಗೆ ಉತ್ತಮ ಬೆಲೆ ಸಿಗುವುದರಿಂದ ದೀರ್ಘಾವಧಿಯಲ್ಲಿ ರೈತರಿಗೆ ಅತ್ಯಧಿಕ ಲಾಭ ದೊರೆಯುತ್ತದೆ.

### ರೈತರೇ ದರಗಳನ್ನು ಗಮನಿಸಿ

ವಿವಿಧ ಹಂತದ ಬಾಳೆ ಸಸಿಗಳ ದರ ಇಂತಿದೆ: ಎಕ್ಸ್ ಅಗಾರ್ ಹಂತದ ಸಸಿ: ಪ್ರತಿ ಸಸಿಗೆ ಕೇವಲ ರೂ. 6/-, 98 ಕ್ಯಾವಿಟಿವುಳ್ಳ ಪ್ರೋಟ್ರೇ ಸಸಿ: ಪ್ರತಿ ಸಸಿಗೆ ಕೇವಲ ರೂ. 7/-, 4"ಥ6" ಪಾಲಿಬ್ಯಾಗ್ ಸಸಿ: ಪ್ರತಿ ಸಸಿಗೆ ಕೇವಲ ರೂ. 12/-, ರೈತರು ಯಾವುದೇ ಖಾಸಗಿ ವ್ಯಕ್ತಿಗಳಿಂದ ವಂಚನೆಗೊಳಗಾಗದೆ, ಇಲಾಖೆಯ ಅಧಿಕೃತ ಹಾಗೂ ವಿಶ್ವಾಸಾರ್ಹ ಮೂಲದಿಂದಲೇ ಸಸಿಗಳನ್ನು ಖರೀದಿಸಿ ಆರ್ಥಿಕ ಪ್ರಗತಿ ಹೊಂದಬಹುದಾಗಿದೆ.

# ಅಭಿವೃದ್ಧಿ, ಮೂಲಸಮಸ್ಯೆಗಳ ಪರಿಹಾರಕ್ಕೆ ಆಗ್ರಹ



ಕೊಳ್ಳೇಗಾಲ. ಪಟ್ಟಣದ ಅಭಿವೃದ್ಧಿ ಹಾಗೂ ಸಾರ್ವಜನಿಕರ ಮೂಲಭೂತ ಸಮಸ್ಯೆಗಳ ಪರಿಹಾರಕ್ಕೆ ಆಗ್ರಹಿಸಿ ಬಹುಜನ ಸಮಾಜ ಪಕ್ಷದ ವತಿಯಿಂದ ನಗರಸಭೆ ಕಚೇರಿ ಎದುರು ಪ್ರತಿಭಟನೆ ನಡೆಯಿತು.

ನಗರಸಭೆಯಲ್ಲಿ ಸಾರ್ವಜನಿಕರ ಕೆಲಸಗಳು ವಿಳಂಬ ವಾಗುತ್ತಿವೆ, ಮೂಲಸೌಕರ್ಯಗಳ ಕೊರತೆ ಹೆಚ್ಚಾಗಿದೆ ಎಂದು ಆರೋಪಿಸಿದ ಪ್ರತಿಭಟನಾಕಾರರು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಿಎಸ್‌ಪಿ ರಾಜ್ಯಾಧ್ಯಕ್ಷ ಕೃಷ್ಣಮೂರ್ತಿ ಮಾತನಾಡಿ, ನಗರಸಭೆಯು ಪಟ್ಟಣ ನಿವಾಸಿಗಳಿಗೆ ಅಗತ್ಯ ಸೇವೆಗಳನ್ನು ಸಮರ್ಪಕವಾಗಿ ಒದಗಿಸುವಲ್ಲಿ ವಿಫಲವಾಗಿದೆ ಎಂದರು. ಸಾರ್ವಜನಿಕರು ಆಸ್ತಿ ಖಾತೆ ಸೇರಿದಂತೆ ವಿವಿಧ ದಾಖಲೆ ಗಳಿಗಾಗಿ ತಿಂಗಳಾನುಗಟ್ಟಲೆ ಅಲೆದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ಹೇಳಿದರು. ಸಂಸದರು, ಶಾಸಕರು ಹಾಗೂ ಜಿಲ್ಲಾಡಳಿತ ತಕ್ಷಣ ಗಮನಹರಿಸಿ ನಗರಸಭೆಯಲ್ಲಿನ ಸಮಸ್ಯೆಗಳನ್ನು ಪರಿಹರಿಸಬೇಕು. ಭ್ರಷ್ಟಾಚಾರದಲ್ಲಿ ತೊಡಗಿರುವ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ತಾಲೂಕು ಅಧ್ಯಕ್ಷ ಶಂಕರ್ ಚೇತನ್ ಮಾತನಾಡಿ, ಪಟ್ಟಣದಲ್ಲಿ ಕುಡಿಯುವ ನೀರು, ಒಳಚರಂಡಿ, ರಸ್ತೆ ಸೇರಿದಂತೆ ಅನೇಕ ಮೂಲಭೂತ ಸೌಲಭ್ಯಗಳ ಸಮಸ್ಯೆಗಳು ಮುಂದುವರಿದಿದ್ದರೂ ಸ್ಥಳೀಯ ಶಾಸಕರು ಮೌನವಾಗಿರುವುದು ಬೇಸರದ ಸಂಗತಿ ಎಂದರು.

ನಗರಸಭೆ ಸಾರ್ವಜನಿಕರ ಹಿತಾಸಕ್ತಿಗೆ ಕೆಲಸ ಮಾಡುವಂತೆ ಕ್ರಮ ಕೈಗೊಳ್ಳಬೇಕು ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ಆದ್ಯತೆ ನೀಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ್ದ ತಹಶಿಲ್ದಾರ್ ಬಸವರಾಜು ಅವರು ಮನವಿ ಸ್ವೀಕರಿಸಿ, ನಿಮ್ಮ ಅಹವಾಲು ಕುರಿತು ಜಿಲ್ಲಾಧಿಕಾರಿಗಳಿಗೆ ತಿಳಿಸುವ ಮೂಲಕ ಕೂಡಲೇ ಸಾರ್ವಜನಿಕರ ಸಭೆ ಕರೆಯಲು ನಿಮ್ಮ ಮನವಿ ನೀಡಲಾಗುವುದು ಎಂದರು. ಪ್ರತಿಭಟನೆಯಲ್ಲಿ ಬಿಎಸ್ಪಿ ರಾಜ್ಯ ಸಂಚಾಲಕ ಮಣಿ, ನಾಗಯ್ಯ, ಜಿಲ್ಲಾಧ್ಯಕ್ಷ ಬಾಮಾ ಕೃಷ್ಣಮೂರ್ತಿ, ಜಿಲ್ಲಾ ಉಸ್ತುವಾರಿ ವಕೀಲರು ಪುಟ್ಟಸ್ವಾಮಿ, ತಾಲ್ಲೂಕು ಅಧ್ಯಕ್ಷ ಶಂಕರ್ ಚೇತನ್, ಬ್ಲಾಕ್ ಅಧ್ಯಕ್ಷ ಶಶಿಧರ್, ತಾಲ್ಲೂಕು ಉಸ್ತುವಾರಿ ರಂಗಸ್ವಾಮಿ (ರವಿ), ಪ್ರಧಾನ ಕಾರ್ಯದರ್ಶಿ ಶಿವು ಉತ್ತಂಬಳ್ಳಿ, ಕವಿತಾ, ಶಿವಮ್ಮ, ನಗರಸಭೆ ಮಾಜಿ ನಾಮನಿರ್ದೇಶಿತ ಸದಸ್ಯ ಮಧುಚಂದ್ರ, ರೈತ ಮುಖಂಡರು ದಶರಥ, ರಾಮಕೃಷ್ಣ ಸೇರಿದಂತೆ ಅನೇಕರು ಹಾಜರಿದ್ದರು.

# ನಾಳೆ ಮಹಾ ಸಂಕಲ್ಪ ದಿವಸ್



ಮೈಸೂರು: ಮೈಸೂರು ಯೋಗ ಫೆಡರೇಷನ್ ಟ್ರಸ್ಟ್ ವತಿಯಿಂದ 12 ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಮೇ 31 ರಂದು ನಗರದ ಅರಮನೆ ಆವರಣದಲ್ಲಿ ಮಹಾ ಸಂಕಲ್ಪ ದಿವಸ್ ಆಯೋಜಿಸಲಾಗಿದೆ ಎಂದು ಜಿಎಸ್‌ಎಸ್ ಸಮೂಹ ಸಂಸ್ಥೆಗಳ ಮುಖ್ಯಸ್ಥ ಡಿ. ಶ್ರೀಹರಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಂದು ಬೆಳಗ್ಗೆ 5.30ಕ್ಕೆ ಕಾರ್ಯಕ್ರಮ ಆರಂಭವಾಗಲಿದೆ. ಇದರಲ್ಲಿ ಸುಮಾರು ಸಾವಿರ ಮಂದಿ ಯೋಗಾಸಕ್ತರು ಪಾಲ್ಗೊಳ್ಳುವರು. ಇದೇ ವೇಳೆ ನಗರದ ವಿವಿಧ ಅಪಾರ್ಟ್ಮೆಂಟ್, ಶಾಲಾ ಕಾಲೇಜು, ಉದ್ಯಾನಗಳಲ್ಲಿಯೂ ಸಾಕಷ್ಟು 120 ಕೇಂದ್ರಗಳಲ್ಲಿ ಸುಮಾರು 1.20 ಲಕ್ಷ ಮಂದಿ ಯೋಗಾಸನದಲ್ಲಿ ಪಾಲ್ಗೊಳ್ಳಲಿದ್ದಾರೆ. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ನೇತೃತ್ವ ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು. ಯೋಗದ ಮೂಲಕ ಆರೋಗ್ಯಕರ, ಶಾಂತಿಯುತ, ಶಿಸ್ತುಬದ್ಧ ಸಮಾಜ ನಿರ್ಮಾಣದ ಸಂಕಲ್ಪದೊಂದಿಗೆ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಇದರೊಡನೆ ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿಯೂ ಯೋಗದ ಪ್ರಚಾರ ಮತ್ತು ಪ್ರಸಾರ ಮಾಡಲು ಇದೇ ರೀತಿಯ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ವಿವರಿಸಿದರು. ಶಶಿಕುಮಾರ್, ಜಿ. ನಂಜುಂಡಸ್ವಾಮಿ, ದೇವರಾಜ್, ಅನಂತ್ ಹಾಗೂ ರಂಗನಾಥ್ ಇನ್ನಿತರರು ಇದ್ದರು.

# ಪ್ರಾಥಮಿಕ ಶಾಲೆಗಳಿಂದ ಕಲಿಕಾ ಖಾತ್ರಿ ಪ್ರಾರಂಭ

**ಎಸ್.ಎಸ್.ಎಲ್.ಸಿ ಫಲಿತಾಂಶದ ಪ್ರೇರಣೆ**

**ಕ್ಷೇತ್ರ ಶಿಕ್ಷಣಾಧಿಕಾರಿ ರಾಜು ಮಾಹಿತಿ**




ಸರಗೂರು: ಜೂ.1ರಿಂದ ಶಾಲೆಗಳು ಪ್ರಾರಂಭವಾಗುತ್ತಿದ್ದು, ಮಕ್ಕಳಿಗೆ ಸಿಹಿ ನೀಡುವ ಮೂಲಕ ಖುಷಿಯಿಂದ ಶಾಲೆಗೆ ಬರುವಂತೆ ಸಕಲ ಸಿದ್ಧತೆಯನ್ನು ಮಾಡಿಕೊಂಡಿದ್ದೇವೆ. ಶಾಲೆ ಪ್ರಾರಂಭದ ದಿನದಂದೆ ಮಕ್ಕಳಿಗೆ ಪಠ್ಯಪುಸ್ತಕಗಳ ವಿತರಣೆ ಮತ್ತು 2 ಜೊತೆ ಸಮವಸ್ತ್ರಗಳನ್ನು ನೀಡಲಾಗುವುದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ರಾಜು ತಿಳಿಸಿದರು.

ಸರಗೂರಿನ ಸ್ವಾಮಿ ವಿವೇಕಾನಂದ ಯೂತ್ ಮೂವ್ ಮೆಂಟ್‌ನ, ಜನಧ್ವನಿ ಸಮುದಾಯ ಬಾನುಲಿ ಕೇಂದ್ರದಲ್ಲಿ ಶಾಲೆ ಪ್ರಾರಂಭೋತ್ಸವದ ಸಿದ್ಧತೆ ಕುರಿತು ನೇರ ಸಂದರ್ಶನ ಫೋನ್ ಇನ್ ಕಾರ್ಯಕ್ರಮದಲ್ಲಿ ಮಾತನಾಡಿದರು.

ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುವುದಕ್ಕೆ ಎಲ್ಲಾ ಶಿಕ್ಷಕರಿಗೆ ಮಾರ್ಗದರ್ಶನ ನೀಡಲಾಗಿದೆ. ಶಿಕ್ಷಕರ ಕೊರತೆ ಇರುವ ಶಾಲೆಗಳಲ್ಲಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವಂತೆ ಶಾಲೆಯ ಮುಖ್ಯಶಿಕ್ಷಕರಿಗೆ ಜವಬ್ದಾರಿ ನೀಡಲಾಗಿದೆ. ಜೂ.1 ರಿಂದಲೆ ತರಗತಿಗಳು ಪ್ರಾರಂಭವಾಗಲಿವೆ. ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರಿಸುವ ನಿಟ್ಟಿನಲ್ಲಿ ದಾಖಲಾತಿ ಆಂದೋಲನ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು. ಶಿಕ್ಷಣ ಇಲಾಖೆಯಿಂದ ಮನೆ, ಮನೆಗೆ ಭೇಟಿ ನೀಡಿ ಮಾನದಂಡವಿರುವ ಮಕ್ಕಳನ್ನು ಶಾಲೆಗೆ ಸೇರಿಸುವಂತೆ ಪೋಷಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಎಚ್.ಡಿ.ಕೋಟೆ ತಾಲೂಕಿನ ಹೊಮ್ಮರಗಳ್ಳಿ ಮತ್ತು ಸರಗೂರು ತಾಲೂಕಿನ ಕೆಂಚನಹಳ್ಳಿ ಮತ್ತು ಸರಗೂರು ಟೌನ್ ನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಕೆ.ಪಿ.ಎಸ್ ಶಾಲೆ ಪ್ರಾರಂಭವಾಗಿದ್ದು, ಎಲ್.ಕೆ.ಜಿ ಯಿಂದ ದ್ವಿತೀಯ ಪಿ.ಯು.ಸಿ ವರೆಗೂ ಒಂದೆ ಸೂರಿನಡಿ ಗುಣಮಟ್ಟದ ಶಿಕ್ಷಣವನ್ನು ನೀಡುವ ನಿಟ್ಟಿನಲ್ಲಿ ಸರ್ಕಾರ ಹಂತ, ಹಂತವಾಗಿ ಪ್ರತಿ ಗ್ರಾಮ ಪಂಚಾಯಿತಿಗೊಂದು ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭ ಮಾಡುವ ಯೋಜನೆಯನ್ನು ಮಾಡಿಕೊಂಡಿದೆ ಎಂದು ಮಾಹಿತಿ ನೀಡಿದರು.

**ಪ್ರಥಮ ಸ್ಥಾನದ ಪ್ರೇರಣೆ:**

## ಪ್ರಾಥಮಿಕ ಶಾಲೆಗಳಲ್ಲೇ ಕಲಿಕಾ ಖಾತ್ರಿ

**2025–26ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಮೈಸೂರು ಜಿಲ್ಲೆಗೆ ಹೆಚ್.ಡಿ.ಕೋಟೆ ಮತ್ತು ಸರಗೂರು ತಾಲೂಕು ಪ್ರಥಮ ಸ್ಥಾನ ಬಂದಿರುವುದರಿಂದ ಜವಬ್ದಾರಿಗಳು ಹೆಚ್ಚಾಗಿದ್ದು, ಪ್ರಾಥಮಿಕ ಶಾಲೆಗಳಿಂದಲೆ ಕಲಿಕಾ ಖಾತ್ರಿ ಪರೀಕ್ಷೆಗಳನ್ನು ಮಾಡುವ ಮೂಲಕ ಮಕ್ಕಳಲ್ಲಿ ಕಲಿಕಾ ಮನೋಭಾವನೆಯನ್ನು ಹೆಚ್ಚಿಸಿ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಯಾವುದೇ ಆತಂಕವಿಲ್ಲದೆ ಬರೆಯುವಂತೆ ಪ್ರೇರಣೆಯನ್ನು ನೀಡಲಾಗುತ್ತದೆ. ಮಕ್ಕಳಲ್ಲಿ ಶಿಕ್ಷಣದ ಜೊತೆಗೆ ಗುಣಾತ್ಮಕ ಮೌಲ್ಯಗಳನ್ನು ಬೆಳೆಸುವ ನಿಟ್ಟಿನಲ್ಲಿ ಶಿಕ್ಷಕರ ಜೊತೆ ಪೋಷಕರು ತಮ್ಮ ಮಕ್ಕಳ ಕಲಿಕಾ ಮಟ್ಟವನ್ನು ಶಾಲೆಗಳಿಗೆ ಭೇಟಿ ನೀಡಿ, ಶಿಕ್ಷಕರ ಜೊತೆ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಕೈ ಜೋಡಿಸುವಂತೆ ತಿಳಿಸಿದರು. ಸಾಗರೆ ಜಯರಾಮ್, ಮಾಗುಡಿಲು ನಾಗರಾಜು, ಕೂಡಗಿ ಗೋವಿಂದರಾಜು, ಚಕ್ಕೂರು ರವಿನಂದನ್, ಕುಣಿಗಲ್ ಸಣ್ಣ ಸ್ವಾಮಿನಾಯಕ, ಸರಗೂರಿನ ಗ್ರೀಷ್ಮಾ ಕರೆ ಮಾಡಿ ಶೈಕ್ಷಣಿಕ ಚಟುವಟಿಕೆಗಳ ಕುರಿತು ಶಿಕ್ಷಣಾಧಿಕಾರಿ ಜೊತೆ ಮಾತನಾಡಿದರು. ಬಾನುಲಿ ಕೇಂದ್ರದ ವ್ಯವಸ್ಥಾಪಕ ನಿಂಗರಾಜು, ಸಿಬ್ಬಂದಿಗಳಾದ ಶ್ರೀಕಾಂತ್, ಅನಿತಾ, ಸ್ಫೂರ್ತಿ, ಪ್ರೀತಿ ಪ್ರಕಾಶ್ ಹಾಗೂ ಯತೀಶ್ ಇದ್ದರು.**

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಪ್ರಚಾರ ವಾಹನಕ್ಕೆ ಚಾಲನೆ

## ಪಿಎಂ ಸೂರ್ಯ ಘರ್ ಯೋಜನೆ ಕುರಿತು ಜನರಲ್ಲಿ ಜಾಗೃತಿ



ಮೈಸೂರು: ಪ್ರಧಾನಮಂತ್ರಿ ಸೂರ್ಯ ಘರ್ ಮುಫ್ತ್ ಬಿಜ್ಲಿ ಯೋಜನೆಯಡಿ ಗೃಹಬಳಕೆದಾರರ ಮನೆಯ ಛಾವಣಿಯಲ್ಲಿ ಸೌರಫಲಕಗಳನ್ನು ಸ್ಥಾಪಿಸುವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಪ್ರಚಾರ ವಾಹನಕ್ಕೆ ಶುಕ್ರವಾರ ಚಾಲನೆ ನೀಡಲಾಯಿತು.

ವಿಜಯನಗರ 2ನೇ ಹಂತದಲ್ಲಿರುವ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಚಾವಿಸನಿನಿ) ಪ್ರಧಾನ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಲ್‌ಇಡಿ ಪರದೆ ಅಳವಡಿಸಿರುವ ವಾಹನದ ಮೂಲಕ ಪ್ರಚಾರ ಕಾರ್ಯಕ್ಕೆ ಚಾವಿಸನಿನಿ ತಾಂತ್ರಿಕ ನಿರ್ದೇಶಕ ಶರಣಮ್ಮ ಎಸ್. ಜಂಗಿನ ಹಾಗೂ ಚಾವಿಸನಿನಿ ಮೈಸೂರು ವೃತ್ತದ ಮುಖ್ಯ ಇಂಜಿನಿಯರ್ ಎಲ್. ಲೋಕೇಶ್ ಹಸಿರು ನಿಶಾನೆ ತೋರಿಸಿದರು.

ಪ್ರಧಾನ ಮಂತ್ರಿ ಸೂರ್ಯ ಘರ್ ಮುಫ್ತ್ ಬಿಜ್ಲಿ ಯೋಜನೆ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಚಾಲನೆ ನೀಡಲಾಗಿರುವ ಈ ಪ್ರಚಾರ ವಾಹನ ಮೂರು ದಿನಗಳು ಬೆಳಗ್ಗಿನಿಂದ ರಾತ್ರಿಯವರೆಗೂ ನಗರದೆಲ್ಲೆಡೆ ಸಂಚರಿಸಲಿದೆ. ಮೇ 30ರಂದು ಕುವೆಂಪುನಗರ, ವಿವೇಕಾನಂದ ನಗರ, ಆಂದೋಲನ ವೃತ್ತ, ದಟ್ಟಗಳ್ಳಿ ವೃತ್ತ, ಆರ್.ಆರ್ ನಗರ, ಶಾರದಾದೇವಿನಗರ, ಬೋಗಾದಿ, ವಿಜಯನಗರ, ಅರಮನೆ ಸುತ್ತಮುತ್ತ, ಅಗ್ರಹಾರ ವೃತ್ತ, ಪಾಠಶಾಲಾ ವೃತ್ತ, ಕೆ.ಆರ್ ವೃತ್ತ, ಆಯುರ್ವೇದ ಆಸ್ಪತ್ರೆ ವೃತ್ತ, ಮಂಡಿ ಮೊಹಲ್ಲಾ, ಬನ್ನಿಮಂಟಪ, ಎಲ್.ಐ.ಸಿ ವೃತ್ತ, ಫೌಂಟೆನ್ ವೃತ್ತ, ಸೆಂಟ್ ಫಿಲೋಮಿನಾ ಚರ್ಚ್ ಸುತ್ತಲಿನ ಪ್ರದೇಶಗಳಲ್ಲಿ ಸಂಚರಿಸಲಿದೆ. ಮೇ 31ರಂದು ನಗರ ಬಸ್ ನಿಲ್ದಾಣ, ಮೆಟ್ರೋಪೋಲ್ ವೃತ್ತ, ಕಲಾಮಂದಿರ, ಮಹಾರಾಣಿ ಕಾಲೇಜ್ ಜಂಕ್ಷನ್, ಪಡುವರಳ್ಳಿ ವೃತ್ತ, ಐಶ್ವರ್ಯ ಪೆಟ್ರೋಲ್ ಬಂಕ್ ಜಂಕ್ಷನ್, ಹಿನಕಲ್ ವೃತ್ತ, ಹೂಟಗಳ್ಳಿ, ಬೆಳವಾಡಿ, ಇಲವಾಲ, ಮೈಸೂರು ಅರಮನೆ ಸುತ್ತಮುತ್ತ, ಗ್ರಾಮಾಂತರ ಬಸ್ ನಿಲ್ದಾಣ, ಹಾರ್ಡಿಂಗ್ ವೃತ್ತ, ಗೋಪಾಲಗೌಡ ಆಸ್ಪತ್ರೆ ವೃತ್ತ, ಮಿಲ್ಕ್ ಡೈರಿ ವೃತ್ತ, ಸಿದ್ದಾರ್ಥ ಬಡಾವಣೆ, ಟೆರಿಷಿಯನ್ ಕಾಲೇಜ್ ವೃತ್ತ, ದೇವೇಗೌಡ ವೃತ್ತ ಹಾಗೂ ಸುತ್ತಲಿನ ಪ್ರದೇಶಗಳಲ್ಲಿ ಸಂಚರಿಸಲಿದೆ.

ಪಿಎಂ ಸೂರ್ಯ ಘರ್ ಯೋಜನೆಯು ಆದಾಯ ಮತ್ತು ಉಳಿತಾಯದ ಮೂಲವಾಗಿದೆ. ಗ್ರಾಹಕರು ತಮ್ಮ ಮನೆಯ ಮೇಲೆ ಸೌರಘಟಕ ಸ್ಥಾಪಿಸಲು, ಪಿಎಂ ಸೂರ್ಯ ಘರ್ ಮುಫ್ತ್ ಬಿಜ್ಲಿ ಯೋಜನೆ ಮೂಲಕ ಆಕರ್ಷಕ ಸಬ್ಸಿಡಿ ಸೌಲಭ್ಯ ಪಡೆಯಬಹುದಾಗಿದೆ. ಇದರಿಂದ ವಿದ್ಯುತ್ ಬಿಲ್ ಉಳಿತಾಯವಾಗಲಿದ್ದು, ಇದು ಪರಿಸರ ಸ್ನೇಹಿ ಯೋಜನೆಯು ಆಗಿದೆ. ಸೌರಶಕ್ತಿಯಿಂದ ಉತ್ಪಾದನೆ ಯಾಗುವ ಹೆಚ್ಚುವರಿ ವಿದ್ಯುತ್ ಅನ್ನು ಸೆಸ್ಕ್‌ಗೆ ಮಾರಾಟ ಮಾಡುವ ಮೂಲಕ ಆದಾಯವನ್ನೂ ಪಡೆಯಬಹುದು. ಈ ಸಂದರ್ಭದಲ್ಲಿ ಚಾವಿಸನಿನಿ ಮುಖ್ಯ ಪ್ರಧಾನ ವ್ಯವಸ್ಥಾಪಕಿ ಲಿಂಗರಾಜಮ್ಮ, ಪ್ರಧಾನ ವ್ಯವಸ್ಥಾಪಕ ಆರ್. ರಾಮಸ್ವಾಮಿ, ಎಚ್.ಆರ್. ದಿನೇಶ್, ಬಿ.ಆರ್. ರೂಪ ಸೇರಿ ಇದ್ದರು.

### ಸೂರ್ಯಘರ್ ಯೋಜನೆ ಉಪಯೋಗ

**ಪಿಎಂ ಸೂರ್ಯ ಘರ್ ಯೋಜನೆ ಮನೆಯ ವಿದ್ಯುತ್ ಅವಶ್ಯಕತೆ ಪೂರೈಸುವ ಯೋಜನೆಯಾಗಿದ್ದು, ಈ ಯೋಜನೆ ಮೂಲಕ ಸಾರ್ವಜನಿಕರು ಮನೆಗಳ ಮೇಲೆ ಸೌರಫಲಕ ಸ್ಥಾಪಿಸಿ, ಆಕರ್ಷಕ ಸಬ್ಸಿಡಿ ಪಡೆಯುವ ಮೂಲಕ ವಿದ್ಯುತ್ ಉತ್ಪಾದನೆ ಮಾಡಬಹುದಾಗಿದೆ. 1 ಕೆವಿ ಸಾಮರ್ಥ್ಯದವರೆಗಿನ ಸೌರಘಟಕ ಸ್ಥಾಪನೆಗೆ ಸಬ್ಸಿಡಿ 30000 ಸಿಗಲಿದೆ. 2 ಕೆವಿ ಸಾಮರ್ಥ್ಯದವರೆಗಿನ ಸೌರಘಟಕ ಸ್ಥಾಪನೆಗೆ ಸಬ್ಸಿಡಿ 60000 ದೊರೆಯಲಿದೆ. 3 ಕೆವಿ ಮತ್ತು ಅದಕ್ಕಿಂತ ಹೆಚ್ಚಿನ ಸಾಮರ್ಥ್ಯದ ಸೌರಘಟಕ ಸ್ಥಾಪನೆಗೆ ಸಬ್ಸಿಡಿ 78000 ಪಡೆಯಬಹುದಾಗಿದೆ. ಯೋಜನೆ ಮಾಹಿತಿಗಾಗಿ ಮೊ. 944899 4706 ಅಥವಾ ಇ–ಮೇಲ್ ವಿಳಾಸ gmproj1 @cescmysore.org ಸಂಪರ್ಕಿಸಬಹುದಾಗಿದೆ.**

# “ಬೇಗೂರಿನಲ್ಲಿ ಮುಸ್ಲಿಂ ಬಾಂಧವರಿಂದ ಬಕ್ರೀದ್ ಹಬ್ಬ,( ಈದ್ ಉಲ್ ಅದಾ) ಆಚರಣೆ”

ಗುಂಡ್ಲುಪೇಟೆ : ಬೇಗೂರು ಗ್ರಾಮದಲ್ಲಿ ಮುಸ್ಲಿಂ ಬಾಂಧವರಿಂದ ತ್ಯಾಗ ಬಲಿದಾನಗಳ ಹಬ್ಬ, ಬಕ್ರೀದ್ ( ಈದ್ ಉಲ್ ಅದಾ ) ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಣೆ ಮಾಡಿದರು, ಮಕ್ಕಳು ವೃದ್ಧರು ಸೇರಿದಂತೆ ಬೇಗೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಹೊಸ ಬಟ್ಟೆಗಳನ್ನು ತೊಟ್ಟು ಬಂದ ಮುಸ್ಲಿಂ ಬಾಂಧವರು ಬೆಳಿಗ್ಗೆ 9:00ಗೆ ಹಳೆಯ ಮಸೀದಿಯಿಂದ ಮೆರವಣಿಗೆಯಲ್ಲಿ, ಮಸ್ಜಿದ್ –ಈ – ಮುಬಾರಕ್, ಗೆ,ತಲುಪಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು, ಧರ್ಮ ಗುರುಗಳಾದ ಮೊಹಮ್ಮದ್ ಅಸ್ಲಾಂ ಖಾನ್ ರವರು, ಹಬ್ಬದ ಪ್ರವಚನ ನೀಡಿದರು, ಈ ಸಂದರ್ಭದಲ್ಲಿ, ಮಸೀದಿಯ ಮುಖಂಡರುಗಳಾದ, ಅಬ್ದುಲ್ ಜಬ್ಬಾರ್,, ಕರವೇ, ಮೈಸೂರು ಹಾಗೂ ಚಾಮರಾಜನಗರ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ರಿಯಾಜ್ ಪಾಷ, ಮೊಹಮ್ಮದ್ ಝಿಕ್ರಿಯಾ ಸಾಬ್, ಮಟನ್ ಬಾಬು,, ಮೊಹಮ್ಮದ್ ಇಲಿಯಾಸ್ ಅಬ್ದುಲ್ ಖಾದರ್ ( ಟೈಲರ್ ಬಾಬು), ನಿಸಾರ್ ಅಹಮದ್, ಮೊಹಮ್ಮದ್ ಪಾಷ, ನೂರ್ ಮೊಹಮ್ಮದ್, ಇಮ್ರಾನ್ ಖಾನ್, ಶಾಮಿಯಾನ ಮುಬಾರಕ್, ಅನ್ವರ್ ಪಾಶ, ಸಲ್ಮಾನ್, ನವೀದ್, ಆಸಿಫ್,, ಟಿಂಬರ್ ಮರ್ಚೆಂಟ್, ಜಾವಿದ್ ಅಹಮದ್ , ಮೊಹಮ್ಮದ್ ಫಾರೂಕ್, ಮೊಹಮ್ಮದ್ ತನ್ವೀರ್,, ನಯಾಜ್ ಅಹಮದ್, ಇಶ್ರೀಫ್ ಬೇಗ್, ನಾಲ್ ಬಂದ್, ಅಲ್ತಾಫ್, ಅಕ್ಬರ್ ಖಾನ್, ಅಕ್ರಮ್ ಇಸ್ಮಾಯಿಲ್ ಖಾನ್,, ಫೈರೋಜ್ ಖಾನ್, ಸೆಲ್ಲಾಮ್ ಇಕ್ಬಲ್, ತೌಫಿಕ್,ನಬಿ,, ಸೋಮಹಳ್ಳಿ,ಸಿರಾಜುದ್ದೀನ್, ನಿಟ್ರೆ, ಮನ್ಸೂರ್,ಹಬೀಬುಲ್ಲ, ಸೇರಿದಂತೆ ನೂರಾರು ಮಂದಿ, ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡಿದ್ದರು, ಈ ಸಂದರ್ಭದಲ್ಲಿ ಬೇಗೂರು ಪೊಲೀಸ್ ಠಾಣೆಯ ಸಬ್ ಇನ್ಸ್ಪೆಕ್ಟರ್ ನವೀನ್ ರವರು ಹಾಗೂ, ವಿಶೇಷ ಪೆದೆ ಶಿವಕುಮಾರ್ ರವರ,ನೇತೃತ್ವದಲ್ಲಿ, ಸೂಕ್ತ ಬಂದೂಬಸ್ತ್ ವ್ಯವಸ್ಥೆಯನ್ನು ಮಾಡಲಾಗಿತ್ತು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ನಾಳೆ ಬ್ರಾಹ್ಮಣ ಸಂಘದ ಶತಮಾನೋತ್ಸವ ಸಂಭ್ರಮ

ಮೈಸೂರು: ಚಾಮುಂಡಿಪುರಂನ ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದ ಶತಮಾನೋತ್ಸವ ಸಂಭ್ರಮ ಕಾರ್ಯಕ್ರಮ ಮೇ 31 ರಂದು ನಗರದ ದಟ್ಟಗಳ್ಳಿಯಲ್ಲಿನ ಸಾ.ರಾ. ಕನ್ವೆನ್ಷನ್ ಹಾಲ್‌ನಲ್ಲಿ ನಡೆಯಲಿದೆ ಎಂದು ಅಧ್ಯಕ್ಷ ಎಂ. ವಿಶ್ವನಾಥಯ್ಯ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಬೆಳಗ್ಗೆ 8ಕ್ಕೆ ಲೋಕ ಕಲ್ಯಾಣಾರ್ಥವಾಗಿ 180 ಕ್ಕೂ ಹೆಚ್ಚು ದಂಪತಿಗಳಿಂದ ಸಾಮೂಹಿಕ ಸತ್ಯನಾರಾಯಣ ಪೂಜೆ ನಡೆಯಲಿದೆ. ಬಳಿಕ 11ಕ್ಕೆ ವಿವಿಧ ಕ್ಷೇತ್ರಗಳ ಸಾಧಕರ ಸನ್ಮಾನ ಮತ್ತು ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ನಡೆಯಲಿದೆ ಎಂದು ಮಾಹಿತಿ ನೀಡಿದರು. ಪ್ರಧಾನ ಕಾರ್ಯದರ್ಶಿ ಕೆ.ಆರ್. ಮಂಜುನಾಥ್ ಮಾತನಾಡಿ, ಮೈಸೂರಿನಲ್ಲಿ ಸಮುದಾಯದವರ ಸಂಖ್ಯೆ ಏಳರಿಂದ ಎಂಟು ಸಾವಿರ ಇದೆ. ಇದಲ್ಲದೆ ಚಾಮರಾಜನಗರ, ಮೈಸೂರು, ಮಂಡ್ಯ, ಬೆಂಗಳೂರು ಮೊದಲಾದವು ಸೇರಿದಂತೆ ರಾಜ್ಯದಾದ್ಯಂತ ಸುಮಾರು ನಾಲ್ಕರಿಂದ ಐದು ಲಕ್ಷ ಜನಸಂಖ್ಯೆಯಿದೆ ಎಂದು ವಿವರಿಸಿದರು.ಎಚ್.ಎಸ್. ನಾಗಶಯನ, ಹೊಮ್ಮ ಮಂಜುನಾಥ್ ಇದ್ದರು.

# ಬಿಲ್ವಪತ್ರೆ ಗಿಡ ನೆಡಿ...ಇಮ್ಮಡಿ ಉದ್ದಾನ ಸ್ವಾಮಿಗಳು



ಗುಂಡ್ಲುಪೇಟೆ: ಮೂಡುಗೂರು ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ “ ಚಿನ್ಮಯ ಜ್ಞಾನಿ, ಚೆನ್ನಬಸವಣ್ಣನವರ ದಾಸೋಹ ಭವನ “ ಅಗಸ್ಟ್ ತಿಂಗಳಲ್ಲಿ ಲೋಕಾರ್ಪಣೆ ಆಗಲಿದೆ.

ಸುತ್ತೂರು ಜಗದ್ಗುರುಗಳು, ತುಮಕೂರು ಶ್ರೀಗಳ ದಿವ್ಯಸಾನ್ನಿಧ್ಯದಲ್ಲಿ ನಡೆವ ಎರಡುದಿನಗಳ ಅದ್ದೂರಿ ಕಾರ್ಯಕ್ರಮದ ನಿಮಿತ್ತವಾಗಿ ಗ್ರಾಮಗ್ರಾಮಗಳಿಗೆ ತೆರಳಿ ಶ್ರೀಮಠಕ್ಕೆ ಭಕ್ತರನ್ನು ಆಹ್ವಾನಿಸುತ್ತಿರುವ ಇಮ್ಮಡಿ ಉದ್ದಾನ ಸ್ವಾಮಿಗಳು ಹಾಗೂ ಕಬ್ಬಹಳ್ಳಿಯ ಗುರುಸಿದ್ಧಸ್ವಾಮಿಗಳು ಅದರ ನೆನಪಿಗಾಗಿ ಪ್ರತಿಗ್ರಾಮದಲ್ಲೂ “ ಬಿಲ್ವಪತ್ರೆ “ ಗಿಡನೆಡುವ ಮೂಲಕ ಈ ವರ್ಷದ “ ಮರಬೆಳೆಸಿ– ಧರೆ ಉಳಿಸಿ “ ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ಪ್ರತಿ ಮುಂಗಾರಿನಲ್ಲೂ ಗಿಡ ನೆಡುವ ಚಟುವಟಿಕೆ ಹಮ್ಮಿಕೊಳ್ಳುವ ಶ್ರೀಗಳು; ಈ ಬಾರಿಯ ಆ ಚಟುವಟಿಕೆಗೆ ಪಾವಿತ್ರ್ಯದ ಸ್ಪರ್ಶ ನೀಡಿದ್ದಾರೆ.

ನಮ್ಮ ಸಂಸ್ಕೃತಿಯಲ್ಲಿ ಪ್ರಕೃತಿ ಆರಾಧನೆ ಸಹಜವಾಗಿದೆ. ನಾವು ನೀರನ್ನು ಗಂಗೆ ಎಂದು, ಗಿಡ ಮರಗಳನ್ನು ವನಸ್ಪತಿಗಳೆಂದು ಕರೆದವರು. ಅನೇಕ ವೃಕ್ಷಗಳು ಜನರಲ್ಲಿ ದೈವತ್ವ ಪಡೆದಿವೆ ಅವುಗಳು ಬಿಲ್ವ, ಅರಳಿ, ಪಾರಿಜಾತ, ತುಳಸಿ, ಬನ್ನಿ, ಮುಂತಾದವು ಪ್ರಮುಖವಾಗಿವೆ. ಈ ವರ್ಷ ನಮ್ಮ ಕಟ್ಟಡದ ಲೋಕರ್ಪಣೆಯಾಗಲಿದೆ. ಅದರ ನಿಮಿತ್ತ ಪ್ರತಿ ಗ್ರಾಮಕ್ಕೂ ಶಿವನ ಪ್ರತೀಕವಾಗಿ ಬಿಲ್ವವನ್ನೂ, ಪ್ರತಿ ಮಠಗಳಿಗೆ ರುದ್ರಾಕ್ಷಿ ಗಿಡಗಳನ್ನು ನೀಡಲು ಸಂಕಲ್ಪಿಸಿದ್ದೇವೆ. ಭಕ್ತರು ಪ್ರೀತಿಯಿಂದ ಈ ಗಿಡಗಳನ್ನು ಸ್ವಿಕರಿಸುತ್ತಿದ್ದಾರೆ. ಅವುಗಳನ್ನು ನೆಟ್ಟು ಪೋಷಿಸಿ ಫಲ ಬರುವವರೆಗೆ ಬೆಳೆಸಿದರೆ, ಅದಕ್ಕೆ ದೀಕ್ಷೆ ನೀಡಲು ನಾವೇ ಬರುತ್ತೇವೆಂದು ಮೂಡಗೂರಿನ ಇಮ್ಮಡಿ ಉದ್ದಾಮ ಸ್ವಾಮಿಗಳಿ ಪತ್ರಿಕೆಗೆ ತಿಳಿಸಿದರು. ಭಕ್ತರಿಂದ ಕಾಣಿಕೆ ಸ್ವಿಕರಿಸಿ ಹೋಗುವುದಲ್ಲ, ಅವರಿಗೆ ಗಿಡಮರ ಸಂರಕ್ಷಣೆಯ ಕಲ್ಪನೆ ನೀಡುವುದು; ಇಂದಿನ ಅನಿವಾರ್ಯ. ಎಂಬುದನ್ನು ಕೃತಿರೂಪಕ್ಕಿಳಿಸಿದ ಸ್ವಾಮಿಗಳ ಬಗ್ಗೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ.

# ಹೊಲಿಗೆ ತರಬೇತಿಯಿಂದ ಸ್ವಾವಲಂಬನೆ




ಚಾಮರಾಜನಗರ, ಹೊಲಿಗೆ ತರಬೇತಿಯಿಂದ ಮಹಿಳೆಯರು ಸ್ವಂತ ಉದ್ಯೋಗವನ್ನು ಸೃಷ್ಟಿಸಲು ಅತ್ಯುತ್ತಮ ಅವಕಾಶವಾಗಿದ್ದು, ಇದು ಕಡಿಮೆ ಬಂಡವಾಳದಲ್ಲಿ ಉತ್ತಮ ಆದಾಯವನ್ನು ತಂದುಕೊಡುವ ಕೌಶಲ್ಯವಾಗಿದೆ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್ ಹೇಳಿದರು.

ತಾಲೂಕಿನ ಮೂಡ್ನಾಕೂಡು ಗ್ರಾಮದಲ್ಲಿ ಸಾಮಾಜಿಕ ನ್ಯಾಯ ವೇದಿಕೆ ವತಿಯಿಂದ ಪರಿಶಿಷ್ಟ ಜಾತಿಯ ಮಹಿಳೆಯರಿಗಾಗಿ ಹಮ್ಮಿಕೊಂಡಿದ್ದ ಹೊಲಿಗೆ ತರಬೇತಿ ಸಮಾರೋಪ ಸಮಾರಂಭದಲ್ಲಿ ಪ್ರಮಾಣ ಪತ್ರ ವಿತರಿಸಿ ಮಾತನಾಡಿದರು.

ಅತ್ಯಂತ ಕಡಿಮೆ ಬಂಡವಾಳ ಸ್ವಯಂ ಉದ್ಯೋಗ ಕೈಗೊಳ್ಳಲು ಹೊಲಿಗೆ ತರಬೇತಿ ಸಹಕಾರಿಯಾಗಿದೆ. ಯಾರ ಮೇಲೂ ಅವಲಂಬಿತರಾಗದೆ ತಮ್ಮದೆ ಆದ ಟ್ರೈಲರಿಂಗ್ ಶಾಪ್, ಉಡುಪು ತಯಾರಿಕಾ ಘಟಕವನ್ನು ಆರಂಭಿಸಬಹುದು. ತಮ್ಮ ಮನೆಯ ಬಟ್ಟೆಗಳನ್ನು ತಾವೇ ಸ್ವತಹ ಹೊಲಿದುಕೊಳ್ಳುವ ಮೂಲಕ ಕುಟುಂಬದ ಹೊರೆ ತಗ್ಗಿಸಬಹುದು. ಸ್ವಯಂ ಉದ್ಯೋಗ ಸ್ಥಾಪನೆಗಾಗಿ ಸರ್ಕಾರವು ಬ್ಯಾಂಕ್ ಮೂಲಕ ಸಬ್ಸಿಡಿ ಸಾಲ ಸೌಲಭ್ಯ ದೊರೆಯುತ್ತದೆ ಇಂತಹ ಅವಕಾಶ ಸದುಪಯೋಗಪಡಿಸಿಕೊಂಡು ಸಬಲರಾಗಬೇಕು ಎಂದರು. ಸಾಮಾಜಿಕ ನ್ಯಾಯ ವೇದಿಕೆಯು ದಲಿತ ಸಮುದಾಯ ಅಭಿವೃದ್ಧಿಗಾಗಿ ತರಬೇತಿಗಳನ್ನು ನೀಡುತಿದೆ ಇಂತಹ ಅವಕಾಶಗಳನ್ನು ಸಮುದಾಯದ ನಿರುದ್ಯೋಗ ಯುವಕ, ಯುವತಿಯರು ಸದುಪಯೋಗಪಡಿಸಿಕೊಳ್ಳಬೇಕು ಎಂದರು. ಸಂಜೀವಿನಿ ಮಹಿಳಾ ಒಕ್ಕೂಟದ ಅಧ್ಯಕ್ಷೆ ಭಾಗ್ಯಮ್ಮ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಾಮಾಜಿಕ ನ್ಯಾಯ ವೇದಿಕೆ ಸುನೀಲ್, ಮಹಿಳಾ ಒಕ್ಕೂಟ ಎಂ.ಬಿ.ಕೆ ಹೊನ್ನಮ್ಮ, ತರಬೇತಿ ಶಿಕ್ಷಕಿ ಮಲೆಯೂರು ಮೀನಾಕ್ಷಿ ಹಾಜರಿದ್ದರು.

**ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನದಲ್ಲಿ ಪೂಜೆ**

# ಡಿಕೆಶಿ ಮುಖ್ಯಮಂತ್ರಿಯಾಗಲು ವಿಶೇಷ ಪೂಜೆ



ಚಾಮರಾಜನಗರ, ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಲಿ ಎಂದು ಶ್ರೀಚಾಮರಾಜೇಶ್ವರಸ್ವಾಮಿಗೆ ಶುಕ್ರವಾರ ವಿಶೇಷ ಪೂಜೆ ಸಲ್ಲಿಸಲಾಯಿತು.

ನಗರದ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನದ ಮುಂಭಾಗ ಜಮಾಯಿಸಿದ ಡಿ.ಕೆ.ಶಿವಕುಮಾರ್ ಅಭಿಮಾನಿ ಬಳಗದವರು ಶ್ರೀಚಾಮರಾಜೇಶ್ವರನಿಗೆ ವಿಶೇಷ ಪೂಜೆ ನೆರವೇರಿಸಿದರು. ಬಳಿಕ ಇಡುಗಾಯಿ ಹೊಡೆದು, ವಿವಿಧ ಘೋಷಣೆಗಳನ್ನು ಕೂಗುವ ಮೂಲಕ ಡಿ.ಕೆ.ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಡಿ.ಕೆ.ಶಿವಕುಮಾರ್ ಅಭಿಮಾನಿ ಬಳಗದ ಅಧ್ಯಕ್ಷ ಕೆ.ಪುಟ್ಟಸ್ವಾಮಿಗೌಡ ಮಾತನಾಡಿ, ಪ್ರಯತ್ನ ವಿಫಲವಾದರೂ, ಪ್ರಾರ್ಥನೆ ವಿಫಲವಾಗು ವುದಿಲ್ಲ ಎಂಬ ಡಿ.ಕೆ.ಶಿವಕುಮಾರ್ ಅವರ ಮಾತು ಸತ್ಯವಾಗುತ್ತಿದೆ. ಅವರು ಅಪಾರ ದೈವಭಕ್ತರಾಗಿದ್ದು, ಅವರ ಪ್ರಾರ್ಥನೆಗೆ ಫಲ ದೊರಕಿದಂತಾಗಿದೆ ಎಂದರು.

ರಾಜ್ಯದಲ್ಲಿ ರಾಜಕಾರಣ ಮಾಡುವ ಪ್ರತಿಯೊಬ್ಬರಿಗೂ, ಡಿ.ಕೆ.ಶಿವಕುಮಾರ್ ಮಾದರಿಯಾಗಿದ್ದಾರೆ. ಹಿಂದುತ್ವದ ಹೆಸರಿನಲ್ಲಿ ರಾಜಕಾರಣ ಮಾಡುವವರೂ ಕೂಡ ಇವರನ್ನು ನೋಡಿ ಕಲಿಯಬೇಕಿದೆ. ರಾಜ್ಯದ ಒಕ್ಕಲಿಗ ಸಮುದಾಯದಲ್ಲಿ ಎಚ್.ಡಿ.ದೇವೆಗೌಡ ಮತ್ತು ಕುಮಾರಸ್ವಾಮಿ ಅವರಿಗಿಂತಲೂ ಒಂದು ಕೈ ಮೇಲಾಗಿದ್ದಾರೆ ಎಂದರು. ಕನ್ನಡಪರ ಸಂಘಟನೆ ಮುಖಂಡ ಚಾ.ರಂ.ಶ್ರೀನಿವಾಸ್ ಗೌಡ ಮಾತನಾಡಿ, ಡಿ.ಕೆ.ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಲಿ ಎಂದು ಕನ್ನಡಪರ ಸಂಘಟನೆಗಳ ವತಿಯಿಂದ ಶ್ರೀ ಚಾಮರಾಜೇಶ್ವರನಿಗೆ ವಿಶೇಷ ಪೂಜೆ ನೆರವೇರಿಸಲಾಗಿತ್ತು. ಅದು ಇಂದಿಗೆ ಫಲ ನೀಡಿದೆ ಎಂದರೇ ತಪ್ಪಾಗಲಾರದು. ಅವರ ಅವಧಿಯಲ್ಲಿ ಕರ್ನಾಟಕ ಸರ್ವತೋಮುಖ ಅಭಿವೃದ್ಧಿ ಹೊಂದಲಿ ಎಂದು ಹೇಳಿದರು. ಪಣ್ಯದಹುಂಡಿ ರಾಜು, ಕರಿಯನಕಟ್ಟೆ ಚೆನ್ನಮುತ್ತು, ರಘು, ಸೋಮಣ್ಣ, ಪ್ರಕಾಶ್, ಚೆನ್ನಸ್ವಾಮಿ, ಗೋವಿಂದೇಗೌಡ, ಶಿವಲಿಂಗೇಗೌಡ, ಮಹೇಶ್ ಗೌಡ, ನಾಗೇಂದ್ರ, ಸೋಮು, ದೊಡ್ಡರಾಯಪೇಟೆ ರವಿ, ನಿಜಧ್ವನಿ ಗೋವಿಂದರಾಜು, ಸಿ.ಕೆ.ರವಿಕುಮಾರ್, ರವಿಚಂದ್ರ ಪ್ರಸಾದ್ ಕಹಳೆ ಹಾಗೂ ಇತರರು ಹಾಜರಿದ್ದರು.

# ಕುಡಿಯುವ ನೀರು, ವಿದ್ಯುತ್ ಸಮಸ್ಯೆ ಖಂಡಿಸಿ ಗ್ರಾಮಸ್ಥರ ಪ್ರತಿಭಟನೆ



**ಕೆ.ಆರ್.ನಗರ:** ತಾಲೂಕಿನ ಕಾಳಮ್ಮನ ಕೊಪ್ಪಲು ಗ್ರಾಮದ ಬಾಣಂತಮ್ಮ ತಾಯಿ ದೇವಸ್ಥಾನದ ಸುತ್ತಮುತ್ತ ವಾಸಿಸುತ್ತಿರುವ ಜನರು ಕುಡಿಯುವ ನೀರು ಹಾಗೂ ವಿದ್ಯುತ್ ಸಮಸ್ಯೆ ಎದುರಿಸುತ್ತಿರುವುದನ್ನು ಖಂಡಿಸಿ ಸಾರ್ವಜನಿಕರು ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರತಿಭಟನಾಕಾರರು, ಸುಮಾರು 25 ಮನೆಗಳ ಜನರಿಗೆ ಕಳೆದ 15?20 ದಿನಗಳಿಂದ ಕುಡಿಯುವ ನೀರಿನ ತೀವ್ರ ಸಮಸ್ಯೆ ಉಂಟಾಗಿದ್ದು, ಪ್ರತಿದಿನ ನೀರಿಗಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತಿಳಿಸಿದರು.

ಗ್ರಾಮದಲ್ಲಿ ಹಬ್ಬಗಳ ಸಂದರ್ಭದಲ್ಲಿಯೂ ನೀರು ಸಿಗದೆ, ಕೃಷಿ ಪಂಪ್‌ಸೆಟ್ ಹೊಂದಿರುವವರ ಬಳಿ ಹೋಗಿ ಬೇಡಿಕೊಂಡು ನೀರನ್ನು ತಂದು ಕುಡಿಯುವ ಪರಿಸ್ಥಿತಿ ಉಂಟಾಗಿದೆ ಎಂದು ತಮ್ಮ ಅಳಲನ್ನು ವ್ಯಕ್ತಪಡಿಸಿದರು.

ಹಿಂದೆ ಈ ಭಾಗಕ್ಕೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲಾಗಿತ್ತು. ಆದರೆ ಸುಮಾರು 20 ದಿನಗಳ ಹಿಂದೆ ಮುಖ್ಯರಸ್ತೆ ಅಭಿವೃದ್ಧಿ ಕಾಮಗಾರಿಯ ವೇಳೆ ಪೈಪ್‌ಲೈನ್ ಒಡೆದು ಹೋಗಿದ್ದು, ಅದನ್ನು ಗುತ್ತಿಗೆದಾರರು ಸರಿಪಡಿಸದೆ ಇರುವುದರಿಂದ ನೀರಿನ ಸರಬರಾಜು ಸ್ಥಗಿತಗೊಂಡಿದೆ ಎಂದು ಆರೋಪಿಸಿದರು.

ಈ ಬಗ್ಗೆ ಶೀಗವಾಳು ಗ್ರಾಮ ಪಂಚಾಯಿತಿ ಪಿಡಿಒಗೆ ತಿಳಿಸಿದರೂ ಯಾವುದೇ ಸ್ಪಂದನೆ ನೀಡದೆ, ಗುತ್ತಿಗೆದಾರರನ್ನು ಸಂಪರ್ಕಿಸುವಂತೆ ಹೇಳಲಾಗುತ್ತಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಇದರ ಜೊತೆಗೆ, ಆಗಾಗ್ಗೆ ಉಂಟಾಗುತ್ತಿರುವ ವಿದ್ಯುತ್ ಸಮಸ್ಯೆಯಿಂದಲೂ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ. ಕೃಷಿ ಪಂಪ್‌ಸೆಟ್ ಮತ್ತು ಮನೆಗಳಿಗೆ ಒಂದೇ ಲೈನ್ ಮೂಲಕ ವಿದ್ಯುತ್ ಸರಬರಾಜು ಮಾಡುತ್ತಿರುವುದರಿಂದ ಕೆಲವು ಮನೆಗಳಲ್ಲಿ ವಿದ್ಯುತ್ ಉಪಕರಣಗಳು ಹಾನಿಗೊಳಗಾಗಿವೆ ಎಂದು ಹೇಳಿದರು.

ಕಾಳಮ್ಮನ ಕೊಪ್ಪಲು ಗ್ರಾಮವನ್ನು ಮಾದರಿ ವಿದ್ಯುತ್ ಗ್ರಾಮವೆಂದು ಘೋಷಿಸಿದ್ದರೂ ಸಮಸ್ಯೆಗಳು ಬಗೆಹರಿಯದೆ ಇರುವುದನ್ನು ಗ್ರಾಮಸ್ಥರು ಪ್ರಶ್ನಿಸಿದರು.

ಸಮಸ್ಯೆಗಳನ್ನು ತಕ್ಷಣ ಬಗೆಹರಿಸದಿದ್ದರೆ ಶೀಗವಾಳು ಗ್ರಾಮ ಪಂಚಾಯಿತಿ ಹಾಗೂ ಸಾಲಿಗ್ರಾಮ ತಾಲೂಕು ದಂಡಾಧಿಕಾರಿಗಳ ಕಚೇರಿ ಮುಂದೆ ತೀವ್ರ ಪ್ರತಿಭಟನೆ ನಡೆಸುವುದಾಗಿ ಗ್ರಾಮಸ್ಥರು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ವಿ.ಎಸ್.ಎಸ್.ಬಿ.ಎನ್ ನಿರ್ದೇಶಕ ಲೋಕೇಶ್ ನಾಯಕ, ರಂಗೇಗೌಡ, ಪೂ.ಸ್ವಾಮಿಗೌಡ, ರಂಗಣ್ಣ, ಯೋಗ, ರಘು, ಸ್ವಾಮಿಗೌಡ, ಮಲ್ಲಿಕಾ, ಕಿಶೋರ, ಕುಮಾರ, ಮಹೇಂದ್ರ, ಮಹದೇವ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಮೈಶುಗರ್ ಬಿ.ಮಿಲ್ ಟೆಂಡರ್ ಮೂಲಕ ಮಾರಾಟ:

# ಅಪಪ್ರಚಾರಕ್ಕೆ ಗಂಗಾಧರ್ ಖಂಡನೆ

**ಮಂಡ್ಯ:** ಮೈಶುಗರ್ ಸಕ್ಕರೆ ಕಾರ್ಖಾನೆಯಲ್ಲಿನ ಅನುಪಯುಕ್ತ ಬಿ.ಮಿಲ್ ಅನ್ನು ಟೆಂಡರ್ ಮೂಲಕ ಉತ್ತಮ ಮೊತ್ತಕ್ಕೆ ಮಾರಾಟ ಮಾಡಲಾಗಿದೆ ಎಂದು ಅಧ್ಯಕ್ಷ ಸಿ.ಡಿ. ಗಂಗಾಧರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಲವು ಕಿಡಿಗೇಡಿಗಳು ಕಾರ್ಖಾನೆಯ ಅನುಪಯುಕ್ತ ವಸ್ತುಗಳು ಹಾಗೂ ಬಿ.ಮಿಲ್ ಅನ್ನು ಗುಜರಿ ಲೆಕ್ಕದಲ್ಲಿ ಮಾರಾಟ ಮಾಡಲಾಗಿದೆ ಎಂದು ಸುಳ್ಳು ಆರೋಪ ಮಾಡುತ್ತಿರುವುದನ್ನು ಖಂಡಿಸಿದರು. ಬಳಕೆಗೆ ಯೋಗ್ಯವಾಗಿದ್ದರೂ ಮಾರಾಟ ಮಾಡಲಾಗಿದೆ ಎಂಬ ಆರೋಪಗಳಲ್ಲಿ ಯಾವುದೇ ಸತ್ಯವಿಲ್ಲ ಎಂದರು.

ಈ ರೀತಿಯ ಅಪಪ್ರಚಾರ ನಡೆಸುವವರು ಖಾಸಗಿ ಕಾರ್ಖಾನೆಗಳ ಜೊತೆ ಹೊಂದಾಣಿಕೆ ಮಾಡಿಕೊಂಡು ಆರೋಪ ಮಾಡುತ್ತಿದ್ದಾರೆ ಎಂದು ಅವರು ಆರೋಪಿಸಿದರು. ಅನುಪಯುಕ್ತ ವಸ್ತುಗಳ ಗರಿಷ್ಠ ಮಾರಾಟ ವೆಚ್ಚ 4 ಕೋಟಿ 86 ಸಾವಿರ ರೂ. ಆಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಒಟ್ಟು 6 ಸಂಸ್ಥೆಗಳು ಭಾಗವಹಿಸಿದ್ದವು. ಅವುಗಳಲ್ಲಿ ಅತಿ ಹೆಚ್ಚು ಬಿಡ್ ಮಾಡಿದ ಎಸ್.ಎನ್ ಟ್ರೇಡರ್ಸ್ ಸಂಸ್ಥೆಗೆ 3.92 ಕೋಟಿ ರೂ.ಗಳಿಗೆ ಮಾರಾಟ ಮಾಡಲಾಗಿದೆ ಎಂದು ದಾಖಲೆಗಳನ್ನು ಒದಗಿಸಿದರು.

ಈ ಸಂಬಂಧ ಮೇ 7 ಮತ್ತು 23ರಂದು ರೈತ ಮುಖಂಡರು ಹಾಗೂ ರೈತ ಹಿತರಕ್ಷಣಾ ಸಮಿತಿಯೊಂದಿಗೆ ಸಭೆ ನಡೆಸಲಾಗಿದ್ದು, ಅವರು ಸಹ ಒಪ್ಪಿಗೆ ವ್ಯಕ್ತಪಡಿಸಿದ್ದಾರೆ. ಈ ಬಾರಿ ಹೆಚ್ಚು ಕಬ್ಬು ಅರೆಯುವಂತೆ ಸಲಹೆ ನೀಡಿದ್ದಾರೆ ಎಂದರು.

ಮೈಶುಗರ್ ವತಿಯಿಂದ ಒಟ್ಟು 5.90 ಮೆಟ್ರಿಕ್ ಟನ್ ಕಬ್ಬನ್ನು ಒಪ್ಪಿಗೆ ಮಾಡಿಕೊಳ್ಳಲಾಗಿದ್ದು, ದಿನಕ್ಕೆ 3 ಸಾವಿರ ಟನ್‌ನಂತೆ ಕಬ್ಬನ್ನು ನುರಿಸಲಾಗುತ್ತದೆ. ಹಂಗಾಮು ಮುಗಿಯುವಷ್ಟರಲ್ಲಿ ಕನಿಷ್ಠ 4.90 ಮೆಟ್ರಿಕ್ ಟನ್ ಕಬ್ಬನ್ನು ಅರಿಯುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಕಳೆದ ಹಂಗಾಮಿನ ಟನ್ ಕಬ್ಬಿಗೆ ಸರ್ಕಾರದಿಂದ ನೀಡಬೇಕಾದ ಹೆಚ್ಚುವರಿ 50 ರೂ.ಗಳನ್ನು ಮುಂದಿನ ವಾರದಲ್ಲಿ ಪಾವತಿಸಲಾಗುವುದು. ಕಾರ್ಖಾನೆಯಿಂದ ನೀಡಬೇಕಾದ ಬಾಕಿ ಹಣವನ್ನು ಜೂನ್ ಅಂತ್ಯದೊಳಗೆ ಪಾವತಿ ಮಾಡಿ, ಜುಲೈ ಎರಡನೇ ವಾರದಲ್ಲಿ ಕಾರ್ಖಾನೆಗೆ ಚಾಲನೆ ನೀಡಲಾಗುವುದು ಎಂದು ತಿಳಿಸಿದರು. ಗೋಷ್ಠಿಯಲ್ಲಿ ಕಾಂಗ್ರೆಸ್ ಕಿಸಾನ್ ಮೋರ್ಚಾದ ಜಿಲ್ಲಾಧ್ಯಕ್ಷ ಮೋಹನ್‌ಕುಮಾರ್, ರಾಮಕೃಷ್ಣ, ಉದಯ್‌ಕುಮಾರ್ ಮತ್ತು ದೀಪಕ್ ಉಪಸ್ಥಿತರಿದ್ದರು.



# ಚಿಕ್ಕಬಳ್ಳಾಪುರದಲ್ಲಿ ಮೇ 31ಕ್ಕೆ ರಾಜ್ಯ ಮಟ್ಟದ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ

**ಬೆಂಗಳೂರು:** ರಾಜ್ಯದ ಫಲಪುಷ್ಪಗಳ ಗಿರಿಧಾಮ ನಾಡು ಎಂದೇ ಖ್ಯಾತಿ ಪಡೆದಿರುವ ಚಿಕ್ಕಬಳ್ಳಾಪುರದ ಕನ್ನಡ ಭವನದಲ್ಲಿ ಮೇ.31 ರಂದು ಭಾನುವಾರ ರಾಜ್ಯ ಮಟ್ಟದ ಕೆಯುಡಬ್ಲ್ಯೂಜೆ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮ ಅರ್ಥಪೂರ್ಣವಾಗಿ ಆಯೋಜಿಸಲಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿದರು.



ಚಿಕ್ಕಬಳ್ಳಾಪುರ ನಗರದ ಪತ್ರಕರ್ತರ ಭವನದಲ್ಲಿ ಈ ಕುರಿತು ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಅತಿಥ್ಯವನ್ನು ಮೊದಲ ಬಾರಿಗೆ ಚಿಕ್ಕಬಳ್ಳಾಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ವಹಿಸಿಕೊಂಡಿದ್ದು ರಾಜ್ಯದ ಸುಮಾರು 200 ಕ್ಕೂ ಹೆಚ್ಚು ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುವುದೆಂದರು.

ಭಾರತ ರತ್ನ ಸರ್‌ಎಂವಿ, ಖ್ಯಾತ ವಿಜ್ಞಾನಿ ಸಿಎನ್‌ಆರ್ ರಾವ್ ರವರ ಹುಟ್ಟಿ ಬೆಳೆದ ಚಿಕ್ಕಬಳ್ಳಾಪುರ ಜಿಲ್ಲೆಯು ನಾಡಿಗೆ ಅನೇಕ ದಿಗ್ಗಜರನ್ನು ಕೊಡುಗೆಯಾಗಿ ನೀಡಿದ್ದು, ಅನೇಕ ಐತಿಹ್ಯಗಳನ್ನು ಜಿಲ್ಲೆಯು ಹೊಂದಿದೆ.

ವಿಶೇಷವಾಗಿ ಫಲಪುಷ್ಪಗಳ ಗಿರಿಧಾಮ ನಾಡನಾಗಿ ಗಮನ ಸೆಳೆದಿದೆ. ಈ ಹಿನ್ನಲೆಯಲ್ಲಿ ಪ್ರತಿಭಾ ಪುರಸ್ಕಾರ ಪ್ರದಾನವನ್ನು ಈ ಬಾರಿಗೆ ಜಿಲ್ಲೆಯಲ್ಲಿ ಹಮ್ಮಿಕೊಂಡಿದ್ದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವೂ ಅರ್ಥಪೂರ್ಣವಾಗಿ ಕಾರ್ಯಕ್ರಮದ ಯಶಸ್ವಿಗೆ ಸಿದ್ದತೆ ಮಾಡಿಕೊಂಡಿದೆ ಎಂದರು.

ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ರಾಜ್ಯದ ಎಲ್ಲಾ ಜಿಲ್ಲೆಗಳ ಪತ್ರಕರ್ತರ ಮಕ್ಕಳಿಗೆ ರಾಜ್ಯ ಸಂಘದಿಂದ ಪ್ರತಿಭಾ ಪುರಸ್ಕಾರ ವಿತರಣೆ ಮಾಡಲಾಗುತ್ತಿದ್ದು, ಇದೇ ಮೊದಲ ಬಾರಿಗೆ 3000 ಸಾವಿರ ರೂ. ನಗದು, ಸ್ಮರಣಿಕೆ, ಅಭಿನಂದನಾ ಪತ್ರ ವಿತರಿಸಲಾಗುತ್ತಿದೆ ಎಂದರು.

ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಸೇರಿ ಹಲವು ಗಣ್ಯರು ಭಾಗಿ ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮಕ್ಕೆ ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ ರವರು ಭಾಗವಹಿಸಿ ದಿಕ್ಸೂಚಿ ಭಾಷಣ ಮಾಡಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲೆಯ ನಿಕಪೂಟ ಜಿಲ್ಲಾ ಉಸ್ತುವಾರಿಗಳಾದ ರಾಜ್ಯದ ಮಾಜಿ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ನೆರವೇರಿಸಲಿದ್ದಾರೆ.

ಅಭಿನಂದನಾ ನುಡಿಯನ್ನು ಕ್ಷೇತ್ರದ ಸಂಸದರಾದ ಡಾ.ಕೆ.ಸುಧಾಕರ್ ಮಾಡಲಿದ್ದು, ಪ್ರತಿಭಾ ಪುರಸ್ಕಾರವನ್ನು ಸಿದ್ದರಾಮಯ್ಯ ಅವರಿಗೆ ಮಾಧ್ಯಮ ಸಲಹೆಗಾರರು ಆಗಿದ್ದ ಕೆ.ವಿ.ಪ್ರಭಾಕರ್ ನೆರವೇರಿಸಲಿದ್ದಾರೆ. ಜಿಲ್ಲೆಯ ಎಲ್ಲಾ ಶಾಸಕರಿಗೆ ಆಹ್ವಾನ ನೀಡಲಾಗಿದೆ ಎಂದು ಶಿವಾನಂದ ತಗಡೂರು ಹೇಳಿದರು.

ಸಂಘದ ಜಿಲ್ಲಾಧ್ಯಕ್ಷರಾದ ವಿ.ರವಿಕುಮಾರ್ ಮಾತನಾಡಿ, ಇಡೀ ರಾಜ್ಯಕ್ಕೆ ಮಾದರಿ ಆಗುವ ರೀತಿಯಲ್ಲಿ ಕೆಯುಡಬ್ಲ್ಯೂಜೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಜಿಲ್ಲಾ ಸಂಘ ಅತಿಥ್ಯ ವಹಿಸಿ ಹಲವು ಸಿದ್ದತೆಗಳನ್ನು ಮಾಡಿಕೊಂಡಿದ್ದು, ಕಾರ್ಯಕ್ರಮದಲ್ಲಿ ಮಾಧ್ಯಮ ಹಾಗೂ ಸ್ತ್ರೀಶಕ್ತಿ ಸಂಘಗಳು ತಯಾರಿಸಿ ಉತ್ಪನ್ನಗಳ ಮಾರಾಟ ಹಾಗೂ ವಸ್ತು ಪ್ರದರ್ಶನ ವ್ಯವಸ್ಥೆ ಮಾಡಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಗತಿ ನಾಗರಾಜಪ್ಪ, ರಾಜ್ಯ ಸಮಿತಿ ಸದಸ್ಯರಾದ ಎನ್.ಚಂದ್ರಶೇಖರ್ ಸೇರಿದಂತೆ ಮತ್ತಿತರರು ಇದ್ದರು

## ಜೂ.4ರಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಣೆಗೆ ಕರೆ

**ಮಂಡ್ಯ:** ರಾಜ್ಯ ಹಾಗೂ ಜಿಲ್ಲೆಯ ಎಲ್ಲ ಜನತೆ ಜೂನ್ 4ರಂದು ಮೈಸೂರು ಭಾಗದ ಅಭಿವೃದ್ಧಿಯ ಹರಿಕಾರ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿಯನ್ನು ಆಚರಿಸಬೇಕು ಎಂದು ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಟ್ರಸ್ಟ್ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲ ಹಳ್ಳಿಗಳು ಹಾಗೂ ಪಟ್ಟಣಗಳ ಜನರು ಸ್ವಯಂ ಪ್ರೇರಣೆಯಿಂದ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿಯನ್ನು ಆಚರಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾಡಳಿತ ಹಾಗೂ ಜಿ.ಪಂ ಸಿಇಒ ವಿಶೇಷ ಆದೇಶ ಹೊರಡಿಸಿ ಜಿಲ್ಲೆಯಾದ್ಯಂತ ಇರುವ ಶಾಲೆ–ಕಾಲೇಜುಗಳು, ಹಾಸ್ಟೆಲ್‌ಗಳು, ವಸತಿ ಶಾಲೆಗಳು, ಗ್ರಾಮ ಪಂಚಾಯಿತಿ ಕಚೇರಿಗಳು, ನಾಡಾ ಕಚೇರಿಗಳು ಹಾಗೂ ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಮಹಾರಾಜರ ಜಯಂತಿಯನ್ನು ಆಚರಿಸಿ, ಉಪನ್ಯಾಸಗಳ ಮೂಲಕ ಅವರನ್ನು ಸ್ಮರಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ಎಲ್ಲಾ ಸಂಘ–ಸಂಸ್ಥೆಗಳು ಹಾಗೂ ಸಾರ್ವಜನಿಕರು ಸಹ ಸ್ವಯಂಪ್ರೇರಣೆಯಿಂದ ಜಯಂತಿ ಆಚರಣೆ ನಡೆಸಿ, ಅನ್ನದಾನ ಮಾಡುವ ಮೂಲಕ ಮಹಾರಾಜರಿಗೆ ಗೌರವ ಸಲ್ಲಿಸಬೇಕು ಎಂದು ಮನವಿ ಮಾಡಿದರು.

ಗೋಷ್ಠಿಯಲ್ಲಿ ಉಪಾಧ್ಯಕ್ಷ ಕೆ.ಟಿ. ಜಗದೀಶ್, ಸಹಕಾರ್ಯದರ್ಶಿ ಬಿ.ಎಂ. ದೇವೇಗೌಡ, ಸಾಂಸ್ಕೃತಿಕ ಕಾರ್ಯದರ್ಶಿ ಟಿ.ಡಿ. ನಾಗರಾಜು ಹಾಗೂ ಪ್ರಧಾನ ಸಂಚಾಲಕ ಚಂದ್ರಶೇಖರ ದ. ಕೋಹಳ್ಳಿ ಉಪಸ್ಥಿತರಿದ್ದರು.



# ಸರ್ಕಾರಿ ಶಾಲೆ ಉಳಿಸಿಕೊಳ್ಳದಿದ್ದರೆ ಶಿಕ್ಷಣ ಗಗನ ಕುಸುಮವಾಗಲಿದೆ: ಆವಧಾನಿ

**ಕೆ.ಆರ್.ಪೇಟೆ:** ಸರ್ಕಾರಿ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣ ಸಿಗುತ್ತಿದ್ದು, ಶಿಕ್ಷಕರು ಜವಾಬ್ದಾರಿಯಿಂದ ಕೆಲಸ ಮಾಡುವ ಮೂಲಕ ಸರ್ಕಾರಿ ಶಾಲೆಗಳ ಉಳಿವಿಗೆ ಪ್ರಯತ್ನಿಸಬೇಕು. ಅದೇ ರೀತಿ ಪೋಷಕರು ಸಹ ತಮ್ಮಲ್ಲಿನ ಖಾಸಗಿ ಶಾಲೆಯ ವ್ಯಾಮೋಹವನ್ನು ದೂರಮಾಡಿ ತಮ್ಮ ಮಕ್ಕಳನ್ನು ತಮ್ಮ ಗ್ರಾಮದ ಸರ್ಕಾರಿ ಶಾಲೆಗೆ ದಾಖಲು ಮಾಡುವ ಮೂಲಕ ಬಡವರ ಜ್ಞಾನ ಕೇಂದ್ರಗಳಾಗಿರುವ ಸರ್ಕಾರಿ ಶಾಲೆಗಳನ್ನು ಮುಚ್ಚದಂತೆ ನೋಡಿಕೊಳ್ಳಬೇಕು ಎಂದು ತಾಲ್ಲೂಕಿನ ಆಧ್ಯಾತ್ಮಿಕ ಹಾಗೂ ಸಾಮಾಜಿಕ ಚಿಂತಕ ಗೋಪಾಲಕೃಷ್ಣ ಆವಧಾನಿ ಅವರು ಹೇಳಿದರು.



ತಾಲ್ಲೂಕಿನ ಸಂತೇಬಾಚಹಳ್ಳಿ ಹೋಬಳಿಯ ಬೆಡದಹಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಪೋಷಕರು ಮತ್ತು ಶಿಕ್ಷಕರ ಮಹಾಸಭೆ ಕಾರ್ಯಕ್ರಮದಲ್ಲಿ ಶಾಲೆಗೆ ದಾಖಲಾದ 15ಮಕ್ಕಳಿಗೂ ಸರಸ್ವತಿ ದೇವಿ ಮತ್ತು ಹಯಗ್ರೀವ ಮಂತ್ರವನ್ನು ಹೇಳಿಕೊಡುವ ಮೂಲಕ ಅಕ್ಷರ ಕಲಿಕಾ ಕಾರ್ಯಕ್ರಮಕ್ಕೆ ಶಾರದಾ ದೇವಿಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳು ಉಚಿತ ಶಿಕ್ಷಣ ಪಡೆದುಕೊಳ್ಳಲು ಸರ್ಕಾರವು ಕೋಟ್ಯಂತರ ರೂಪಾಯಿಗಳನ್ನು ಶಿಕ್ಷಣಕ್ಕೆ ಖರ್ಚು ಮಾಡುತ್ತಿದೆ. ಖಾಸಗಿ ಶಾಲೆಗಳಿಗಿಂತ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಬೋಧನೆ, ಬಿಸಿಯೂಟ, ಸಮವಸ್ತ್ರ, ಪಠ್ಯಪುಸ್ತಕ ಸೇರಿದಂತೆ ಹಲವು ಸೌಲಭ್ಯಗಳನ್ನು ಉಚಿತವಾಗಿ ಸರ್ಕಾರವು ನೀಡುತ್ತಿದೆ. ಇಷ್ಟೆಲ್ಲಾ ಸೌಲಭ್ಯಗಳನ್ನು ಒದಗಿಸಿದ್ದರೂ ದಾಖಲಾತಿ ಪ್ರಮಾಣ ಕಡಿಮೆಯಾಗುತ್ತಿರುವುದಕ್ಕೆ ಪೋಷಕರ ಇಂಗ್ಲೀಷ್ ಮತ್ತು ಕಾನ್ವೆಂಟ್ ವ್ಯಾಮೋಹವೇ ಕಾರಣವಾಗಿದೆ. ಇದನ್ನು ಮನಗಂಡು ಸರ್ಕಾರವು ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಕನ್ನಡ ಭಾಷೆಯ ಜೊತೆಗೆ ಇಂಗ್ಲೀಷ್ ಕಲಿಸಲು ಅವಕಾಶ ಕಲ್ಪಿಸಿದೆ ಹಾಗಾಗಿ ಪೋಷಕರು ತಮ್ಮ ಮಕ್ಕಳ ಸುರಕ್ಷತೆ ದೃಷ್ಟಿಯಿಂದ ತಮ್ಮ ಗ್ರಾಮದ ಸರ್ಕಾರಿ ಶಾಲೆಗಳಲ್ಲಿಯೇ ವಿದ್ಯಾಭ್ಯಾಸ ಕೊಡಿಸಬೇಕು ಎಂದು ಸಲಹೆ ನೀಡಿದರು.

ಬೆಡದಹಳ್ಳಿ ಶ್ರೀ ಪಂಚಭೂತೇಶ್ವರ ಶ್ರೀ ಕ್ಷೇತ್ರದ ಪೀಠಾಧ್ಯಕ್ಷ ಶ್ರೀ ರುದ್ರಮುನಿ ಸ್ವಾಮೀಜಿ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿ ಸರ್ಕಾರಿ ಶಾಲೆಯನ್ನು ಉಳಿಸಲು ಬೆಡದಹಳ್ಳಿ ಗ್ರಾಮಸ್ಥರು ಮುಂದಾಗಿರುವುದು ಒಳ್ಳೆಯ ಬೆಳವಣಿಗೆಯಾಗಿದೆ. ಒಂದು ಶಾಲೆಯು ಮುಚ್ಚಿದರೆ ಇಡೀ ಗ್ರಾಮದ ಸೌಂದರ್ಯವೇ ಹಾಳಾಗುತ್ತದೆ. ಮಕ್ಕಳ ಕಲರವ ಇಲ್ಲದಿದ್ದರೆ ಗ್ರಾಮದಲ್ಲಿ ಸ್ಮಶಾನ ಮೌನದಂತಹ ವಾತಾವರಣ ಸೃಷ್ಟಿಯಾಗುತ್ತದೆ. ಮುಚ್ಚಿದ ಶಾಲೆಯನ್ನು ನೋಡಿದರೆ ಎಲ್ಲರಿಗೂ ದುಃಖ ಉಮ್ಮಳಿಸಿ ಬರುತ್ತದೆ ಹಾಗಾಗಿ ಬೆಡದಹಳ್ಳಿ ಗ್ರಾಮಸ್ಥರು ಇದಕ್ಕೆ ಅವಕಾಶ ಮಾಡಿಕೊಡದೇ, ಬೇರೆ ಬೇರೆ ಖಾಸಗಿ ಶಾಲೆಗಳಲ್ಲಿ ಓದುತ್ತಿದ್ದ ತಮ್ಮ ಮಕ್ಕಳನ್ನು ಕರೆತಂದು ತಮ್ಮೂರಿನ ಸರ್ಕಾರಿ ಶಾಲೆಗೆ ಸೇರಿಸುವ ಮೂಲಕ ಮುಚ್ಚಿ ಹೋಗುವ ಹಂತಕ್ಕೆ ಬಂದಿದ್ದ ಸರ್ಕಾರಿ ಶಾಲೆಯನ್ನು ಉಳಿಸಿಕೊಂಡಿರುವುದು ಎಲ್ಲರೂ ಮೆಚ್ಚುವಂತಹ ವಿಚಾರವಾಗಿದೆ. ಮುಂದಿನ ದಿನಗಳಲ್ಲಿ ಗ್ರಾಮದ ಯುವಕರು, ಹಿರಿಯ ವಿದ್ಯಾರ್ಥಿಗಳು ತಾವು ಓದಿದ ಶಾಲೆಯು ಮುಚ್ಚದಂತೆ ನೋಡಿಕೊಳ್ಳಲು 6 ವರ್ಷ ತುಂಬಿದ ಎಲ್ಲ ಮಕ್ಕಳನ್ನು ಶಾಲೆಗೆ ಸೇರಿಸುವ ಜವಾಬ್ದಾರಿ ತೆಗೆದುಕೊಳ್ಳಬೇಕು. ಈ ನಿಟ್ಟಿನಲ್ಲಿ ಗ್ರಾಮದ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಸುನಿಲ್, ಶಿಕ್ಷಕರಾದ ಕಾಂತರಾಜು, ಮಂಜೇಗೌಡ ಮತ್ತಿತರರು ಪೋಷಕರ ಮನವೊಲಿಸಿ ತಮ್ಮ ಗ್ರಾಮದ ಶಾಲೆಗೆ ದಾಖಲಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವುದು ಹೆಮ್ಮೆಯ ವಿಚಾರವಾಗಿದೆ. ಸರ್ಕಾರಿ ಶಾಲೆಗಳು ಮುಚ್ಚುವುದರಿಂದ ಬಡವರಿಗೆ ಶಿಕ್ಷಣ ಎಂಬುದು ಗಗನ ಕುಸುಮವಾಗಲಿದೆ. ಖಾಸಗಿ ಶಾಲೆ ಫೀಸ್ ಕಟ್ಟಲಾಗದ ಬಡ, ಕೂಲಿ ಕಾರ್ಮಿಕ, ರೈತ ಮಕ್ಕಳು ಶಾಲೆಯಿಂದ ಹೊರಗುಳಿಯುವ ಸಾಧ್ಯತೆ ಹೆಚ್ಚಾಗುತ್ತದೆ. ಹೆಣ್ಣು ಮಕ್ಕಳು ಶಿಕ್ಷಣವನ್ನು ಅರ್ಧಕ್ಕೆ ಮೊಟಕು ಮಾಡಿ ಮನೆಗೆಲಸಕ್ಕೆ ಸೀಮಿತವಾಗಿ ಬಾಲ್ಯ ವಿವಾಹಕ್ಕೆ ಒಳಗಾಗುವ ಅಪಾಯ ಇರುತ್ತದೆ. ಖಾಸಗಿ ಶಾಲೆಯಲ್ಲಿ ಶಿಕ್ಷಣ ಕೊಡಿಸಲು ಸಾಧ್ಯವಾಗದ ಕಾರಣ ಬಡವರ ಶಾಲೆ ಬಿಟ್ಟ ಮಕ್ಕಳು ಹೋಟೆಲ್, ಗ್ಯಾರೇಜ್, ಹೊಲದಲ್ಲಿ ಬಾಲ ಕಾರ್ಮಿಕರಾಗಿ ದುಡಿಮೆ ಮಾಡಲು ಪೋಷಕರು ಕಳಿಸುತ್ತಾರೆ. ಗ್ರಾಮದ ಸರ್ಕಾರಿ ಶಾಲೆ ಮುಚ್ಚಿದರೆ ಅದು ಮಕ್ಕಳ ಭವಿಷ್ಯ ರೂಪಿಸಬೇಕಾದ ದೇವಾಲಯವೇ ಮುಚ್ಚಿದಂತಾಗುತ್ತದೆ ಹಾಗಾಗಿ ಸರ್ಕಾರಿ ಉಳಿಸಿಕೊಳ್ಳುವುದು ನಮ್ಮೆಲ್ಲರ ಸಾಮಾಜಿಕ ಜವಾಬ್ದಾರಿಯಾಗಿದೆ ಈ ನಿಟ್ಟಿನಲ್ಲಿ ಬೆದಡಹಳ್ಳಿ ಗ್ರಾಮಸ್ಥರು ಎಲ್ಲರೂ ದೊಡ್ಡ ಮನಸ್ಸು ಮಾಡಿ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲು ಮಾಡಿ ಶಾಲೆಯನ್ನು ಉಳಿಸಿಕೊಂಡಿರುವುದು ಇಡೀ ನಾಗರೀಕ ಸಮಾಜವೇ ಮೆಚ್ಚುವಂತಹ ಸಂಗತಿಯಾಗಿದೆ. ಅಲ್ಲದೆ ಶಾಲೆಯ ಶಿಕ್ಷಕರಾದ ಕೆ.ಆರ್.ವಸಂತಕುಮಾರ್ ತಮ್ಮ ಮಗುವನ್ನು ತಮ್ಮ ಶಾಲೆಗೆ ದಾಖಲು ಮಾಡುವ ಮೂಲಕ ಮಾದರಿಯಾಗಿದ್ದಾರೆ. ಇದರಿಂದ ಅನೇಕ ಪೋಷಕರು ಸ್ವಯಂಪ್ರೇರಿತವಾಗಿ ತಮ್ಮ ಮಕ್ಕಳನ್ನು ಖಾಸಗಿ ಶಾಲೆಯಿಂದ ಕರೆತಂದು ಸರ್ಕಾರಿ ಶಾಲೆಗೆ ದಾಖಲು ಮಾಡಿರುವುದು ಶ್ರೇಷ್ಠ ಕೆಲಸವಾಗಿದೆ ಎಂದು ಬೆಡದಹಳ್ಳಿ ಶ್ರೀಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಲೆಯ ಮುಖ್ಯ ಶಿಕ್ಷಕರು ಹಾಗೂ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕರಾದ ಜಿ.ಎಸ್.ಮಂಜು ಪ್ರಾಸ್ತಾವಿಕ ನುಡಿಗಳನ್ನಾಡಿದರು. ರಾಗಿಮುದ್ದನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ಕಾಂತರಾಜು, ಗ್ರಾ.ಪಂ.ಮಾಜಿ ಉಪಾಧ್ಯಕ್ಷ ಸುನಿಲ್, ಶಿಕ್ಷಣ ಸಂಯೋಜಕ ಕೃಷ್ಣನಾಯಕ್, ಬಿ.ಆರ್.ಪಿ. ಶ್ರೀಧರ್, ಮಾರ್ಗೋನಹಳ್ಳಿ ಮೊರಾರ್ಜಿ ಶಾಲೆಯ ಶಿಕ್ಷಕ ಕೆ.ಎಸ್.ಚಂದ್ರು, ಕೊರಟೀಕೆರೆ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಮಹೇಶ್, ಗ್ರಾ.ಪಂ.ಸದಸ್ಯ ಶ್ರೀನಿವಾಸ್, ಶಾಲೆಯ ಶಿಕ್ಷಕರಾದ ಕೆ.ಆರ್.ವಸಂತಕುಮಾರ್ ಕಾರ್ಯಕ್ರಮ ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ಶಿಕ್ಷಣ ಸಂಯೋಜಕ ಕೃಷ್ಣನಾಯಕ್, ಬಿ.ಆರ್.ಪಿ. ಶ್ರೀಧರ್, ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಸುನಿಲ್, ಶಿಕ್ಷಕರಾದ ಕಾಂತರಾಜು, ಮಹೇಶ್, ಮೋಹನ್, ವೈರಮುಡಿ, ಸತೀಶ್, ಮಾರ್ಗೋನಹಳ್ಳಿ ಮೊರಾರ್ಜಿ ಶಾಲೆಯ ಶಿಕ್ಷಕ ಕೆ.ಎಸ್.ಚಂದ್ರು, ಗ್ರಾಮದ ಮುಖಂಡರಾದ ಪಾಪಣ್ಣ(ಬಲರಾಮೇಗೌಡ), ಅಕ್ಕವ್ವನ ನಿಂಗರಾಜು, ಸಣ್ಣನಿಂಗೇಗೌಡ, ಶಿವಲಿಂಗೇಗೌಡ, ಎಸ್.ಡಿ.ಎಂ.ಸಿ ಅಧ್ಯಕ್ಷ ಮಂಜುನಾಥ್, ನರಸಪ್ಪನ ನಾಗಣ್ಣ, ಮಾಸ್ಟರ್‌ಮನೆ ರೇವಣ್ಣ, ನಿಂಗೇಗೌಡ, ಭೈರೇಗೌಡ, ಸಾವಿತ್ರಮ್ಮ, ಅರುವಣ್ಣನ ಮಹೇಶ್, ಮಂಜೇಗೌಡ, ನಾಗರಾಜು, ಜಯರಾಂ, ಸುರೇಂದ್ರ, ದೊಡ್ಡೇಗೌಡ, ಮಂಜುನಾಥ್, ರುದ್ರೇಗೌಡ, ನಂಜುಂಡೇಗೌಡ, ಕೃಷ್ಣ, ಸವಿತಾ, ಭಾರತಿ, ರಂಜಿತಾಕಾಂತರಾಜು, ದೊಡ್ಡಟ್ಟಿ ಯೋಗೇಶ್, ಶಿಲ್ಪ, ಚಂದ್ರು, ಶ್ವೇತಾಹರೀಶ್, ಸೌಂದರ್ಯ, ಭಾರತೀ ಚಂದ್ರು, ರವಿಅನಿತಾ, ಜಯಮ್ಮ, ಆಶಾದೇವರಾಜು, ಪ್ರೇಮದೇವರಾಜು, ನಂಜಮ್ಮ ಪಾಪೇಗೌಡ, ಯೋಗೇಶ್, ಕಾಮಾಕ್ಷಮ್ಮ, ಸುಜಾತ, ಅಂಗನವಾಡಿ ಶಿಕ್ಷಕಿ ಜಯಂತಿ ಮತ್ತಿತರರು ಉಪಸ್ಥಿತರಿದ್ದರು.

# ತಿಪ್ಪಣ್ಣಪ್ಪ ಕಮಕನೂರರಿಗೆ ವಿಧಾನ ಪರಿಷತ್ ಸ್ಥಾನ ಮುಂದುವರಿಸಲು ಎಸ್. ರಮೇಶ್ ಒತ್ತಾಯ




**ಮಂಡ್ಯ:** ಗಂಗಾಮತಸ್ಥರ (ಬೆಸ್ತರ್) ಸಮುದಾಯದ ತಿಪ್ಪಣ್ಣಪ್ಪ ಕಮಕನೂರ ಅವರನ್ನು ವಿಧಾನ ಪರಿಷತ್ ಸದಸ್ಯರಾಗಿ ಮುಂದುವರಿಸಲು ಒತ್ತಾಯಿಸಿ ಮಂಡ್ಯ ಜಿಲ್ಲಾ ಗಂಗಾಮತಸ್ಥರ (ಬೆಸ್ತರ್) ಸಂಘದ ಅಧ್ಯಕ್ಷ ಎಸ್. ರಮೇಶ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಿಪ್ಪಣ್ಣಪ್ಪ ಕಮಕನೂರ ಅವರು ಸಮುದಾಯದಲ್ಲಿ ಚಿರಪರಿಚಿತರಾಗಿದ್ದು, ವಿಧಾನ ಪರಿಷತ್ ಸದಸ್ಯರಾಗಿ ಅಲ್ಪಾವಧಿಯಲ್ಲೇ ಉತ್ತಮ ಕಾರ್ಯ ನಿರ್ವಹಿಸಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯಾದ್ಯಂತ ಪ್ರವಾಸ ಕೈಗೊಂಡು ವಿಧಾನಸಭೆ ಚುನಾವಣೆಯಲ್ಲಿ ಪಕ್ಷಕ್ಕೆ ಹೆಚ್ಚಿನ ಮತಗಳು ದೊರಕುವಂತೆ ಶ್ರಮಿಸಿದ್ದಾರೆ. ಸಮಾಜದ ಏಕೈಕ ರಾಜಕೀಯ ಧುರೀಣರಾಗಿರುವ ಅವರು, ಮಲ್ಲಿಕಾರ್ಜುನ ಖರ್ಗೆ ಅವರ ಆಪ್ತರಾಗಿದ್ದಾರೆ.

ಆದ್ದರಿಂದ ಸಮಾಜದ ಪರವಾಗಿ ಒಕ್ಕೊರಳಿನಿಂದ ಅವರಿಗೆ ವಿಧಾನ ಪರಿಷತ್ ಸದಸ್ಯತ್ವವನ್ನು ಮುಂದುವರಿಸಲು ಮನವಿ ಮಾಡಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಹೊನ್ನಪ್ಪ, ಉಪಾಧ್ಯಕ್ಷ ಸಿದ್ದಪ್ಪ, ನಿರ್ದೇಶಕ ಈರಯ್ಯ ಹಾಗೂ ಗಂಗಾಮತಸ್ಥರ (ಬೆಸ್ತರ್) ಸೌಹಾರ್ದ ಸಂಘದ ಅಧ್ಯಕ್ಷ ಬಿ. ಲಿಂಗಯ್ಯ ಉಪಸ್ಥಿತರಿದ್ದರು.

# ರಾಜ್ಯಕ್ಕೆ ದಲಿತ ಮುಖ್ಯಮಂತ್ರಿ ಆಯ್ಕೆ ಮಾಡುವಂತೆ ಭೀಮ ಸೇನೆ ಒತ್ತಾಯ

**ಮಂಡ್ಯ:** ರಾಜ್ಯದಲ್ಲಿ ದಲಿತ ಸಮುದಾಯದವರಿಗೆ ಮುಖ್ಯಮಂತ್ರಿ ಸ್ಥಾನ ನೀಡುವಂತೆ ಭೀಮ ಸೇನೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಜೆ. ಪ್ರಸನ್ನ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಹಿಂದುಳಿದ ಸಮುದಾಯಗಳ ರಾಜಕೀಯ ಪ್ರತಿನಿಧಿತ್ವವನ್ನು ಬಲಪಡಿಸಲು ದಲಿತ ಸಮುದಾಯಕ್ಕೆ ಸಿಎಂ ಸ್ಥಾನ ನೀಡುವುದು ಅವಶ್ಯಕವಾಗಿದೆ ಎಂದರು.

ಜಿ. ಪರಮೇಶ್ವರ್ ಅಥವಾ ಸತೀಶ್ ಜಾರಕಿಹೋಳಿ ಅವರು ಸಚಿವರಾಗಿ ಸಾಕಷ್ಟು ರಾಜಕೀಯ ಅನುಭವ ಹೊಂದಿದ್ದು, ಸಮರ್ಥ ನಾಯಕತ್ವದ ಗುಣಗಳನ್ನು ಹೊಂದಿದ್ದಾರೆ. ರಾಜ್ಯದ ಅಭಿವೃದ್ಧಿಗೆ ಸ್ಪಷ್ಟ ದೃಷ್ಟಿಕೋನ ಹೊಂದಿರುವ ಇವರಲ್ಲಿ ಯಾರನ್ನಾದರೂ ಮುಖ್ಯಮಂತ್ರಿ ಸ್ಥಾನಕ್ಕೆ ಆಯ್ಕೆ ಮಾಡಬೇಕು ಎಂದು ಆಗ್ರಹಿಸಿದರು.




ರಾಜ್ಯದ ಇತಿಹಾಸದಲ್ಲಿ ದಲಿತ ಸಮುದಾಯಕ್ಕೆ ಅತ್ಯುನ್ನತ ರಾಜಕೀಯ ಹುದ್ದೆ ನೀಡುವ ಅಗತ್ಯ ಹೆಚ್ಚಾಗಿದ್ದು, ಈ ಬಾರಿ ಅದನ್ನು ನೆರವೇರಿಸಬೇಕು ಎಂದು ಒತ್ತಾಯಿಸಿದರು. ಒಂದು ವೇಳೆ ಈ ಬೇಡಿಕೆ ಈಡೇರಿಸದಿದ್ದರೆ ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಗೋಷ್ಠಿಯಲ್ಲಿ ನೂರ್ ಅಹಮದ್, ಟಿ. ಉಮಾಪತಿ, ರವಿಕುಮಾರ್, ರಜಿನಿ ಹಾಗೂ ಅಹಲಾಯಿ ಉಪಸ್ಥಿತರಿದ್ದರು.


# ಸಿ. ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಲು ಒತ್ತಾಯ

**ಮಂಡ್ಯ:** ಚಾಮರಾಜನಗರ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಲು ಕಾಂಗ್ರೆಸ್ ಪಕ್ಷ ಮುಂದಾಗಬೇಕು ಎಂದು ಮಲ್ಲನಾಯಕನಕಟ್ಟೆ ಗ್ರಾಮದ ಕೃಷಿಪತ್ತಿನ ಸಹಕಾರ ಸಂಘದ ನಿರ್ದೇಶಕ ಕುಮಾರ್ ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿ. ಪುಟ್ಟರಂಗಶೆಟ್ಟಿ ಅವರು ಚಾಮರಾಜನಗರ ಕ್ಷೇತ್ರದಿಂದ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಹಿರಿಯ ನಾಯಕರು. ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಉಪ್ಪಾರ ಸಮುದಾಯಕ್ಕೆ ನ್ಯಾಯ ಒದಗಿಸಿ ಶಕ್ತಿ ತುಂಬಬೇಕು ಎಂದು ಆಗ್ರಹಿಸಿದರು.

ಹಿಂದುಳಿದ ವರ್ಗಗಳ ಶಕ್ತಿಯಾಗಿ, ಉಪ್ಪಾರ ಸಮುದಾಯದ ಪರವಾಗಿ ಸದಾ ಧ್ವನಿಯಾಗಿರುವ ಅವರು ಸಚಿವರಾಗುವುದರಿಂದ ಸಾಮಾಜಿಕ ನ್ಯಾಯ ಹಾಗೂ ಸಮಾನ ಪ್ರತಿನಿಧಿತ್ವಕ್ಕೆ ಮತ್ತಷ್ಟು ಬಲ ಸಿಗಲಿದೆ ಎಂದು ಹೇಳಿದರು. ಆದ್ದರಿಂದ ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಪಕ್ಷದ ಹಿರಿಯ ನಾಯಕರು ಉಪ್ಪಾರ ಸಮುದಾಯದ ಭಾವನೆಗಳಿಗೆ ಸ್ಪಂದಿಸಿ ಸಿ. ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡುವಂತೆ ಮನವಿ ಮಾಡಿದರು. ಗೋಷ್ಠಿಯಲ್ಲಿ ಪಪ್ಪಾಯಿ ಆನಂದ್, ಮೇಸ್ತ್ರಿ ಮಹದೇವ, ಮಂಜು, ಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.



# ಅಭಿರುಚಿ ಇಲ್ಲದ ಜೀವನ ನೀರಸ ಜೀವನ



ಜೀವನ ಎನ್ನುವುದು ಕೇವಲ ಉಸಿರಾಡುವುದು, ತಿನ್ನುವುದು ಬದುಕುವುದಲ್ಲ ; ಅದು ಅನುಭವಿಸುವುದು, ಆಸ್ವಾದಿಸುವುದು. ಆದರೆ ಇಂದಿನ ಯಾಂತ್ರಿಕ ಯುಗದಲ್ಲಿ ಮನುಷ್ಯ ಕೇವಲ ಬದುಕುಳಿಯುವ ಹೋರಾಟದಲ್ಲೇ ಇಡೀ ದಿನವನ್ನು ಕಳೆದುಬಿಡುತ್ತಿದ್ದಾನೆ. ಬೆಳಗ್ಗೆ ಎದ್ದಾಗಿನಿಂದ ರಾತ್ರಿ ಮಲಗುವವರೆಗೆ ಒಂದೇ ರೀತಿಯ ದಿನಚರಿ, ಅದೇ ಜಂಜಾಟ, ಅದೇ ಒತ್ತಡ. ಈ ನಡುವೆ ನಾವು ನಮಗಾಗಿ, ನಮ್ಮ ಮನಸ್ಸಿನ ಸಂತೋಷಕ್ಕಾಗಿ ಏನು ಮಾಡುತ್ತಿದ್ದೇವೆ ಎಂದು ಯೋಚಿಸಿದರೆ ಸಿಗುವ ಉತ್ತರ ಶೂನ್ಯ. ಇಂತಹ ಸಂದರ್ಭದಲ್ಲೇ ಒಂದು ಮಾತು ನೆನಪಾಗುತ್ತದೆ: "ಅಭಿರುಚಿ ಇಲ್ಲದ ಜೀವನ ನೀರಸ ಜೀವನ".

ಯಾವ ಜೀವನದಲ್ಲಿ ಒಂದು ಆಸಕ್ತಿ, ಒಂದು ಹವ್ಯಾಸ ಅಥವಾ ಕಲೆಯ ಪ್ರೀತಿ ಇರುವುದಿಲ್ಲವೋ, ಆ ಜೀವನ ಕೇವಲ ಒಂದು ಯಾಂತ್ರಿಕ ಚಲನೆಯಾಗಿ ಉಳಿಯುತ್ತದೆ. ಬಣ್ಣವಿಲ್ಲದ ಚಿತ್ರದಂತೆ, ಉಪ್ಪಿಲ್ಲದ ಅಡುಗೆಯಂತೆ ಅದು ಸಪ್ಪೆಯಾಗುತ್ತದೆ. ಬದುಕಿಗೆ ಅರ್ಥ ಮತ್ತು ಉತ್ಸಾಹವನ್ನು ತುಂಬುವುದೇ ನಮ್ಮಲ್ಲಿರುವ ಸಣ್ಣ ಸಣ್ಣ ಅಭಿರುಚಿಗಳು.

**ಅಭಿರುಚಿ ಎಂದರೆ ಏನು?**

ಅಭಿರುಚಿ ಎಂದರೆ ಕೇವಲ ದೊಡ್ಡ ಮಟ್ಟದ ಸಾಧನೆ ಅಥವಾ ಕಲೆಯಲ್ಲ. ಅದು ನಮ್ಮ ಮನಸ್ಸಿಗೆ ಮುದ ನೀಡುವ, ದೈನಂದಿನ ಬೇಸರದಿಂದ ನಮ್ಮನ್ನು ಹೊರತರುವ ಯಾವುದೇ ಒಂದು ಸೃಜನಶೀಲ ಹವ್ಯಾಸವಾಗಿರಬಹುದು.

**ಕೆಲವರಿಗೆ ಪುಸ್ತಕ ಓದುವುದು ಅಭಿರುಚಿ.**

ಇನ್ನು ಕೆಲವರಿಗೆ ಗಿಡಗಳನ್ನು ಬೆಳೆಸುವುದು, ಕೈದೋಟ ಮಾಡುವುದು ಇಷ್ಟ. ಹಳೆಯ ನಾಣ್ಯಗಳನ್ನು ಸಂಗ್ರಹಿಸುವುದು,

ಚಿತ್ರ ಬಿಡಿಸುವುದು, ಹಾಡು ಕೇಳುವುದು,

ಅಡುಗೆ ಮಾಡುವುದು ಅಥವಾ ಪ್ರಕೃತಿಯ ಮಡಲಿನಲ್ಲಿ ಅಲೆಯುವುದು?ಹೀಗೆ ಇವೆಲ್ಲವೂ ಅಭಿರುಚಿಯ ವಿವಿಧ ರೂಪಗಳೇ.

ನಮ್ಮ ಭಾರತೀಯ ಸಂಸ್ಕೃತಿಯಲ್ಲಿ 64 ಕಲೆಗಳ ಬಗ್ಗೆ ಉಲ್ಲೇಖವಿದೆ. ಹಿಂದಿನ ಕಾಲದಲ್ಲಿ ಪ್ರತಿಯೊಬ್ಬ ವ್ಯಕ್ತಿಯೂ ಯಾವುದಾದರೊಂದು ಕಲೆಯಲ್ಲಿ ಅಥವಾ ಹವ್ಯಾಸದಲ್ಲಿ ತನ್ನನ್ನು ತೊಡಗಿಸಿಕೊಳ್ಳುತ್ತಿದ್ದ. ಅದು ಕೇವಲ ಮನರಂಜನೆಯಾಗಿರಲಿಲ್ಲ, ಬದಲಿಗೆ ಮಾನಸಿಕ ಸಮತೋಲನವನ್ನು ಕಾಯ್ದುಕೊಳ್ಳುವ ಒಂದು ಮಾರ್ಗವಾಗಿತ್ತು.

**ಯಾಂತ್ರಿಕ ಬದುಕು ಮತ್ತು ನೀರಸತೆ:** ಇಂದಿನ ಆಧುನಿಕ ಸಮಾಜದಲ್ಲಿ ನಮಗೆಲ್ಲರಿಗೂ ಸೌಕರ್ಯಗಳು ಹೆಚ್ಚಾಗಿವೆ. ಕೈತುಂಬಾ ಸಂಬಳ ತರುವ ಕೆಲಸಗಳಿವೆ, ಐಷಾರಾಮಿ ಮನೆಗಳಿವೆ, ಆಧುನಿಕ ತಂತ್ರಜ್ಞಾನವಿದೆ. ಆದರೆ ನೆಮ್ಮದಿ ಎಲ್ಲಿದೆ? ಎಂಬ ಪ್ರಶ್ನೆಗೆ ಮಾತ್ರ ಉತ್ತರವಿಲ್ಲ. ಇಡೀ ದಿನ ಕಂಪ್ಯೂಟರ್ ಪರದೆಯ ಮುಂದೆ ಕುಳಿತು, ಸಂಜೆ ಮನೆಗೆ ಬಂದು ಮೊಬೈಲ್ ಪರದೆಯನ್ನು ನೋಡುತ್ತಾ ಕಳೆಯುವ ಬದುಕು ನಮ್ಮದಾಗಿದೆ. ಈ ಡಿಜಿಟಲ್ ಜಗತ್ತು ನಮ್ಮನ್ನು ಆವರಿಸಿಕೊಂಡಷ್ಟೂ ನಮ್ಮೊಳಗಿನ ಸೃಜನಶೀಲತೆ ಸತ್ತುಹೋಗುತ್ತಿದೆ.

ಅಭಿರುಚಿ ಇಲ್ಲದ ವ್ಯಕ್ತಿ ಕೇವಲ ಕರಾರುಗಳ ಮೇಲೆ ಬದುಕುತ್ತಾನೆ. ಆತನಿಗೆ ದಿನದ ಕೆಲಸ ಮುಗಿಸುವುದಷ್ಟೇ ಗುರಿಯಾಗಿರುತ್ತದೆ. ಇದರಿಂದಾಗಿ ಬದುಕಿನಲ್ಲಿ ಒಂದು ರೀತಿಯ ಜಡತ್ವ ಆವರಿಸುತ್ತದೆ. ಯಾರು ಹೊಸದನ್ನು ಕಲಿಯಲು ಇಷ್ಟಪಡುವುದಿಲ್ಲವೋ, ಯಾರಿಗೆ ಪ್ರಕೃತಿಯನ್ನು ನೋಡಿ ಆನಂದಿಸಲು ಬರುವುದಿಲ್ಲವೋ, ಅವರ ಮನಸ್ಸು ಬೇಗನೆ ಮುಪ್ಪಾಗುತ್ತದೆ. ಬದುಕಿನ ನೀರಸತೆಗೆ ಮೂಲ ಕಾರಣ ನಮ್ಮಲ್ಲಿ ಹವ್ಯಾಸಗಳ ಕೊರತೆ ಎಂದರೆ ತಪ್ಪಾಗಲಾರದು.

ಬದುಕಿಗೆ ಬಣ್ಣ ತುಂಬುವ ಹವ್ಯಾಸಗಳು

ಒಂದು ಸಣ್ಣ ಅಭಿರುಚಿ ನಮ್ಮ ಬದುಕನ್ನು ಹೇಗೆ ಬದಲಾಯಿಸಬಲ್ಲದು ಎಂಬುದನ್ನು ಗಮನಿಸಬೇಕು. ಉದಾಹರಣೆಗೆ, ಇಡೀ ದಿನ ಕಚೇರಿಯ ಒತ್ತಡದಲ್ಲಿದ್ದ ವ್ಯಕ್ತಿಯೊಬ್ಬ ಸಂಜೆ ಮನೆಗೆ ಬಂದು ತಾನು ಸಾಕಿದ ಗಿಡಗಳಿಗೆ ನೀರುಣಿಸುವಾಗ ಸಿಗುವ ಆನಂದ ಅಪಾರ. ಆ ಹಸಿರು, ಆ ಮೊಗ್ಗುಗಳು ಆತನ ಇಡೀ ದಿನದ ಆಯಾಸವನ್ನು ಕ್ಷಣಾರ್ಧದಲ್ಲಿ ಮರೆಸುತ್ತವೆ.

ಅದೇ ರೀತಿ, ಪುಸ್ತಕ ಓದುವ ಹವ್ಯಾಸವಿರುವ ವ್ಯಕ್ತಿ ಎಂದಿಗೂ ಒಂಟಿಯಾಗಲಾರ. ಪುಸ್ತಕಗಳು ಆತನಿಗೆ ಜಗತ್ತಿನ ವಿಭಿನ್ನ ಆಯಾಮಗಳನ್ನು ಪರಿಚಯಿಸುತ್ತವೆ. ಕಷ್ಟದ ಸಮಯದಲ್ಲಿ ಧೈರ್ಯ ತುಂಬುತ್ತವೆ. ಸಂಗೀತ ಕೇಳುವುದು ಅಥವಾ ಹಾಡುವುದು ಮನಸ್ಸಿನ ಆತಂಕವನ್ನು ದೂರ ಮಾಡಿ ಶಾಂತಿಯನ್ನು ನೀಡುತ್ತದೆ. ಇವೆಲ್ಲವೂ ಕೇವಲ ಕಾಲಹರಣದ ಮಾರ್ಗಗಳಲ್ಲ, ಇವು ನಮ್ಮ ಆತ್ಮವನ್ನು ಪೋಷಿಸುವ ಆಹಾರಗಳು.

ಸಾಮಾಜಿಕ ಮತ್ತು ಸಾಂಸ್ಕೃತಿಕ ಮಹತ್ವ

ನಮ್ಮ ಭಾರತೀಯ ಸಾಮಾಜಿಕ ವ್ಯವಸ್ಥೆಯಲ್ಲಿ ಹಬ್ಬಗಳು, ಸಂತೆಗಳು, ಭಜನೆಗಳು ಮತ್ತು ಜಾನಪದ ಕಲೆಗಳು ಬದುಕಿನ ನೀರಸತೆಯನ್ನು ಹೋಗಲಾಡಿಸಲು ಸೃಷ್ಟಿಯಾದವುಗಳೇ ಆಗಿವೆ. ಗ್ರಾಮೀಣ ಭಾಗದಲ್ಲಿ ಹಗಲಿಡೀ ಗದ್ದೆಗಳಲ್ಲಿ ದುಡಿಯುವ ರೈತರು, ರಾತ್ರಿ ಹೊತ್ತು ಯಕ್ಷಗಾನ ಅಥವಾ ನಾಟಕಗಳಲ್ಲಿ ಪಾತ್ರಧಾರಿಗಳಾಗಿ ಮಿಂಚುತ್ತಾರೆ. ಇದು ಅವರ ದಣಿವಿಗೆ ಮದ್ದಾಗುತ್ತದೆ.



ಆದರೆ ನಗರ ಸಂಸ್ಕೃತಿಯಲ್ಲಿ ನಾವು ಈ ರೀತಿಯ ಸಮುದಾಯ ಆಧಾರಿತ ಅಭಿರುಚಿಗಳಿಂದ ದೂರವಾಗುತ್ತಿದ್ದೇವೆ. ನಮ್ಮ ಹವ್ಯಾಸಗಳು ಕೇವಲ ವೈಯಕ್ತಿಕ ಮತ್ತು ಡಿಜಿಟಲ್ ಪರದೆಗೆ ಸೀಮಿತವಾಗುತ್ತಿವೆ. ಇದನ್ನು ಬದಲಾಯಿಸಬೇಕಾಗಿದೆ. ಮನೆಯಲ್ಲಿ ಮಕ್ಕಳಿಗೆ ಕೇವಲ ಪಠ್ಯಪುಸ್ತಕಗಳನ್ನಷ್ಟೇ ಓದಿಸದೆ, ಅವರಲ್ಲಿ ಚಿತ್ರಕಲೆ, ನೃತ್ಯ, ನಟನೆಯಂತಹ ಸೃಜನಶೀಲ ಹವ್ಯಾಸಗಳನ್ನು ಬೆಳೆಸಬೇಕಾಗಿದೆ. ಬಾಲ್ಯದಲ್ಲೇ ಮೂಡುವ ಅಭಿರುಚಿಗಳು ಅವರ ಭವಿಷ್ಯದ ವ್ಯಕ್ತಿತ್ವವನ್ನು ರೂಪಿಸುತ್ತವೆ.

ಮಾನಸಿಕ ಆರೋಗ್ಯ ಮತ್ತು ಅಭಿರುಚಿ

ಇಂದಿನ ದಿನಗಳಲ್ಲಿ ಖಿನ್ನತೆ (ಆಜಔಡಿಆಝುಔಟ) ಮತ್ತು ಮಾನಸಿಕ ಒತ್ತಡ (ಖಣಡಿಆಝ) ಸಮಾಜವನ್ನು ಕಾಡುತ್ತಿರುವ ದೊಡ್ಡ ಪಿಡುಗುಗಳು. ಇವುಗಳಿಗೆ ಮುಖ್ಯ ಕಾರಣ ಮನಸ್ಸಿಗೆ ಯಾವುದೇ ವಿರಾಮ ಸಿಗದಿರುವುದು. ನಾವು ಯಾವಾಗಲೂ ಏನನ್ನಾದರೂ ಯೋಚಿಸುತ್ತಾ, ಯಾವುದೋ ಆತಂಕದಲ್ಲಿ ಇರುತ್ತೇವೆ. ಈ ಸಮಯದಲ್ಲಿ ನಮಗಿರುವ ಒಂದು ಸಣ್ಣ ಅಭಿರುಚಿ ಮದ್ದಿನಂತೆ ಕೆಲಸ ಮಾಡುತ್ತದೆ.

ನಾವು ನಮಗೆ ಇಷ್ಟವಾದ ಕೆಲಸದಲ್ಲಿ ತೊಡಗಿಸಿಕೊಂಡಾಗ ನಮ್ಮ ಮೆದುಳು ಪ್ರಸ್ತುತ ಕ್ಷಣದಲ್ಲಿ ಬದುಕಲು ಕಲಿಯುತ್ತದೆ. ಆಗ ಭೂತಕಾಲದ ಪಶ್ಚಾತ್ತಾಪವಾಗಲಿ, ಭವಿಷ್ಯದ ಆತಂಕವಾಗಲಿ ನಮ್ಮನ್ನು ಕಾಡುವುದಿಲ್ಲ. ಸೃಜನಶೀಲ ಕೆಲಸಗಳು ನಮ್ಮಲ್ಲಿ ಸಕಾರಾತ್ಮಕ ಶಕ್ತಿಯನ್ನು ತುಂಬುತ್ತವೆ. ವೈದ್ಯರು ಕೂಡ ಮಾನಸಿಕ ಒತ್ತಡದಲ್ಲಿರುವವರಿಗೆ ಯಾವುದಾದರೂ ಹವ್ಯಾಸವನ್ನು ರೂಢಿಸಿಕೊಳ್ಳಲು ಸಲಹೆ ನೀಡುತ್ತಾರೆ.

ಬದುಕನ್ನು ಆಸ್ವಾದಿಸೋಣ :

"ಬದುಕು ಅನ್ನ ಉಂಡಷ್ಟೇ ಸಹಜವಾಗಿರಬೇಕು, ಆದರೆ ಅದು ಕೇವಲ ಹೊಟ್ಟೆ ತುಂಬಿಸಿಕೊಳ್ಳುವುದಕ್ಕೆ ಸೀಮಿತವಾಗಬಾರದು."

ಕೊನೆಯದಾಗಿ ಹೇಳುವುದಾದರೆ, ಅಭಿರುಚಿ ಎನ್ನುವುದು ಶ್ರೀಮಂತರ ವಿಲಾಸಿ ಹವ್ಯಾಸವಲ್ಲ. ಅದಕ್ಕೆ ಕೋಟಿಗಟ್ಟಲೆ ಹಣದ ಅಗತ್ಯವಿಲ್ಲ. ಕೇವಲ ಒಂದು ಸಣ್ಣ ಹಕ್ಕಿಯ ಕಲರವವನ್ನು ಆಲಿಸುವ ಕಿವಿ, ಮುಸ್ಸಂಜೆಯ ಸೂರ್ಯಾಸ್ತವನ್ನು ಸವಿಯುವ ಕಣ್ಣು, ಒಳ್ಳೆಯ ಸಾಹಿತ್ಯವನ್ನು ಆಸ್ವಾದಿಸುವ ಮನಸ್ಸಿದ್ದರೆ ಸಾಕು.

ಬದುಕು ನಮಗೆ ಸಿಕ್ಕಿರುವ ಒಂದು ಸುಂದರ ಕೊಡುಗೆ. ಅದನ್ನು ಕೇವಲ ದಿನಗಳನ್ನು ದೂಡುವ ಮೂಲಕ ನೀರಸವಾಗಿಸಿಕೊಳ್ಳಬಾರದು. ಇಂದಿನಿಂದಲೇ ನಮ್ಮ ದಿನಚರಿಯಲ್ಲಿ ಕನಿಷ್ಠ ಅರ್ಧ ಗಂಟೆಯನ್ನಾದರೂ ನಮ್ಮ ನೆಚ್ಚಿನ ಅಭಿರುಚಿಗಾಗಿ ಮೀಸಲಿಡೋಣ. ಆಗ ಬದುಕು ನೀರಸವಾಗದೆ, ಪ್ರತಿ ದಿನವೂ ಹೊಸ ಉತ್ಸಾಹದಿಂದ ಕಂಗೊಳಿಸುತ್ತದೆ.



| ರಚನೆ : ಸ್ವಾಮಿನಾಥನ್
ಮೊಬೈಲ್ : 9880041516
Email:Swamynathann@gmail.com

# ಗುಂಡ್ಲುಪೇಟೆಯಲ್ಲಿ 25 ಸಾವಿರ ಟನ್ ಹಳೆಯ ಕಸದ ವೈಜ್ಞಾನಿಕ ವಿಲೇವಾರಿ

**ಗುಂಡ್ಲುಪೇಟೆ:** ಪುರಸಭೆ ವ್ಯಾಪ್ತಿಯ ಶ್ರೀರಾಮ್ ದೇವರು ಗುಡ್ಡದ ಪಕ್ಕ ಇರುವ ಹಳೆ ಕಸದ ವಿಲೇವಾರಿ ಘಟಕದಲ್ಲಿ ದಶಕಗಳಿಂದ ಶೇಖರಣೆಯಾಗಿದ್ದ ಪರಂಪರೆ ಕಸವನ್ನು ಸಂಪೂರ್ಣವಾಗಿ ತೆರವುಗೊಳಿಸುವ ಕಾರ್ಯವನ್ನು ಪುರಸಭೆಯ ಮುಖ್ಯ ಅಧಿಕಾರಿ ಶರವಣ ಎಸ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಪುರಸಭೆಯ ಮುಖ್ಯ ಅಧಿಕಾರಿ ಶರವಣ ಎಸ್ ಮಾತನಾಡಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ವತಿಯಿಂದ ಟೆಂಡರ್ ಕರೆಯಲಾಗಿದ್ದು, ಈ ಘಟಕದಲ್ಲಿ ಸಂಗ್ರಹವಾಗಿರುವ ಸುಮಾರು 25000 ಟನ್ ಹಳೆಯ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ, ಮರುಬಳಕೆ ಮಾಡುವ ಪ್ರಕ್ರಿಯೆ ಪ್ರಸ್ತುತ ಭರದಿಂದ ಸಾಗುತ್ತಿದೆ ಎಂದು ತಿಳಿಸಿದರು.



**ತ್ಯಾಜ್ಯ ವಿಂಗಡಣೆ ಮತ್ತು ಮರುಬಳಕೆಯ ವಿಧಾನ:** ಪರಿಸರಕ್ಕೆ ಹಾನಿಯಾಗದಂತೆ ಈ ಕೆಳಗಿನಂತೆ ಕಸವನ್ನು ವೈಜ್ಞಾನಿಕವಾಗಿ ವರ್ಗೀಕರಿಸಲಾಗುತ್ತಿದೆ:

**ಸಾವಯವ ಗೊಬ್ಬರ:** ಕಸದಿಂದ ಬೇರ್ಪಡಿಸಲಾದ ಗುಣಮಟ್ಟದ ಗೊಬ್ಬರವನ್ನು ಪಟ್ಟಣದ ಸಾರ್ವಜನಿಕ ಉದ್ಯಾನವನಗಳ ನಿರ್ವಹಣೆಗೆ ಬಳಸಲಾಗುತ್ತಿದೆ.

ಬಯೋ-ಅರ್ಥ್ (ಫಲವತ್ತಾದ ಮಣ್ಣು): ಕಸದಿಂದ ಸಂಸ್ಕರಿಸಿದ ಮಣ್ಣನ್ನು ಅದೇ ಜಾಗದ ಫಲವತ್ತತೆ ಮತ್ತು ಮಣ್ಣಿನ ಪೋಷಕಾಂಶಗಳನ್ನು ವೃದ್ಧಿಸಲು ಮರುಬಳಕೆ ಮಾಡಲಾಗುತ್ತಿದೆ.

**ಪ್ಲಾಸ್ಟಿಕ್ ಹಾಗೂ ಇತರ ತ್ಯಾಜ್ಯ:** ದಹನ ಮಾಡಬಹುದಾದ ಮರುಬಳಕೆಗೆ ಬಾರದ ಒಣ ತ್ಯಾಜ್ಯವನ್ನು ಸಿಮೆಂಟ್ ಕಾರ್ಖಾನೆಗಳಿಗೆ ಇಂಧನವಾಗಿ (RDF) ಬಳಸಲು ಸುರಕ್ಷಿತವಾಗಿ ರವಾನಿಸಲಾಗುತ್ತಿದೆ.

ಈ ಹಳೆಯ ಕಸದ ರಾಶಿಯನ್ನು ತೆರವುಗೊಳಿಸುವುದರಿಂದ ಸ್ಥಳೀಯ ಪರಿಸರಕ್ಕೆ ದೊಡ್ಡ ಮಟ್ಟದ ಕೊಡುಗೆ ಸಿಗಲಿದೆ. ಇದರಿಂದ ಮುಖ್ಯವಾಗಿ ಅಂತರ್ಜಲ ಹಾಗೂ ಮಣ್ಣಿನ ಮಾಲಿನ್ಯ ತಡೆಗಟ್ಟಬಹುದು. ಗಾಳಿಯ ಗುಣಮಟ್ಟ ಸುಧಾರಿಸಿ, ದುರ್ವಾಸನೆ ಮತ್ತು ನೊಣಗಳ ಕಾಟದಿಂದ ಸ್ಥಳೀಯ ಸಾರ್ವಜನಿಕರಿಗೆ ಮುಕ್ತಿ ಸಿಗಲಿದೆ," ಎಂದರು.

ಶಾಸಕರು ಕಸ ವಿಲೇವಾರಿ ಕಾಮಗಾರಿಯನ್ನು ಅತ್ಯಂತ ಸ್ವಚ್ಛವಾಗಿ ಮತ್ತು ವ್ಯವಸ್ಥಿತವಾಗಿ ನಿರ್ವಹಿಸಬೇಕು, ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗಬಾರದು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ. ಅದರಂತೆ ಗುಣಮಟ್ಟದ ಕೆಲಸಕ್ಕೆ ಆದ್ಯತೆ ನೀಡಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಶರವಣ ಎಸ್ ತಿಳಿಸಿದರು.

ಕಾಮಗಾರಿ ನಿರ್ವಹಿಸುತ್ತಿರುವ ಟೆಂಡರ್‌ದಾರರಿಗೆ ನಿರ್ದಿಷ್ಟ ಅವಧಿಯೊಳಗೆ ಕೆಲಸ ಮುಗಿಸುವಂತೆ ಮುಖ್ಯ ಅಧಿಕಾರಿಗಳು ಸೂಚಿಸಿದರು. ಅಲ್ಲದೆ, ಸದರಿ ಪ್ರದೇಶವು ಅರಣ್ಯ ವಲಯಕ್ಕೆ ಹತ್ತಿರವಿರುವುದರಿಂದ, ಕೆಲಸ ಮಾಡುವ ಕಾರ್ಮಿಕರು ವನ್ಯಜೀವಿಗಳಿಂದ ಸುರಕ್ಷಿತವಾಗಿರಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳು ಮತ್ತು ವೈಯಕ್ತಿಕ ಸುರಕ್ಷತಾ ಸಾಧನಗಳನ್ನು ಬಳಸಬೇಕೆಂದು ಕಟ್ಟುನಿಟ್ಟಾಗಿ ಆದೇಶಿಸಿದರು.

ಈ ಸಂದರ್ಭದಲ್ಲಿ ಪುರಸಭೆಯ ಕಿರಿಯ ಎಂಜಿನಿಯರ್ (ಎಇ) ಆದ ಮಂಜುನಾಥ್, ಪರಿಸರ ಎಂಜಿನಿಯರ್ ಮಹೇಶ್, ಹಿರಿಯ ಆರೋಗ್ಯ ನಿರೀಕ್ಷಕರಾದ ಸುಷ್ಮಾ, ದಫೇದಾರ್ ಸಿದ್ದರಾಜು ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕೋಡಿಂಗ್ನ ಕರ್ಮಯೋಗಿ,ಹಳ್ಳಿಯ ಹಣತೆ



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 31

ವಿಶ್ವದ ತಂತ್ರಜ್ಞಾನ ರಂಗದಲ್ಲಿ ಭಾರತೀಯ ಮೇಧೆಯ ಮಿಂಚು ಜಗವನ್ನೇ ಬೆಳಗುತ್ತಿದೆ. ಆದರೆ ಆ ಮಿಂಚು ಪರಕೀಯರ ಆಗಸದಲ್ಲಿ ಮಾಸಿಹೋಗದಿರಲಿ ಎಂದು ಕ್ಯಾಲಿಫೋರ್ನಿಯಾದ ಸಿರಿತನವನ್ನು ಕಿತ್ತೆಸೆದು, ತೆಂಕಶಿಯ ಕೆಂಪುಮಣ್ಣಿಗೆ ಮರಳಿದ ತಪಸ್ವಿ ಶ್ರೀಧರ್ ವೆಂಬು. ಜೋಹೋ ಎಂಬ ಜಾಗತಿಕ ಸೌಧದ ರೂವಾರಿಯಾದರೂ, ಗದ್ದೆ ಬದುಗಳ ಗಾಳಿಯನ್ನೇ ಪ್ರಾಣವಾಯುವಾಗಿಸಿಕೊಂಡ ಇವರ ಜೀವನ ತತ್ವ ಯುವಪೀಳಿಗೆಗೆ ಉಜ್ವಲ ಮಾದರಿ.

ಸಿಲಿಕಾನ್ ಕನಸುಗಳಿಗಿಂತ ತಾಳೆತೋಪಿನ ತಂಪು ಇವರಿಗೆ ನಿಜದ ನೆಮ್ಮದಿ ತೋರಿತು. ಹಳ್ಳಿಯ ಹುಲ್ಲುಹೊದ್ದ ಗುಡಿಸಲೂ ಜಾಗತಿಕ ಸಂಕೇತಗಳ ಕಾರ್ಖಾನೆಯಾಗಬಲ್ಲದು ಎಂಬ ಇವರ ದೂರದೃಷ್ಟಿ ಇಂದು ಸಾಕ್ಷಾತ್ಕಾರಗೊಂಡಿದೆ. ನಗರದ ಕಾಂಕ್ರೀಟ್ ಕಾಡಿನಿಂದ ಉದ್ಯೋಗದ ಜೀವಜಲವನ್ನು ಗ್ರಾಮದ ಒಡಲಿಗೆ ಹರಿಸಿ, ಸಾವಿರಾರು ಕುಟುಂಬಗಳಿಗೆ ಅನ್ನದ ದಾರಿ ತೋರಿದ ಹರಿಕಾರ ಇವರು.

ಅಂಕಪಟ್ಟಿಯ ತೋರಿಕೆಗಿಂತ ಕೈಕಸುಬಿನ ಕೌಶಲವೇ ಶ್ರೇಷ್ಠ ಎಂಬುದು ಇವರ ಜೀವಮಂತ್ರ. ಜೋಹೋ ಸ್ಕೂಲ್ಸ್ ಮೂಲಕ ಹಳ್ಳಿಯ ಮಣ್ಣಿನ ಮಕ್ಕಳನ್ನು ವಿಶ್ವದರ್ಜೆಯ ಕೋಡರ್ಗಳನ್ನಾಗಿ ರೂಪಿಸಿ, ಪದವಿಯೇ ಇಲ್ಲದೇ ಪ್ರತಿಭೆಗೆ ಪಟ್ಟಾಭಿಷೇಕ ಮಾಡಿದ್ದಾರೆ. ಪ್ರತಿಭೆಯ ತೊಟ್ಟಿಲು ಐಐಟಿ, ಐಐಎಂ ಮಾತ್ರವಲ್ಲ, ಅದು ಬಯಲುಸೀಮೆಯ ಬಡಗುಡಿಸಲೂ ಹೌದು ಎಂದು ಜಗಕ್ಕೆ ಸಾರಿದ್ದಾರೆ.

ಪದ್ಮಶ್ರೀ ಕಿರೀಟವಿದ್ದರೂ ಕಚ್ಚೆಪಂಚೆ, ತುಳಿಯುವ ಸೈಕಲ್, ಸರಳ ಊಟ. ಸಂಪತ್ತಿನ ತುತ್ತತುದಿಯಲ್ಲಿದ್ದೂ ಅಹಂಕಾರದ ಸುಳಿವೇ ಇಲ್ಲ. ಇವರ ಪ್ರತಿ ಹೆಜ್ಜೆಯೂ ಕರ್ಮಯೋಗದ ಪಾಠ. ಯುವಕನೇ, ನಿನ್ನ ಬುದ್ಧಿಶಕ್ತಿಯ ಹಣತೆಯನ್ನು ಸ್ವದೇಶದ ಕತ್ತಲೆಗೆ ಹಚ್ಚು. ನಿನ್ನ ಕನಸುಗಳಿಗೆ ಹಳ್ಳಿಯ ನೆಲದ ಸ್ಪರ್ಶವಿರಲಿ. ಆಗ ಭಾರತ ಮತ್ತೆ ವಿಶ್ವಗುರುವಾಗುವುದು. ಆ ದಾರಿಗೆ ವೆಂಬು ದಿವ್ಯಜ್ಯೋತಿ.



# ಸಂಗೀತ ಶಿಕ್ಷಣ ಮತ್ತು ಮಕ್ಕಳ ಕಲಿಕೆ



| ವೀಣಾ ಹೇಮಂತ್‌ಗೌಡ ಪಾಟೀಲ್

ಅದೆಷ್ಟೇ ಮನಸ್ಸು ಶೋಭೆಗಳಾಗಿರಲಿ ಆತಂಕಿತ ವಾಗಿರಲಿ ಸಂಗೀತದ ನಾದ ತರಂಗಕ್ಕೆ ಮನದ ನೋವು ನಿವಾರಿಸುವ ಶಕ್ತಿ ಇದೆ. ಮನಸ್ಸನ್ನು ಸಮಾಧಾನಗೊಳಿಸುವ, ಆಳವಾದ ನೆಮ್ಮದಿಯನ್ನು ನೀಡುವ ಮನಸ್ಸನ್ನು ಅದ್ವಿತೀಯ ವಿಶ್ರಾಂತ ಸ್ಥಿತಿಗೆ ಕರೆದೊಯ್ಯುವ ಶಕ್ತಿ ಇದೆ.... ಸಂಗೀತ ನಮ್ಮನ್ನು ನಾವಿರುವ ಭಾವದಿಂದ ತನ್ನದೇ ಆದ ಲೋಕಕ್ಕೆ ಕರೆದೊಯ್ಯುತ್ತದೆ.

ಲಲಿತ ಕಲೆಗಳಲ್ಲಿ ಒಂದಾದ ಸಂಗೀತವು ಮಕ್ಕಳಲ್ಲಿ ರಾಗ, ತಾಳ, ಲಯಗಳ ಜ್ಞಾನದ ಜೊತೆಗೆ ಹತ್ತು ಹಲವು ವಿಭಿನ್ನ ಸಂಗತಿಗಳಲ್ಲಿ ಹೆಚ್ಚಿನ ಕಲಿಕೆಯನ್ನು ನೀಡುತ್ತದೆ.

ವ್ಯಕ್ತಿಯ ಬೌದ್ಧಿಕ ಭಾವನಾತ್ಮಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಬದುಕಿಗೆ ಒಳ್ಳೆಯ ಬುನಾದಿಯನ್ನು ಹಾಕುತ್ತದೆ. ಆದ್ದರಿಂದಲೇ ಮಕ್ಕಳನ್ನು ಚಿಕ್ಕಂದಿನಲ್ಲಿಯೇ ಸಂಗೀತ ಕಲಿಯಲು ಪ್ರೋತ್ಸಾಹಿಸಲಾಗುತ್ತದೆ. ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಆಟ ಪಾಠಗಳಂತೆ ಲಲಿತ ಕಲೆಗಳಲ್ಲಿ ಒಂದಾದ ಸಂಗೀತವೂ ಕೂಡ ಅತ್ಯವಶ್ಯಕ ಎಂಬುದನ್ನು ಮನಗಂಡಿರುವ ಶಿಕ್ಷಣ ಇಲಾಖೆಯು ಶಾಲೆಗಳಲ್ಲಿ ಪ್ರತಿ ವಾರಕ್ಕೆ ಎರಡರಿಂದ ಮೂರು ಅವಧಿಯಲ್ಲಿ ಸಂಗೀತ ಶಿಕ್ಷಣವನ್ನು ಕಡ್ಡಾಯವಾಗಿ ಕಲಿಸುವ ವ್ಯವಸ್ಥೆ ಮಾಡಿದೆ. ಪರಿಣಾಮವಾಗಿ ಶಾಸ್ತ್ರೀಯವಾಗಿ ಸಂಗೀತವನ್ನು ಕಲಿಯದೆ ಹೋದರೂ ಕೂಡ ತಕ್ಕಮಟ್ಟಿಗೆ ಸಂಗೀತದ ಜ್ಞಾನ ಮಕ್ಕಳಿಗೆ ದೊರೆಯುತ್ತದೆ.

ಸಂಗೀತ ಕಲೆ.... ಕೇವಲ ಕಲೆಯಲ್ಲ..ಅದು ಜೀವನವನ್ನು ಅರಿಯುವ ಮಾರ್ಗ. ಸಂಗೀತವನ್ನು ಕಲಿಯುವ ಮಕ್ಕಳಲ್ಲಿ ಗಮನಾರ್ಹ ಬದಲಾವಣೆಯನ್ನು ನಾವು ಕಾಣಬಹುದು. ಸೂಕ್ಷ್ಮವಾದ ಹಾಗೂ ಅತ್ಯುತ್ತಮವಾದ ಗ್ರಹಿಕೆಯ ಶಕ್ತಿ ಮಕ್ಕಳದಾಗುತ್ತದೆ. ಸ್ಮರಣಶಕ್ತಿ ಕೂಡ ಹೆಚ್ಚುತ್ತದೆ. ಚಿಕ್ಕ ಪುಟ್ಟ ಬದಲಾವಣೆಗಳಿಂದ ಉಂಟಾಗುವ ವ್ಯತ್ಯಾಸಗಳ ಅರಿವು ಮೂಡುತ್ತದೆ.... ಇದರ ಪರಿಣಾಮವಾಗಿ ಮಕ್ಕಳು ಶಾಲೆಯ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಹಾಗೂ ಬದುಕಿನ ಎಲ್ಲಾ ಹಂತಗಳಲ್ಲಿ ತಮ್ಮ ಗ್ರಹಣ ಶಕ್ತಿಯ ಸೂಕ್ಷ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳುತ್ತಾರೆ.

ಸಂಗೀತ ಶಿಕ್ಷಣವು ಮಕ್ಕಳಲ್ಲಿ ಸೃಜನಶೀಲತೆಯನ್ನು ಬೆಳೆಸುತ್ತದೆ. ಸಂಗೀತದ ಮೂಲಕ ಮಕ್ಕಳು ತಮ್ಮ ಭಾವನೆಗಳನ್ನು ವ್ಯಕ್ತಪಡಿಸಲು ಸಾಧ್ಯವಾಗುವಂತೆ ಮಕ್ಕಳನ್ನು ಕ್ರಿಯಾಶೀಲಗೊಳಿಸುತ್ತದೆ. ಮಕ್ಕಳ ಸೃಜನಶೀಲತೆ ಅರಳುವುದು ಇಂತಹ ಕ್ರಿಯಾಶೀಲ ಅಭಿವ್ಯಕ್ತಿಗಳಿಂದ ಮಾತ್ರ. ಹೊಸ ವಿಚಾರಗಳನ್ನು ಅರಿಯಲು, ಹೊಸ ವಿಷಯಗಳನ್ನು ಪ್ರಸ್ತುತಪಡಿಸಲು ಸಂಗೀತವು ಅವರಿಗೆ ಸೂಕ್ಷ್ಮವಾದ ಕಲಿಕಾ ಕೌಶಲ್ಯವನ್ನು ನೀಡುತ್ತದೆ.




ಸಂಗೀತದಿಂದ ಮಾನಸಿಕ ಶಾಂತಿ, ನೆಮ್ಮದಿ ದೊರೆಯುತ್ತದೆ ಎಂದರೆ ಅಚ್ಚರಿ ಪಡದಿರಿ. ನಿರಂತರವಾಗಿ ಸಂಗೀತದ ಅಭ್ಯಾಸವನ್ನು ಮಾಡುವುದರಿಂದ ಹಾಗೂ ಒಳ್ಳೆಯ ಸುಮಧುರವಾದ ಸಂಗೀತವನ್ನು ಕೇಳುವ ಮೂಲಕ ಉದ್ರಿಕ ನರಗಳನ್ನು ಶಾಂತಗೊಳಿಸಬಹುದು. ಮೈ-ಮನಗಳಲ್ಲಿ ನೆಮ್ಮದಿ ಹಾಗೂ ಶಾಂತಿಯನ್ನು ತರುವ ಸಂಗೀತದ ನಾದ ತರಂಗಗಳು ಮನಸ್ಸಿನ ಬೇಗುದಿಯನ್ನು ತೊಡೆದು ಹಾಕುವ ಮೂಲಕ ಶಾಂತ ಮನಸ್ಥಿತಿಗೆ ಕಾರಣವಾಗುತ್ತದೆ.

ಸಂಗೀತವು ವ್ಯಕ್ತಿಯ ಆತ್ಮವಿಶ್ವಾಸ ವೃದ್ಧಿಗೆ ಸಾಧನ.... ನಿರಂತರವಾದ ತರಬೇತಿಯ ಮೂಲಕ ಕಲಿಕೆಯಲ್ಲಿ ಆತ್ಮವಿಶ್ವಾಸ ಹೆಚ್ಚಿದರೆ, ವೇದಿಕೆಯನ್ನು ಏರಿ ಕಲಿತ ವಿದ್ಯೆಯನ್ನು ಪ್ರಸ್ತುತಪಡಿಸಲು ಅತ್ಯವಶ್ಯಕವಾದ ಧೈರ್ಯವನ್ನು ಸಂಗೀತವು ನೀಡುತ್ತದೆ. ಆತ್ಮವಿಶ್ವಾಸ ವೃದ್ಧಿಗೆ ಇದಕ್ಕಿಂತ ಇನ್ನೇನು ಬೇಕು ? ಸಾರ್ವಜನಿಕರೊಂದಿಗೆ ಸಂವಹನ ಸಾಧ್ಯವಾಗುತ್ತದೆ. ಮತ್ತಷ್ಟು ಮಗದಷ್ಟು ಕಲಿಕಾ ಆಸಕ್ತಿ ಹೆಚ್ಚುತ್ತದೆ.

ಸಾಂಸ್ಕೃತಿಕ ಮೌಲ್ಯಗಳ ಪರಿಚಯ ಮಾಡಿಕೊಡುವ ಸಂಗೀತವು ನಮ್ಮ ದೇಶದ ಮಹೋನ್ನತ ಸಂಗೀತ ಪರಂಪರೆಯ ಅರಿವನ್ನು ಮೂಡಿಸುತ್ತದೆ. ವಿವಿಧ ರಾಗ ತಾಳ ಲಯಗಳ ಜ್ಞಾನವನ್ನು ನಮಗೆ ಪ್ರಚುರಪಡಿಸುತ್ತದೆ. ಸಂಗೀತದ ವೈವಿಧ್ಯಗಳ ಕುರಿತು ಹೊಸ ಕುತೂಹಲವನ್ನು ಮೂಡಿಸುತ್ತದೆ. ವಿವಿಧ ಶೈಲಿಗಳ, ತಾಳ ವಾದ್ಯಗಳ ಅರಿವನ್ನು ಮೂಡಿಸಿ ನಮ್ಮ ಮಹೋನ್ನತ ಗುರು ಪರಂಪರೆಯ ಕುರಿತು ಕೃತಜ್ಞತಾ ಭಾವವನ್ನು ಮೂಡಿಸುತ್ತದೆ.

ಸಂಗೀತ ಕಲಿಕೆಯು ನಮ್ಮ ಬದುಕಿನಲ್ಲಿ ಶಿಸ್ತಿನ ಪಾಲನೆಗೆ ಕಾರಣವಾಗುತ್ತದೆ... ಪ್ರತಿದಿನವೂ ಸಂಗೀತವನ್ನು ಕಲಿಯುವ ನಿಟ್ಟಿನಲ್ಲಿ ತರಬೇತಿ ಹೊಂದುವ ಪ್ರತಿ ಮಗುವು ಕೂಡ ತಮ್ಮದೇ ಆದ ಕೆಲ ಪದ್ಧತಿಗಳನ್ನು ರೂಡಿಸಿಕೊಳ್ಳುತ್ತಾರೆ. ತಮಗೆ ಒಗ್ಗುವ ಊಟೋಪಚಾರ, ಆಹಾರ ವಿಹಾರಗಳನ್ನು ಪಾಲಿಸುತ್ತಾರೆ ಇದು ಅವರಲ್ಲಿ ಮಾನಸಿಕವಾಗಿ ಹಾಗೂ ದೈಹಿಕವಾಗಿ ಶಿಸ್ತಿನ ಪರಿಪಾಲನೆಗೆ ಸಹಕಾರಿಯಾಗುತ್ತದೆ. ನಿಯಮ ಹಾಗೂ ಸಮಯ ಪಾಲನೆಯ ಕಾರಣದಿಂದಾಗಿ ಒಂದು ಬಗೆಯ ಶಿಸ್ತು ಅವರಲ್ಲಿ ಉಂಟಾಗುತ್ತದೆ.

ಗುಂಪಿನಲ್ಲಿ ಹಾಡುವ ಮೂಲಕ ಸಾಮಾಜಿಕ ಸಾಂಗತ್ಯದ ಸಾಮರ್ಥ್ಯ ಬೆಳೆಯುತ್ತದೆ ವಿಭಿನ್ನತೆಯಲ್ಲಿಯೂ ಏಕತೆಯನ್ನು ಕಾಣುವ ಶಕ್ತಿ ಸಂಗೀತಕ್ಕಿದೆ. ಇತರರಲ್ಲಿರುವ ವಿಭಿನ್ನ ಗ್ರಹಿಕೆಯ ಶಕ್ತಿ,, ಕಲಿಕಾ ಸಾಮರ್ಥ್ಯ, ಸಮಯ ಪಾಲನೆ, ಶ್ರದ್ಧೆ,ಕಾರ್ಯ ತತ್ವರತೆಗಳು ನಮ್ಮನ್ನು ಪ್ರೇರೇಪಿಸುತ್ತವೆ. ಸಂಗೀತವು ಸ್ನೇಹ ಭಾವವನ್ನು ಹಾಗೂ ಗೌರವವನ್ನು ವೃದ್ಧಿಸುತ್ತದೆ.

ನಮ್ಮ ಮನದಾಳದ ಮಾತುಗಳನ್ನು ನಮಗರಿವಿಲ್ಲದೆ

ಸಂಗೀತದ ಮೂಲಕ ಹೊರಹಾಕುವ ಪ್ರತಿ ವ್ಯಕ್ತಿಯು ಇನ್ನಿಲ್ಲದ ನಿರುಮ್ಮಳತೆಯನ್ನು ಅನುಭವಿಸುತ್ತಾರೆ....

ಆದ್ದರಿಂದ ತರಗತಿಯ ಕೋಣೆಯಲ್ಲಿ ಕಡ್ಡಾಯವಾಗಿ ದೊರೆಯುವ ಸಂಗೀತ ಶಿಕ್ಷಣದಿಂದ ನಿಮ್ಮ ಮಕ್ಕಳನ್ನು ವಂಚಿತಗೊಳಿಸದಿರಿ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,